VOLUME: 16 | 14 APRIL 2026 | ಮಂಗಳವಾರ | RS: 2 | PAGE: 06 ISSUE: 71 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಮರಾಠಿ, ತೆಲುಗು, ತಮಿಳು, ಹಿಂದಿ ಭಾಷೆಗಳಲ್ಲಿ ನಟಿಸುವ ಮೃಣಾಲ್ ಠಾಕೂರ್, ತೆಲುಗು ಪ್ರೇಕ್ಷಕರೊಟ್ಟಿಗೆ ವಿಶೇಷ ಬಾಂಧವ್ಯ ಹೊಂದಿದ್ದಾರೆ. ತೆಲುಗಿನಲ್ಲಿ ಕೆಲ ಅದ್ಭುತವಾದ ಪಾತ್ರಗಳು ಅವರಿಗೆ ಸಿಕ್ಕಿದ್ದು, ಹಾಗೆಯೇ ಅದ್ಭುತ ಪ್ರೀತಿ ಸಹ ತೆಲುಗು ಪ್ರೇಕ್ಷಕರಿಂದ ಸಿಕ್ಕಿದೆ. ಇದೀಗ ಮೃಣಾಲ್ ಠಾಕೂರ್ ನಟಿಸಿರುವ 'ಡಕೈತ್' ಸಿನಿಮಾ ಬಿಡುಗಡೆ ಆಗಿದ್ದು, ಸಿನಿಮಾಕ್ಕೆ ಸಂಬಂಧಿಸಿದ ಕಾರ್ಯಕ್ರಮದಲ್ಲಿ ಅಲ್ಲು ಅರ್ಜುನ್ ತಂದೆ ಅಲ್ಲು ಅರವಿಂದ್ ಆಡಿರುವ ಮಾತಿಗೆ ನಾಚಿ ನೀರಾಗಿದ್ದಾರೆ ನಟಿ.



BHARATHA SARATHI
KANNADA DAILY NEWS PAPER

# ಭಾರತ ಸಾರಥಿ

CALL 9740160669
RNI KARKAN2011/44806
prabhavaa.com
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



ಮೈಸೂರು ಮಹಾರಾಜರಾಗಿದ್ದ ನರಸಿಂಹರಾಜ ಒಡೆಯರ್ ಅವರ ಕಾಲದಲ್ಲಿ ಎಡಳ್ಳಿಯಾಗಿದ್ದ ಈ ಪ್ರದೇಶಕ್ಕೆ ನರಸಿಂಹರಾಜಪುರ ಎಂದು ನಾಮಕರಣವಾಯಿತು. ಈ ಭಾಗದ ಅಭಿವೃದ್ಧಿಯ ಉದ್ದೇಶದಿಂದ ಇಲ್ಲಿನ ಶಾಸಕರ ಒತ್ತಾಸೆಯಿಂದ ಇಂದು ಸೇತುವೆ ನಿರ್ಮಾಣ ಸಾಧ್ಯವಾಗಿದೆ. ಉಳಿದಂತೆ ರಸ್ತೆ ಅಗಲೀಕರಣ, ಬ್ಯಾರೇಜ್ ಕಂ ಬ್ರಿಡ್ಜ್ ನಿರ್ಮಾಣ, ಪ್ರವಾಸೋದ್ಯಮವೂ ಸೇರಿದಂತೆ ಹಲವು ಬೇಡಿಕೆಗಳ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳಲಿದೆ ಎಂದರು. ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರ ಸರ್ಕಾರವು 2023-24 ರ ಆಯವ್ಯಯದಲ್ಲಿ 5300 ಕೋಟಿಗಳನ್ನು ಘೋಷಿಸಿತು. ಆದರೆ ಇದುವರೆಗೆ ಈ ಅನುದಾನ ನೀಡಿಲ್ಲ. ಈ ಮೂಲಕ ರಾಜ್ಯದ ಜನರಿಗೆ ಕೇಂದ್ರ ದ್ರೋಹವೆಸಗಿದೆ ಎಂದರು.

# ಗ್ಯಾರಂಟಿಗಳೂ ಅಭಿವೃದ್ಧಿಯೇ: ಸಿಎಂ

ಚಿಕ್ಕಮಗಳೂರು ಜನಕಲ್ಯಾಣಕ್ಕೆ ಒತ್ತಾಸೆಯಾಗಿರುವ ಸರ್ಕಾರದ ಗ್ಯಾರಂಟಿ ಯೋಜನೆಗಳೂ ಒಂದು ವಿಧದ ಅಭಿವೃದ್ಧಿಯಾಗಿದ್ದು, ಗ್ಯಾರಂಟಿಗಳ ನಡುವೆಯೂ ರಾಜ್ಯದ ಆರ್ಥಿಕ ಸ್ಥಿತಿ ಕೇಂದ್ರಕ್ಕಿಂತ ಉತ್ತಮವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಚಿಕ್ಕಮಗಳೂರಿನ ಹಂದೂರು ಗ್ರಾಮದಿಂದ ನರಸಿಂಹರಾಜಪುರಕ್ಕೆ ಸಂಪರ್ಕಿಸುವ ಭದ್ರಾ ಹಿನ್ನೀರಿನಲ್ಲಿ ನಿರ್ಮಿಸಿರುವ ಸೇತುವೆ ಮತ್ತು ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳ ಉದ್ಘಾಟನೆ ಶಂಕುಸ್ಥಾಪನೆ ಹಾಗೂ ಸವಲತ್ತುಗಳ ವಿತರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

36 ಕೋಟಿ ರೂ.ಗಳ ವೆಚ್ಚದಲ್ಲಿ ನಿರ್ಮಿಸಲಾಗಿರುವ ಸೇತುವೆಯೂ ಸೇರಿದಂತೆ ಹಲವು ಅಭಿವೃದ್ಧಿ ಕಾರ್ಯಕ್ರಮಗಳಿಗೆ ಇಂದು ಚಾಲನೆ ನೀಡಲಾಗಿದೆ. ವಿರೋಧಪಕ್ಷದವರು ಅಭಿವೃದ್ಧಿ ಕೆಲಸಗಳಿಗೆ ಹಣವಿಲ್ಲ , ಗ್ಯಾರಂಟಿಗಳ ನಂತರ ಖಜಾನೆ ಖಾಲಿಯಾಗಿವೆ, ಅಭಿವೃದ್ಧಿ ಶೂನ್ಯ ಎಂದು ಟೀಕಿಸುತ್ತಾರೆ. ಆದರೆ ಗ್ಯಾರಂಟಿಗಳ ಜೊತೆಗೆ ಅಭಿವೃದ್ಧಿಯನ್ನೂ ನಮ್ಮ ಸರ್ಕಾರ ಸಾಧ್ಯವಾಗಿಸಿದೆ ಎಂದರು.

ಗ್ಯಾರಂಟಿಗಳೂ ಒಂದು ವಿಧದ ಅಭಿವೃದ್ಧಿಯಾಗಿದೆ. ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ರವರು ರಾಜಕೀಯ ಸ್ವಾತಂತ್ರ್ಯ ಯಶಸ್ವಿಯಾಗಲು ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಸ್ವಾತಂತ್ರ್ಯ ಅತ್ಯಗತ್ಯ ಎಂದಿದ್ದರು. ವಿರೋಧಪಕ್ಷದವರು ಅಂಬೇಡ್ಕರ್ ರವರ ಈ ಚಿಂತನೆಯ ಬಗ್ಗೆ ಅರಿವು ಮೂಡಿಸಿಕೊಳ್ಳಬೇಕು ಎಂದರು.



ಮೈಸೂರು ಮಹಾರಾಜರಾಗಿದ್ದ ನರಸಿಂಹರಾಜ ಒಡೆಯರ್ ಅವರ ಕಾಲದಲ್ಲಿ ಎಡಳ್ಳಿಯಾಗಿದ್ದ ಈ ಪ್ರದೇಶಕ್ಕೆ ನರಸಿಂಹರಾಜಪುರ ಎಂದು ನಾಮಕರಣವಾಯಿತು. ಈ ಭಾಗದ ಅಭಿವೃದ್ಧಿಯ ಉದ್ದೇಶದಿಂದ ಇಲ್ಲಿನ ಶಾಸಕರ ಒತ್ತಾಸೆಯಿಂದ ಇಂದು ಸೇತುವೆ ನಿರ್ಮಾಣ ಸಾಧ್ಯವಾಗಿದೆ. ಉಳಿದಂತೆ ರಸ್ತೆ ಅಗಲೀಕರಣ, ಬ್ಯಾರೇಜ್ ಕಂ ಬ್ರಿಡ್ಜ್ ನಿರ್ಮಾಣ, ಪ್ರವಾಸೋದ್ಯಮವೂ ಸೇರಿದಂತೆ ಹಲವು ಬೇಡಿಕೆಗಳ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳಲಿದೆ ಎಂದರು.

ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರ ಸರ್ಕಾರವು 2023–24 ರ ಆಯವ್ಯಯದಲ್ಲಿ 5300 ಕೋಟಿಗಳನ್ನು ಘೋಷಿಸಿತು. ಆದರೆ ಇದುವರೆಗೆ ಈ ಅನುದಾನ ನೀಡಿಲ್ಲ. ಈ ಮೂಲಕ ರಾಜ್ಯದ ಜನರಿಗೆ ಕೇಂದ್ರ ದ್ರೋಹವೆಸಗಿದೆ ಎಂದರು.

ಕಾಂಗ್ರೆಸ್ ಸರ್ಕಾರವೊಂದೇ ಕೊಟ್ಟ ಮಾತಿನಂತೆ ನಡೆಯುವ ಸರ್ಕಾರವಾಗಿದೆ ಎಂದರು. ನಮ್ಮ ಸರ್ಕಾರದಿಂದ ಗ್ಯಾರಂಟಿಗಳಿಗೆ ಇದುವರೆಗೆ 1.30 ಲಕ್ಷ ಕೋಟಿಗಳನ್ನು ವೆಚ್ಚ ಮಾಡಲಾಗಿದೆ. ರಾಜ್ಯದ ಗ್ಯಾರಂಟಿಗಳನ್ನು ಟೀಕಿಸುವ ಬಿಜೆಪಿಯವರು ಇತರೆ ರಾಜ್ಯಗಳಲ್ಲಿ ಅವುಗಳನ್ನೇ ಅನುಸರಿಸುತ್ತಿದ್ದಾರೆ. ಕೇಂದ್ರಕ್ಕಿಂತ ರಾಜ್ಯದ ಆರ್ಥಿಕ ಸ್ಥಿತಿ ಉತ್ತಮವಾಗಿದೆ ಎಂದರು.


ಕೇಂದ್ರದ ಜಿಡಿಪಿ ದರ 7.14 ರಷ್ಟಿದ್ದರೆ, ರಾಜ್ಯದ ಜಿಡಿಪಿ 8.1 ರಷ್ಟಿದೆ. ದೇಶದಲ್ಲಿ 53.11 ಲಕ್ಷ ಕೋಟಿಗಳಿದ್ದ ಸಾಲದ ಮೊತ್ತ, ಪ್ರಸ್ತುತ ಪ್ರಧಾನಿ ಮೋದಿಯವರ ಅಧಿಕಾರಾವಧಿಯಲ್ಲಿ 218 ಲಕ್ಷ ಕೋಟಿರೂ.ಗೆ ತಲುಪಿದೆ. ರಾಜ್ಯದ ಆರ್ಥಿಕ ಬೆಳವಣಿಗೆ ಕೇಂದ್ರಕ್ಕಿಂತ ಗಣನೀಯವಾಗಿ ಹೆಚ್ಚಿದೆ. ಕರ್ನಾಟಕದ ಆರ್ಥಿಕ ಸ್ಥಿತಿಯು ಸದೃಢವಾಗಿದ್ದು, ಆರ್ಥಿಕ ಹೊಣೆಗಾರಿಕೆ ಕಾಯ್ದೆಯ ಮಾನದಂಡಗಳಿಗೆ ಪೂರಕವಾಗಿದೆ. ಆದರೆ ರಾಜ್ಯದ ಆರ್ಥಿಕ ಪರಿಸ್ಥಿತಿಯ ಬಗ್ಗೆ ಅಪಪ್ರಚಾರ ನಡೆಸುವ ಬಿಜೆಪಿಯವರಿಗೆ ಸುಳ್ಳೇ ಮನೆದೇವರಾಗಿದೆ ಎಂದರು.

ಬಿಜೆಪಿಯ ರಾಜ್ಯಾಧ್ಯಕ್ಷ ವಿಜಯೇಂದ್ರರವರು ರಾಜ್ಯದ ಆರ್ಥಿಕತೆ ವಸ್ತುಸ್ಥಿತಿಯ ಬಗ್ಗೆ ಶ್ವೇತಪತ್ರ ಹೊರಡಿಸಿ ಎಂದು ಟೀಕಿಸಿದ್ದಾರೆ. ಅವರು ಬಜೆಟ್ ನ ಅಂಶಗಳ ಬಗ್ಗೆ ಮನನ ಮಾಡಿಕೊಳ್ಳದೇ, ಕೇವಲ ಪ್ರಚಾರಕ್ಕಾಗಿ ಹೇಳಿಕೆ ನೀಡುತ್ತಿದ್ದಾರೆ.

15ನೇ ಹಣಕಾಸಿನ ಆಯೋಗದಲ್ಲಿ ಶಿಫಾರಸ್ಸು ಮಾಡಿದ್ದ ಅನುದಾನವನ್ನು ಕೇಂದ್ರ ನೀಡದೇ, ರಾಜ್ಯದ ಜನರಿಗೆ ಅನ್ಯಾಯ ಮಾಡಲಾಗಿದೆ. ಬಿಜೆಪಿಯ ಪ್ರಧಾನಿ ಮೋದಿಯವರು ನೀಡಿದ ಯಾವುದೇ ಭರವಸೆಗಳನ್ನು ಈಡೇರಿಸಿಲ್ಲ. ಅವರ ಒಳ್ಳೆಯ ದಿನಗಳು ಬರಲೇ ಇಲ್ಲ. ಆದರೆ ನಮ್ಮ ಸರ್ಕಾರ ಗ್ಯಾರಂಟಿಗಳನ್ನು ಅನುಷ್ಠಾನಗೊಳಿಸಿ, ನುಡಿದಂತೆ ನಡೆದಿದೆ. ಜನರ ದಾರಿತಪ್ಪಿಸುವ ಬಿಜೆಪಿಯನ್ನು ನಂಬಬಾರದು ಎಂದರು.

# 'ಭವಿಷ್ಯ ಪಕ್ಷದಲ್ಲಿದೆಯೇ ಹೊರತು ಮಾಧ್ಯಮಗಳ ಮುಂದೆ ಅಲ್ಲ'

ಬೆಂಗಳೂರು: "ಪಕ್ಷದ ಶಾಸಕರು ಹೈಕಮಾಂಡ್ ವರಿಷ್ಠರನ್ನು ಭೇಟಿ ಮಾಡುವುದರಲ್ಲಿ ತಪ್ಪೇನಿಲ್ಲ. ಅನವಶ್ಯಕವಾಗಿ ಏನೇನೋ ಹೇಳಿಕೆ ನೀಡಿದರೆ ಶಿಸ್ತು ಕ್ರಮ ಜರುಗಿಸಲಾಗುವುದು" ಎಂದು ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಎಚ್ಚರಿಕೆ ನೀಡಿದರು.



ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಅವರ ನಿವಾಸದ ಬಳಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಸೋಮವಾರ ಪ್ರತಿಕ್ರಿಯೆ ನೀಡಿದರು.

25 ಜನ ಶಾಸಕರು ದೆಹಲಿಗೆ ತೆರಳಿರುವ ಬಗ್ಗೆ ಕೇಳಿದಾಗ, "ಪಕ್ಷದ ಶಿಸ್ತನ್ನು ಎಲ್ಲಾ ಶಾಸಕರು ಕಾಪಾಡಬೇಕು. ಪಕ್ಷಕ್ಕೆ ಗೌರವ ನೀಡಬೇಕು. ಮಾಧ್ಯಮಗಳ ಮುಂದೆ ಪಕ್ಷದ ಗೌರವವನ್ನು ಹಾಳು ಮಾಡಬಾರದು. ಮುಖ್ಯಮಂತ್ರಿಗಳೂ ಸಹ ಈಗಾಗಲೇ ಈ ವಿಚಾರದ ಬಗ್ಗೆ ಹೇಳಿದ್ದಾರೆ. ಮುಂದಕ್ಕೆ ಎಲ್ಲರ ಭವಿಷ್ಯ ಪಕ್ಷದಲ್ಲಿದೆಯೇ ಹೊರತು ಮಾಧ್ಯಮಗಳಲ್ಲಿ ಇಲ್ಲ" ಎಂದರು.

ಶಾಸಕರು ದೆಹಲಿಗೆ ತೆರಳುವ ಮುಂಚೆ ನಿಮ್ಮ ಬಳಿ ಚರ್ಚೆ ಮಾಡಿದ್ದಾರೆಯೇ ಎಂದು ಕೇಳಿದಾಗ, "ಒಂದಷ್ಟು ಜನ ಮಾಡಿದ್ದಾರೆ. ಹೈಕಮಾಂಡ್ ಬಳಿ ಸಚಿವ ಸ್ಥಾನ ಕೇಳುವುದರಲ್ಲಿ ತಪ್ಪೇನಿಲ್ಲ. ಮೊದಲ ಹಾಗೂ ಎರಡನೇ ಬಾರಿ ಗೆದ್ದಿರುವವರೂ ಮಂತ್ರಿಗಳಾಗಬಹುದು. ಈ ಹಿಂದೆ ಈ ರೀತಿ ನಡೆದಿದೆ. ಆದರೆ ಇದು ಸಮಯವಲ್ಲ. ಇನ್ನೂ ಚುನಾವಣೆಗಳು ನಡೆಯುತ್ತಿವೆ. ಒಂದಷ್ಟು ಜನ ತಮಿಳುನಾಡಿಗೆ ತೆರಳಿದ್ದಾರೆ. ಮೊದಲು ಚುನಾವಣೆ ಆಗಲಿ, ಆನಂತರ ಇದರ ಬಗ್ಗೆ ಯೋಚಿಸೋಣ" ಎಂದರು. ಮಲ್ಲಿಕಾರ್ಜುನ ಖರ್ಗೆ ಅವರ ಭೇಟಿ ಬಗ್ಗೆ ಕೇಳಿದಾಗ, "ಪಕ್ಷದಿಂದ ತಮಿಳುನಾಡಿಗೆ ತೆರಳುವಂತೆ ಸೂಚನೆ ನೀಡಿದ್ದರು. ಅಲ್ಲಿಗೆ ಹೋಗಿ ಬಂದಿದ್ದೇನೆ. ಮತ್ತೆ ತೆರಳಬೇಕಾಗಿದೆ. ಆ ಬಗ್ಗೆ ಎಐಸಿಸಿ ಅಧ್ಯಕ್ಷರಿಗೆ ವರದಿ ನೀಡಬೇಕಿತ್ತು. ಭೇಟಿ ಮಾಡಿ ವರದಿ ಮಾಡಿದ್ದೇನೆ" ಎಂದು ತಿಳಿಸಿದರು.

# ಸಿಗಲಿದೆ 15 ಸಾವಿರಕ್ಕೂ ಹೆಚ್ಚು ಉದ್ಯೋಗ

ಬೆಂಗಳೂರು: ರಾಜ್ಯದಲ್ಲಿ ಕೈಗಾರಿಕಾ ಬೆಳವಣಿಗೆಗೆ ಮತ್ತಷ್ಟು ವೇಗ ನೀಡಲು ಮತ್ತು ಹೊಸ ಉದ್ಯೋಗಾವಕಾಶಗಳನ್ನು ಸೃಷ್ಟಿಸಲು ರಾಜ್ಯ ಉನ್ನತ ಮಟ್ಟದ ಅನುಮೋದನೆ ನೀಡಿಕೆ ಸಮಿತಿಯ 67ನೇ ಸಭೆಯಲ್ಲಿ ಒಟ್ಟು ರೂ.18,430.44 ಕೋಟಿ ಬಂಡವಾಳ ಹೂಡಿಕೆಗೆ ಒಪ್ಪಿಗೆ ನೀಡಲಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಸೋಮವಾರ ಕೃಷ್ಣಾದಲ್ಲಿ ನಡೆದ ಸಭೆಯಲ್ಲಿ 11 ಹೊಸ ಯೋಜನೆಗಳು ಹಾಗೂ 6 ಹೆಚ್ಚುವರಿ ಬಂಡವಾಳ ಹೂಡಿಕೆ ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ. ಈ ಯೋಜನೆಗಳಿಂದ ರಾಜ್ಯದಲ್ಲಿ ಹೊಸದಾಗಿ 15,032 ಉದ್ಯೋಗಾವಕಾಶಗಳು ಸೃಷ್ಟಿಯಾಗಲಿವೆ.

ಹೊಸ ಹಾಗೂ ವಿಸ್ತರಣೆಯ 11 ಯೋಜನೆಗಳಿಗೆ ರೂ.14,906.90 ಕೋಟಿ ಮತ್ತು ಹೆಚ್ಚುವರಿ 6 ಯೋಜನೆಗಳಿಗೆ ರೂ.3,523.54 ಕೋಟಿ ಹೂಡಿಕೆಗೆ ಸಮ್ಮತಿ ನೀಡಲಾಗಿದೆ. ಒಟ್ಟು 17 ಯೋಜನೆಗಳಲ್ಲಿ ವಾಹನ, ವೈಮಾನಿಕ, ಔಷಧಿ, ಜವಳಿ, ಉಕ್ಕು, ಅರ್ಧವಾಹಕ ಹಾಗೂ ಸಕ್ಕರೆ ತಯಾರಿಕಾ ವಲಯಗಳು ಸೇರಿವೆ ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ.

ಈ ಯೋಜನೆಗಳು ಬಾಗಲಕೋಟೆ, ಬೀದರ್, ಬೆಳಗಾವಿ, ಬಳ್ಳಾರಿ, ಕೋಲಾರ, ಚಿಕ್ಕಬಳ್ಳಾಪುರ, ದಕ್ಷಿಣ ಕನ್ನಡ, ತುಮಕೂರು, ಚಾಮರಾಜನಗರ, ಬೆಂಗಳೂರು ಗ್ರಾಮಾಂತರ ಮತ್ತು ಬೆಂಗಳೂರು ಜಿಲ್ಲೆಗಳಲ್ಲಿ ಜಾರಿಯಾಗಲಿವೆ.

ಬಳ್ಳಾರಿ ಜಿಲ್ಲೆಯಲ್ಲಿ ಜೆಎಸ್‌ಡಬ್ಲ್ಯು ವಿಜಯನಗರ ಮೆಟ್ಯಾಲಿಕ್ಸ್ ಲಿಮಿಟೆಡ್ ವತಿಯಿಂದ ರೂ.4,600 ಕೋಟಿ ಹೂಡಿಕೆ, ದಕ್ಷಿಣ ಕನ್ನಡದಲ್ಲಿ ಎನರ್ಜಿ ಟ್ರಾನ್ಸಿಷನ್ ಯೋಜನೆಗೆ ರೂ.1,600 ಕೋಟಿ ಮತ್ತು ಬೆಂಗಳೂರು ಗ್ರಾಮಾಂತರದಲ್ಲಿ ವೋಲ್ವೊ ಗ್ರೂಪ್ ಇಂಡಿಯಾ ವತಿಯಿಂದ ರೂ.1,500 ಕೋಟಿ ಹೂಡಿಕೆ ಪ್ರಮುಖವಾಗಿವೆ. ಹೆಚ್ಚುವರಿ ಬಂಡವಾಳ ಹೂಡಿಕೆಗಳಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿಪ್ರೊ ಗ್ಲೋಬಲ್ ಎಂಜಿನಿಯರಿಂಗ್ ಸಂಸ್ಥೆಯ ರೂ.1,397 ಕೋಟಿ ಹಾಗೂ ಎಂಎಸ್‌ಪಿಎಲ್ ಲಿಮಿಟೆಡ್ ಸಂಸ್ಥೆಯ ರೂ.884.25 ಕೋಟಿ ಹೂಡಿಕೆ ಗಮನಾರ್ಹವಾಗಿವೆ. ರಾಜ್ಯದ ಕೈಗಾರಿಕಾ ವಿಸ್ತರಣೆ ಮತ್ತು ಹೂಡಿಕೆ ಆಕರ್ಷಣೆಗೆ ಈ ನಿರ್ಧಾರ ಮಹತ್ವದ ಹೆಜ್ಜೆಯಾಗಿ ಪರಿಣಮಿಸಿದ್ದು, ವಿವಿಧ ವಲಯಗಳಲ್ಲಿ ಅಭಿವೃದ್ಧಿಗೆ ಮತ್ತಷ್ಟು ಉತ್ತೇಜನ ನೀಡಲಿದೆ.

# 'ಭಾರತದ ಹಡಗುಗಳಿಗೆ ಟೋಲ್ ಇಲ್ಲ'

ಟೆಹರಾನ್: ಅಮೆರಿಕ ಇರಾನ್ ಬಂದರುಗಳನ್ನು ನಿಯಂತ್ರಣಕ್ಕೆ ತೆಗೆದುಕೊಳ್ಳುವ ಸಾಧ್ಯತೆ ಹೆಚ್ಚಾಗಿದ್ದು, ಈ ಪ್ರದೇಶದಲ್ಲಿ ಮತ್ತೆ ಉದ್ವಿಗ್ನತೆ ಹೆಚ್ಚಾಗುತ್ತಿರುವಂತೆಯೇ ಹಾರ್ಮುಜ್ ಜಲಸಂಧಿಯ ಮೂಲಕ ಸಾಗುವ ಭಾರತೀಯ ಟ್ಯಾಂಕರ್‌ಗಳಿಗೆ ಯಾವುದೇ ಸುಂಕವನ್ನು ವಿಧಿಸುವುದಿಲ್ಲ ಎಂದು ಇರಾನ್ ಭಾರತಕ್ಕೆ ಮತ್ತೆ ಭರವಸೆ ನೀಡಿದೆ.



ಉಭಯ ರಾಷ್ಟ್ರಗಳು ಬಲವಾದ ಸಂಬಂಧ ಹೊಂದಿದ್ದು, ಸಾಮಾನ್ಯ ಹಿತಾಸಕ್ತಿ ಹೊಂದಿವೆ ಎಂದು ಭಾರತದಲ್ಲಿರುವ ಇರಾನ್ ರಾಯಭಾರಿ ಹೇಳಿದ್ದು, ಹಾರ್ಮುಜ್ ಜಲಸಂಧಿಯಲ್ಲಿ ಭಾರತೀಯ ಹಡಗುಗಳ ಸಂಚಾರಕ್ಕೆ ನಿರಂತರ ಸಹಕಾರವನ್ನು ಸೂಚಿಸಿದ್ದಾರೆ.

ಅಮೆರಿಕದ ದಿಗ್ಬಂಧನದ ಬೆದರಿಕೆ ನಡುವೆ ಈ ಪ್ರದೇಶದಲ್ಲಿ ಅನಿಶ್ಚಿತತೆ ಹೆಚ್ಚಾಗುತ್ತಿರುವಂತೆಯೇ ಈ ಭರವಸೆ ನೀಡಿದ್ದಾರೆ. ಹಾರ್ಮುಜ್ ಜಲಸಂಧಿ ಮೂಲಕ ಹಾದುಹೋಗುವ ಭಾರತೀಯ ಟ್ಯಾಂಕರ್‌ಗಳು ಟೋಲ್ ಪಾವತಿಸುವ ಅಗತ್ಯವಿಲ್ಲ ಎಂದು ಭಾರತದಲ್ಲಿ ಇರಾನ್‌ನ ರಾಯಭಾರಿ ಮೊಹಮ್ಮದ್ ಫತಾಲಿ ಹೇಳಿದ್ದಾರೆ.

ಟೆಹ್ರಾನ್ ನವದೆಹಲಿಯೊಂದಿಗಿನ ತನ್ನ ಸಂಬಂಧವನ್ನು ಗೌರವಿಸುತ್ತದೆ ಮತ್ತು ಎರಡೂ ದೇಶಗಳು ಪರಸ್ಪರ ಹಿತಾಸಕ್ತಿಗಳನ್ನು ಮತ್ತು ಸಾಮಾನ್ಯ ಭವಿಷ್ಯವನ್ನು ಹಂಚಿಕೊಳ್ಳುತ್ತದೆ ಎಂದು ಅವರು ಒತ್ತಿ ಹೇಳಿದರು.

ಕಡಲ ಸಂಚಾರಕ್ಕೆ ಸಂಬಂಧಿಸಿದಂತೆ ಇರಾನ್ ಭಾರತ ಸರ್ಕಾರದೊಂದಿಗೆ ನಿಕಟ ಸಂಪರ್ಕದಲ್ಲಿದೆ. ಆಯಕಟ್ಟಿನ ಪ್ರಮುಖ ಜಲಮಾರ್ಗದ ಮೂಲಕ ಭಾರತೀಯ ಹಡಗುಗಳ ಸುಗಮ ಹಾದಿ ಖಾತ್ರಿಗೆ ನೆರವಾಗಲು ಸಿದ್ಧವಾಗಿದೆ ಎಂದು ಫಥಾಲಿ ಹೇಳಿದ್ದಾರೆ.

ಹಾರ್ಮುಜ್ ಜಲಸಂಧಿಯನ್ನು ಮುಚ್ಚುವ ಅಥವಾ ನಿರ್ಬಂಧಿಸುವ ಯಾವುದೇ ಪ್ರಯತ್ನವು ಜಾಗತಿಕ ಪರಿಣಾಮಗಳೊಂದಿಗೆ ಪ್ರಮುಖ ಬಿಕ್ಕಟ್ಟಿಗೆ ಕಾರಣವಾಗುತ್ತದೆ ಎಂದು ವಿಶ್ಲೇಷಕರು ಎಚ್ಚರಿಸಿದ್ದಾರೆ. ಈ ಜಲ ಮಾರ್ಗವು ಪ್ರಪಂಚದ ತೈಲ ಮತ್ತು ಅನಿಲ ಸಾಗಣೆಯಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ.

# ಹಿಂದಿಗೆ ಗ್ರೇಡ್ ವಿಚಾರ: ಕರಡು ಅಧಿಸೂಚನೆ ಪ್ರಕಟ

ಬೆಂಗಳೂರು: ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ತೃತೀಯ ಭಾಷೆ ಮುಖ್ಯವಾಗಿ ಹಿಂದಿ ವಿಷಯಕ್ಕೆ ಅಂಕಗಳ ಬದಲು ಗೇಡ್ ನೀಡುವ ನಿರ್ಧಾರ ಕುರಿತು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ತನ್ನ ಅಧಿಕೃತ ವೆಬ್‌ಸೈಟ್‌ನಲ್ಲಿ ಕರಡು ಅಧಿಸೂಚನೆ ಪ್ರಕಟಿಸಿದೆ.

ಈ ಕುರಿತು ಸಾರ್ವಜನಿಕರಿಂದ ಆಕ್ಷೇಪಣೆಗಳು ಮತ್ತು ಸಲಹೆಗಳನ್ನು ಏಳು ದಿನಗಳೊಳಗೆ ಆಹ್ವಾನಿಸಲಾಗಿದೆ. ಈಗಾಗಲೇ ಎಸ್‌ಎಸ್‌ಎಲ್‌ಸಿ ಉತ್ತರಪತ್ರಿಕೆಗಳ ಮೌಲ್ಯಮಾಪನ ಪ್ರಾರಂಭವಾಗಿದ್ದು, ಫಲಿತಾಂಶವನ್ನು ಏ.24 ರಂದು ಪ್ರಕಟಿಸುವ ಸಾಧ್ಯತೆ ಇದೆ.

ಕರಡು ಅಧಿಸೂಚನೆಯ ಪ್ರಕಾರ, ತೃತೀಯ ಭಾಷೆ ಹಾಗೂ ಎನ್‌ಎಸ್‌ಕ್ಯೂಎಫ್ (ರಾಷ್ಟ್ರೀಯ ಕೌಶಲ್ಯ ಅರ್ಹತಾ ಚೌಕಟ್ಟು) ವಿಷಯಗಳಲ್ಲಿ ವಿದ್ಯಾರ್ಥಿಗಳು ಪಡೆದ ಅಂಕಗಳ ಆಧಾರದಲ್ಲಿ ಎ, ಬಿ ಮತ್ತು ಸಿ ಗ್ರೇಡ್‌ಗಳನ್ನು ನೀಡಲಾಗುತ್ತದೆ.

ಈ ಗ್ರೇಡ್‌ಗಳು ವಿದ್ಯಾರ್ಥಿಗಳ ಪಾಸ್ ಅಥವಾ ಫೇಲ್ ಬಗ್ಗೆ ಯಾವುದೇ ಸೂಚನೆ ನೀಡುವುದಿಲ್ಲ. ಅಂದರೆ, ಎ ಗ್ರೇಡ್ ಪಡೆದ ವಿದ್ಯಾರ್ಥಿಯೂ ಫೇಲ್ ಆಗುವುದಿಲ್ಲ. ಇದು ಕೇವಲ ಕಾರ್ಯಕ್ಷಮತೆಯ ಹಂತವನ್ನು ಸೂಚಿಸುತ್ತದೆ.

ಆದರೆ ಅರ್ಜಿದಾರರು ಸರ್ಕಾರದ ಆದೇಶದ ನಕಲು ಅಥವಾ ಅಧಿಕೃತ ದಾಖಲೆ ಒದಗಿಸದೆ, ಕೇವಲ ಪತ್ರಿಕೆಗಳ ವರದಿ ಆಧರಿಸಿ ಅರ್ಜಿ ಸಲ್ಲಿಸಿದ್ದರು. ಹೈಕೋರ್ಟ್ ಈ ನಿಲುವನ್ನು ತೀವ್ರವಾಗಿ ಖಂಡಿಸಿ, ಅರ್ಜಿಯನ್ನು ವಜಾಗೊಳಿಸಿತು ಮತ್ತು ಅರ್ಜಿದಾರರಿಗೆ 1,00,000 (ಒಂದು ಲಕ್ಷ) ರೂಪಾಯಿ ದಂಡ ವಿಧಿಸಿತು. ದಂಡವನ್ನು ರಾಜ್ಯ ಕಾನೂನು ಸೇವಾ ಪ್ರಾಧಿಕಾರಕ್ಕೆ ಪಾವತಿಸುವಂತೆ ಸೂಚಿಸಲಾಯಿತು.

ಕರಡು ಅಧಿಸೂಚನೆ ಕುರಿತು ಯಾರಾದರೂ ಆಕ್ಷೇಪಣೆ ಅಥವಾ ಸಲಹೆ ಹೊಂದಿದ್ದಲ್ಲಿ, ಏಳು ದಿನಗಳೊಳಗಾಗಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳಿಗೆ ಸಲ್ಲಿಸಬಹುದು. ಅಂತಿಮ ನಿರ್ಧಾರವನ್ನು ಸಾರ್ವಜನಿಕರ ಪ್ರತಿಕ್ರಿಯೆ ನಂತರ ಕೈಗೊಳ್ಳಲಾಗುವುದು. ಈ ನಿರ್ಧಾರದ ಬೆಂಬಲಿಗರು ಹಿಂದಿ ತೃತೀಯ ಭಾಷೆಯಾಗಿರುವುದರಿಂದ ಅದಕ್ಕೆ ಹೆಚ್ಚಿನ ಒತ್ತಡ ಬೇಡ, ಗ್ರೇಡ್ ಪದ್ಧತಿಯಿಂದ ವಿದ್ಯಾರ್ಥಿಗಳ ಮಾನಸಿಕ ಒತ್ತಡ ಕಡಿಮೆಯಾಗುತ್ತದೆ ಎನ್ನುತ್ತಾರೆ. ವಿರೋಧಿಗಳು ಭವಿಷ್ಯದಲ್ಲಿ ಉನ್ನತ ಶಿಕ್ಷಣ ಮತ್ತು ಉದ್ಯೋಗಾವಕಾಶಗಳಿಗೆ ಹಿಂದಿ ಪ್ರಾವೀಣ್ಯ ಅಗತ್ಯ. ಗ್ರೇಡ್‌ಗಳಿಂದ ಸ್ಪರ್ಧಾತಕ ಅಂಕ ಸಿಗದು ಎಂದು ಆಕ್ಷೇಪಿಸುತ್ತಿದ್ದಾರೆ.

# ಲೈಂಗಿಕ ದೌರ್ಜನ್ಯ: ಯೂ ಟರ್ನ್ ಹೊಡೆದ ಮಹಿಳೆ

ಬೆಂಗಳೂರು: ಬಾಗಲಕೋಟೆ ಜಿಲ್ಲೆ ಕೂಡಲಸಂಗಮ ಪಂಚಮಸಾಲಿ ಪೀಠದ ಬಸವ ಜಯಮೃತ್ಯುಂಜಯ ಸ್ವಾಮೀಜಿ ವಿರುದ್ಧ ಲೈಂಗಿಕ ದೌರ್ಜನ್ಯ ಮತ್ತು ಬ್ಲಾಕ್‌ಮೇಲ್ ಆರೋಪ ಮಾಡಿದ್ದ ಮಹಿಳೆ ಈಗ ಉಲ್ಟಾ ಹೊಡೆದಿದ್ದಾರೆ.

ತಮ್ಮ ಮೇಲೆ ಸ್ವಾಮೀಜಿ ಲೈಂಗಿಕ ದೌರ್ಜನ್ಯ ಮತ್ತು ಬ್ಲಾಕ್‌ಮೇಲ್ ಮಾಡುತ್ತಿದ್ದಾರೆಂದು ಆರೋಪಿಸಿ ಸಂತ್ರಸ್ತ ಮಹಿಳೆ ಕೆಲವು ದಿನಗಳ ಹಿಂದೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಗೃಹಸಚಿವ ಡಾ.ಜಿ.ಪರಮೇಶ್ವರ್, ಮಹಿಳಾ ಆಯೋಗ ಮತ್ತು ಮಾನವ ಹಕ್ಕುಗಳ ಆಯೋಗಕ್ಕೂ ದೂರು ಕೊಟ್ಟಿದ್ದರು.

ಇದೀಗ ಉಲ್ಟಾ ಹೊಡೆದಿರುವ ಮಹಿಳೆ, ನಾನು ಯಾರೊಬ್ಬರಿಗೂ ದೂರ ಕೊಟ್ಟಿಲ್ಲ. ನನ್ನ ಮೇಲೆ ಮಾಡಿರುವ ಆರೋಪಗಳು ಸತ್ಯಕ್ಕೆ ದೂರವಾದವು. ಸ್ವಾಮೀಜಿಯವರ ಮೇಲೆ ನನಗೆ ಅಪಾರವಾದ ಗೌರವವಿದೆ ಎಂದು ವಿಡಿಯೋ ಸಂದೇಶದಲ್ಲಿ ಹೇಳಿದ್ದಾರೆ.

ನನ್ನ ಮೇಲೆ ಜಯಮೃತ್ಯುಂಜಯ ಸ್ವಾಮೀಜಿ ಯಾವುದೇ ಲೈಂಗಿಕ ದೌರ್ಜನ್ಯ ಎಸಗಿಲ್ಲ. ಅಲ್ಲದೆ ನಾನು ಹಣಕ್ಕಾಗಿ ಬ್ಲಾಕ್‌ಮೇಲ್ ಮಾಡುತ್ತೇನೆಂಬ ಆರೋಪ ಕೇಳಿ ಮನಸ್ಸಿಗೆ ನೋವಾಗಿದೆ. ನಾವು ಹಣ ಕೇಳುವ ದುಸ್ಥಿತಿಗೆ ಬಂದಿಲ್ಲ. ಇದರ ಹಿಂದೆ ಯಾರಿದ್ದಾರೋ ಎಂಬುದು ಗೊತ್ತೂ ಇಲ್ಲ ಎಂದು ವದಂತಿಗಳಿಗೆ ತೆರೆ ಎಳೆಯುವ ಪ್ರಯತ್ನ ಮಾಡಿದ್ದಾರೆ.

ಹೀಗೆ ಪರಿಚಯವಾಗಿದ್ದ ಸ್ವಾಮೀಜಿಯವರು ಅವರು ನನ್ನನ್ನು ಮಠಕ್ಕೆ ಕರೆಸಿ ಪ್ರಸಾದ ಕೊಡುತ್ತೇನೆಂದು ಹೇಳಿ ನನ್ನ ವಿಶ್ವಾಸವನ್ನು ದುರುಪಯೋಗ ಮಾಡಿಕೊಂಡು ನನ್ನೊಂದಿಗೆ ಮಾತನಾಡುತ್ತಾ ಅಸಭ್ಯವಾದ ಪದಗಳನ್ನು ಬಳಸಿ, ಮೈ ಕೈಯನ್ನು ಮುಟ್ಟುತ್ತ ನನ್ನೊಂದಿಗೆ ದೈಹಿಕವಾಗಿ ತಪ್ಪಾಗಿ ವರ್ತಿಸಿದ್ದು, ಆ ಸಮಯದಲ್ಲಿ ನನ್ನ ತಿಳಿವಳಿಕೆಯಿಲ್ಲದೆ ನನ್ನ ಮೇಲೆ ಅವರು ನಡೆಸಿರುವ ಲೈಂಗಿಕ ದೌರ್ಜನ್ಯದ ಖಾಸಗಿ ವಿಡಿಯೋ ಮಾಡಿಕೊಂಡು ನನ್ನನ್ನು ಬ್ಲಾಕ್ ಮೇಲ್ ಮಾಡುತ್ತಿದೆ.

# ಸಚಿವ ಸ್ಥಾನಕ್ಕೆ ಪಟ್ಟು.., ಕಾಂಗ್ರೆಸ್‌ನ ಹಿರಿಯರು ದೆಹಲಿಯಲ್ಲಿ

ಬೆಂಗಳೂರು: ರಾಜ್ಯ ಕಾಂಗ್ರೆಸ್‌ನಲ್ಲಿ ಸಚಿವ ಸಂಪುಟ ಪುನರ್‌ರಚನೆಗೆ ಸಂಬಂಧಿಸಿದ ಚಟುವಟಿಕೆಗಳು ಜೋರಾಗಿದ್ದು, ಹಿರಿಯ ಶಾಸಕರು ತಡರಾತ್ರಿ ದೆಹಲಿಯತ್ತ ಮುಖ ಮಾಡಿದ್ದಾರೆ.

ವಿಧಾನಸಭೆಯ ಮುಖ್ಯ ಸಚೇತಕ ಅಶೋಕ್ ಎಂ ಪಟ್ಟಣ್ ನೇತೃತ್ವದಲ್ಲಿ ಸುಮಾರು 25–30 ಮಂದಿ ಹಿರಿಯ ಕಾಂಗ್ರೆಸ್ ಶಾಸಕರು ರಾಷ್ಟ್ರ ರಾಜಧಾನಿ ದೆಹಲಿಗೆ ತೆರಳಿದ್ದು, ಪಕ್ಷದ ಹೈಕಮಾಂಡ್‌ನ್ನು ಭೇಟಿ ಮಾಡಿ, ಸಚಿವ ಸ್ಥಾನಗಳಿಗಾಗಿ ಒತ್ತಡ ಹೇರುವ ನಿರೀಕ್ಷೆಯಿದೆ.



ಈ ಬೆಳವಣಿಗೆ ರಾಜ್ಯ ರಾಜಕೀಯದಲ್ಲಿ ಕುತೂಹಲ ಹುಟ್ಟಿಸಿದೆ.ಬಾಗಲಕೋಟೆ ಮತ್ತು ದಾವಣಗೆರೆ ದಕ್ಷಿಣ ಉಪಚುನಾವಣೆಗಳು ಮುಗಿದಿದ್ದು, ಮೇ 4ರಂದು ಫಲಿತಾಂಶ ಹೊರಬೀಳಲಿದೆ. ಇದರ ನಡುವಲ್ಲೇ ನಾಯಕರು ದೆಹಲಿಗೆ ಭೇಟಿ ನೀಡಿರುವುದು ಮಹತ್ವ ಪಡೆದುಕೊಂಡಿದೆ.

ಸರ್ಕಾರಕ್ಕೆ ಮೂರು ವರ್ಷಗಳು ಪೂರ್ಣಗೊಂಡಿರುವುದರಿಂದ, ಸಚಿವ ಸಂಪುಟದಲ್ಲಿ ಬದಲಾವಣೆ ಅನಿವಾರ್ಯ ಎಂಬ ಮಾತುಗಳು ಕೇಳಿಬರುತ್ತಿವೆ. ಈ ಹಿನ್ನೆಲೆ, ಹಲವು ಬಾರಿ ಗೆದ್ದ ಅನುಭವಿ ಶಾಸಕರು ತಮಗೂ ಅವಕಾಶ ನೀಡಬೇಕು ಎಂದು ಒತ್ತಾಯಿಸುತ್ತಿದ್ದಾರೆ.

ಮುಖ್ಯಮಂತ್ರಿ ಸಿದ್ದಾರಾಮಯ್ಯ ಮುಂದಿನ ಎರಡು ವರ್ಷಗಳ ಕಾಲ ಹುದ್ದೆಯಲ್ಲಿ ಮುಂದುವರಿಯುವ ವಿಷಯವೂ ಈ ಭೇಟಿಯ ವೇಳೆ ಚರ್ಚೆಗೆ ಬರುವ ಸಾಧ್ಯತೆಗಳಿವೆ ಎಂದು ಹೇಳಲಾಗುತ್ತಿದೆ.

ಸಿದ್ದರಾಮಯ್ಯ ಬೆಂಬಲಿಗರೆಂದು ಗುರುತಿಸಿಕೊಂಡಿರುವ ಶಾಸಕರು ಅವರ ಮುಂದುವರಿಕೆಗೆ ಹೈಕಮಾಂಡ್ ಅನುಮೋದನೆ ಪಡೆಯಲು ಪ್ರಯತ್ನಿಸುತ್ತಿದ್ದಾರೆ ಎನ್ನಲಾಗಿದೆ.

ಇದೇ ವೇಳೆ, ಸಿಎಂ ಕೂಡ ಶೀಘ್ರದಲ್ಲೇ ದೆಹಲಿಗೆ ಭೇಟಿ ನೀಡಿ, ಪಕ್ಷದ ನಾಯಕತ್ವದೊಂದಿಗೆ ಚರ್ಚೆ ನಡೆಸುವ ಸಾಧ್ಯತೆ ಇದೆ ಎಂದು ಹೇಳಲಾಗುತ್ತಿದೆ. ವಿಶೇಷವಾಗಿ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿಯವರ ಒಪ್ಪಿಗೆ ಪಡೆಯಲು ಸಿಎಂ ಆಸಕ್ತಿ ತೋರಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ.

ಇನ್ನೊಂದೆಡೆ, ಉಪಮುಖ್ಯಮಂತ್ರಿ ಡಿಕೆ.ಶಿವಕುಮಾರ್ ಬೆಂಬಲಿಗರೂ ಕೂಡ ತಮ್ಮ ಚಟುವಟಿಕೆಗಳನ್ನು ಆರಂಭಿಸಿದ್ದಾರೆ. ಸಿಎಂ ಸ್ಥಾನ ಬದಲಾವಣೆ ಕುರಿತ ಚರ್ಚೆಯನ್ನು ಮತ್ತೆ ಮುನ್ನೆಲೆ ತರಲಿದ್ದಾರೆಂಬ ಚರ್ಚೆಗಳು ಆರಂಭವಾಗಿವೆ.

ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರೂ ಕೂಡ ಸಿಎಂ ಹುದ್ದೆಗೆ ತಮ್ಮ ಆಸಕ್ತಿ ವ್ಯಕ್ತಪಡಿಸಿರುವ ಹಿನ್ನೆಲೆ, ಕಾಂಗ್ರೆಸ್ ಒಳರಾಜಕೀಯ ಮತ್ತಷ್ಟು ಚುರುಕುಗೊಂಡಿದೆ. ಆದರೆ, ಸಾರ್ವಜನಿಕವಾಗಿ ಅವರು ಸಿದ್ದರಾಮಯ್ಯ ಮುಂದುವರಿಯುತ್ತಾರೆ ಎಂಬ ನಿಲುವನ್ನೇ ವ್ಯಕ್ತಪಡಿಸಿದ್ದಾರೆ.

ಸಿದ್ದರಾಮಯ್ಯ ಅವರ ಆಪ್ತರೆಂದು ಕರೆಯಲ್ಪಡುವ ಪಟ್ಟಣ್ ಅವರೂ ಇದೇ ಮಾತನ್ನೇ ಪುನರುಚ್ಚರಿಸುತ್ತಿದ್ದಾರೆ. ಮೂರು ಬಾರಿಗಿಂತ ಹೆಚ್ಚು ಬಾರಿ ಗೆದ್ದ ಶಾಸಕರ ಗುಂಪಿನ ಸಭೆ ನಡೆಸಿದ ನಂತರ, ಮುಖ್ಯಮಂತ್ರಿಗಳ ಒಪ್ಪಿಗೆಯೊಂದಿಗೆ, ಪಟ್ಟಣ್ ಅವರು ದೆಹಲಿಗೆ ನಿಯೋಗವನ್ನು ಕರೆದುಕೊಂಡು ಹೋಗಿದ್ದಾರೆಂದು ಹೇಳಲಾಗುತ್ತಿದೆ.

"ಸರ್ಕಾರಕ್ಕೆ ಮೂರು ವರ್ಷಗಳಾಗಿರುವುದರಿಂದ ಈಗಿನ ಸಚಿವರಿಗೆ ವಿಶ್ರಾಂತಿ ನೀಡಿ ಹೊಸವರಿಗೆ ಅವಕಾಶ ನೀಡಬೇಕು" ಎಂಬ ಅಭಿಪ್ರಾಯವನ್ನು ಹೈಕಮಾಂಡ್ ಮುಂದೆ ಮಂಡಿಸಲು ಮುಂದಾಗಿದ್ದಾರೆ. 2028ರ ವಿಧಾನಸಭೆ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ಪಕ್ಷದ ಸಂಘಟನೆಯನ್ನು ಬಲಪಡಿಸುವ ಉದ್ದೇಶವೂ ಇದರ ಹಿಂದೆ ಇದೆ ಎನ್ನಲಾಗುತ್ತಿದೆ. ದೆಹಲಿ ತಲುಪಿದ ಶಾಸಕರು ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ.ವೇಣುಗೋಪಾಲ್ ಹಾಗೂ ರಂದೀಪ್ ಸಿಂಗ್ ಸುರ್ಜೇವಾಲಾ ಅವರನ್ನು ಭೇಟಿ ಮಾಡುವ ಸಾಧ್ಯತೆ ಇದೆ.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಬೆಂಗಳೂರಿನಲ್ಲಿ ಇರುವುದರಿಂದ, ಅವರು ದೆಹಲಿಗೆ ಮರಳಿದ ನಂತರ ಪ್ರಮುಖ ಸಭೆ ನಡೆಯುವ ನಿರೀಕ್ಷೆ ಇದೆ.

ಈ ನಡುವೆ, ಕೆಲ ಶಾಸಕರು ವೈಯಕ್ತಿಕ ಕಾರಣಗಳಿಂದ ಈ ದೆಹಲಿ ಭೇಟಿಯಿಂದ ಹಿಂದೆ ಸರಿದಿದ್ದಾರೆ. ಆದರೂ, ಹೆಚ್ಚಿನ ಸಂಖ್ಯೆಯಲ್ಲಿ ಹಿರಿಯ ಶಾಸಕರು ಭಾಗಿಯಾಗಿರುವುದು, ಸಚಿವ ಸಂಪುಟ ಪುನರ್‌ರಚನೆ ಈ ಬಾರಿ ಗಂಭೀರವಾಗಿ ಚರ್ಚೆಯಾಗುವ ಸೂಚನೆ ನೀಡುತ್ತಿದೆ. ಟಿಬಿ ಜಯಚಂದ್ರ, ಎಲ್‌ಆರ್ ಕೃಷ್ಣ ಮೂರ್ತಿ, ಬೇಲೂರು ಗೋಪಾಲಕೃಷ್ಣ, ಶಾಂತನ ಗೌಡರ್, ಕೆ ಷಡಕ್ಷರಿ, ಪುಟ್ಟರಂಗ ಶೆಟ್ಟಿ, ರಾಘವೇಂದ್ರ ಹಿಟ್ನಾಳ್, ಎಸ್‌ಎನ್ ನಾರಾಯಣಸ್ವಾಮಿ ಸೇರಿದಂತೆ ಇತರರು ದೆಹಲಿಗೆ ಭೇಟಿ ನೀಡಿದ್ದರೆ, ಮಳವಳ್ಳಿ ಶಾಸಕ ಪಿಎಂ ನರೇಂದ್ರಸ್ವಾಮಿ ತಮ್ಮ ಮಗಳ ಮದುವೆಯಲ್ಲಿ ನಿರತರಾಗಿದ್ದಾರೆಂದು ಹೇಳಿ ಹಿಂದೆ ಸರಿದ್ದಾರೆ. ಇದೇ ವೇಳೆ ಡಿಕೆ.ಶಿವಕುಮಾರ್ ನಿಷ್ಠಾವಂತ ಮಾಗಡಿ ಶಾಸಕ ಎಚ್‌ಸಿ ಬಾಲಕೃಷ್ಣ ಕೂಡ ಹಿಂದೆ ಸರಿದ್ದಾರೆಂದು ತಿಳಿದುಬಂದಿದೆ.

ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಬಂಗಾರಪೇಟೆ ಸರ್ಕಾರಿ ಪಿಯು ಕಾಲೇಜಿಗೆ ಶೇ. 76 ಫಲಿತಾಂಶ



ಬಂಗಾರಪೇಟೆ

ಪಟ್ಟಣದ ಸರ್ಕಾರಿ ಪದವಿಪೂರ್ವ ಕಾಲೇಜಿನ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿದ್ದು, ಕಾಲೇಜಿಗೆ ಒಟ್ಟಾರೆ ಶೇ. 76ರಷ್ಟು ಫಲಿತಾಂಶ ಲಭಿಸಿದೆ ಎಂದು ಪ್ರಾಂಶುಪಾಲರಾದ ನಾಗಾನಂದ ಕೆಂಪರಾಜ್ ತಿಳಿಸಿದ್ದಾರೆ.

ಈ ಕುರಿತು ಮಾಹಿತಿ ನೀಡಿದ ಅವರು, ಕಾಲೇಜಿನ ವಿವಿಧ ವಿಭಾಗಗಳಲ್ಲಿ ವಿದ್ಯಾರ್ಥಿಗಳು ಗಮನಾರ್ಹ ಸಾಧನೆ ಮಾಡಿದ್ದಾರೆ. ವಾಣಿಜ್ಯ ವಿಭಾಗವು ಶೇ. 93 ರಷ್ಟು ಫಲಿತಾಂಶ ಪಡೆಯುವ ಮೂಲಕ ಕಾಲೇಜಿನಲ್ಲಿ ಅಗ್ರಸ್ಥಾನದಲ್ಲಿದೆ. ಉಳಿದಂತೆ ವಿಜ್ಞಾನ ವಿಭಾಗದಲ್ಲಿ ಶೇ. 72 ಹಾಗೂ ಕಲಾ ವಿಭಾಗದಲ್ಲಿ ಶೇ. 62 ರಷ್ಟು ಫಲಿತಾಂಶ ದಾಖಲಾಗಿದೆ ಎಂದರು.

ವಿಭಾಗವಾರು ಸಾಧಕರು:

ವಾಣಿಜ್ಯ ವಿಭಾಗ: ಸಿ. ಹರೀಶ್ ಕುಮಾರ್ 545 ಅಂಕಗಳನ್ನು ಪಡೆಯುವ ಮೂಲಕ ಕಾಲೇಜಿಗೆ ಪ್ರಥಮ ಸ್ಥಾನ ಪಡೆದಿದ್ದಾರೆ. ಬಿ. ಹರೀಶ್ (533) ದ್ವಿತೀಯ ಸ್ಥಾನ ಗಳಿಸಿದ್ದಾರೆ.






ವಿಜ್ಞಾನ ವಿಭಾಗ: ಪಿ. ಶೃತಿ 527 ಅಂಕಗಳನ್ನು ಗಳಿಸಿ ವಿಭಾಗಕ್ಕೆ ಮೊದಲ ಸ್ಥಾನದಲ್ಲಿದ್ದಾರೆ.

ಕಲಾ ವಿಭಾಗ: ಎಸ್. ಸುದೀಪ್ 519 ಅಂಕಗಳನ್ನು ಪಡೆದು ಸಾಧನೆ ಮಾಡಿದ್ದಾರೆ.

ಇತರ ಸಾಧಕರು: ಕೆ. ಪವಿತ್ರ ಬಾಯಿ 517 ಅಂಕಗಳನ್ನು ಪಡೆದಿದ್ದು, ಒಟ್ಟಾರೆ ಐವರು ವಿದ್ಯಾರ್ಥಿಗಳು ಅತ್ಯುನ್ನತ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ. ವಿದ್ಯಾರ್ಥಿಗಳ ಈ ಸಾಧನೆಗೆ ಪ್ರಾಂಶುಪಾಲರು ಅಭಿನಂದನೆ ಸಲ್ಲಿಸಿದ್ದಾರೆ.

# ಗ್ರಾಮೀಣ ಜನರಿಗೆ ಗ್ರಾಮ-ನೆಟ್ ಭಾರತ ಯೋಜನೆ ವರದಾನ



ತುಮಕೂರು

ಗ್ರಾಮೀಣ ಪ್ರದೇಶದ ಪ್ರತಿಭಾವಂತ ಯುವಜನರು ಹಾಗೂ ಮಹಿಳೆಯರು ಉದ್ಯೋಗಕ್ಕಾಗಿ ನಗರ ಪ್ರದೇಶಕ್ಕೆ ವಲಸೆ ಹೋಗುವುದನ್ನು ತಪ್ಪಿಸಲು ಗ್ರಾಮೀಣ ಪ್ರದೇಶದಲ್ಲಿ ದುಡಿಮೆಗೆ ಅವಕಾಶ ಕಲ್ಪಿಸಲು ಗ್ರಾಮ-ನೆಟ್ ಭಾರತ 2030 ರೂಪುಗೊಂಡಿದೆ. ರಾಜ್ಯದಲ್ಲಿ ಇದೇ ಮೊದಲ ಬಾರಿಗೆ ಯೋಜನೆಗೆ ಮೇ ತಿಂಗಳ ಮೊದಲ ವಾರದಲ್ಲಿ ತುರುವೇಕೆರೆ ತಾಲ್ಲೂಕು ಸಂಪಿಗೆ ಗ್ರಾಮದಲ್ಲಿ ಚಾಲನೆ ನೀಡಲಾಗುತ್ತದೆ ಎಂದು ಲೋಕಸೇವಾ ಫೌಂಡೇಷನ್ ಅಧ್ಯಕ್ಷ ಸಂಪಿಗೆ ಜಗದೀಶ್ ಹೇಳಿದರು.

ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಯೋಜನೆ ಸಂಪಿಗೆ ಗ್ರಾಮದಲ್ಲಿ ಉದ್ಘಾಟನೆಯಾದ ನಂತರ ರಾಜ್ಯದ ವಿವಿಧೆಡೆ ವಿಸ್ತರಿಸಲಾಗುವುದು. ಕೇಂದ್ರ ಸಚಿವರಾದ ವಿ. ಸೋಮಣ್ಣ, ಶೋಭಾ ಕರಂದ್ಲಾಜೆ, ಸಂಸದ ಡಾ. ಮಂಜುನಾಥ್ ಹಾಗೂ ವಿವಿಧ ಮುಖಂಡರು ಈ ಕಾರ್ಯಕ್ರಮದಲ್ಲಿ ಭಾಗವಹಿಸುವರು ಎಂದರು.

ಗ್ರಾಮೀಣ ಪ್ರದೇಶದಲ್ಲಿ ಪ್ರತಿಭೆ ಇರುವ ಯುವಜನರು, ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಇದ್ದರೂ, ಅವರಿಗೆ ಸೂಕ್ತ ಉದ್ಯೋಗಾವಕಾಶಗಳು ಲಭ್ಯವಾಗುತ್ತಿಲ್ಲ. ಅದರ ಪರಿಣಾಮವಾಗಿ ನಗರಗಳಿಗೆ ವಲಸೆ ಹೆಚ್ಚುತ್ತಿದೆ. ನಿರುದ್ಯೋಗ ಸಮಸ್ಯೆ, ವಲಸೆಯಿಂದ ಗ್ರಾಮೀಣ ಆರ್ಥಿಕತೆ ದುರ್ಬಲವಾಗುತ್ತಿದೆ. ಈ ಸಮಸ್ಯೆಗೆ ಶಾಶ್ವತ ಪರಿಹಾರವಾಗಿ ಗ್ರಾಮ-ನೆಟ್ ಭಾರತ 2030 ರೂಪುಗೊಂಡಿದೆ. ಉದ್ಯೋಗವನ್ನು ನಗರಗಳಿಂದ ಗ್ರಾಮಗಳಿಗೆ ತರುವುದು ಈ ಯೋಜನೆಯ ಮುಖ್ಯ ಉದ್ದೇಶ ಎಂದು ತಿಳಿಸಿದರು.

ಗ್ರಾಮೀಣ ಯುವಕರಿಗೆ ಉದ್ಯೋಗ ಸೃಷ್ಟಿ, ಖಚಿತ ಆದಾಯದ ವ್ಯವಸ್ಥೆ, ಮಹಿಳೆಯರಿಗೆ ಮನೆಯಲ್ಲೇ ಉದ್ಯೋಗ, ಡಿಜಿಟಲ್ ಕೌಶಲ್ಯ ಅಭಿವೃದ್ಧಿ, ಸ್ವಾವಲಂಬಿ ಗ್ರಾಮ ನಿರ್ಮಾಣ ಈ ಯೋಜನೆಯ ಗುರಿಯಾಗಿದೆ. ಈ ಯೋಜನೆಯನ್ನು ಲೋಕಸೇವಾ ಫೌಂಡೇಷನ್, ಆರ್ಕಲೋಸ್ ಇಂಟೆಲೈನ್ಸ್ ಟೆಕ್ನಾಲಜೀಸ್ ಸಹಯೋಗದಲ್ಲಿ ಜಾರಿಗೊಳಿಸಲಾಗುತ್ತಿದೆ. ಲೋಕಸೇವಾ ಫೌಂಡೇಶನ್ ಗ್ರಾಮ ಮಟ್ಟದಲ್ಲಿ ಜನರನ್ನು ಸಂಪರ್ಕಿಸುವುದು, ನೋಂದಣಿ ಮತ್ತು ಜಾಗೃತಿ ಮೂಡಿಸುವುದು. ಆರ್ಕಲೋಸ್ ಇಂಟೆಲೈನ್ಸ್ ಟೆಕ್ನಾಲಜೀಸ್ ಡಿಜಿಟಲ್ ಪ್ಲಾಟ್‌ಫಾರ್ಮ್ ಒದಗಿಸುವುದು ಎಂದು ಸಂಪಿಗೆ ಜಗದೀಶ್ ಹೇಳಿದರು.

ಮಾಜಿ ಸಚಿವ, ಲೋಕಸೇವಾ ಫೌಂಡೇಶನ್ ಗೌರವಾಧ್ಯಕ್ಷ ಸೊಗಡು ಶಿವಣ್ಣ ಮಾತನಾಡಿ, ಗ್ರಾಮೀಣ ಪ್ರದೇಶದ ಯುವಜನರು, ಮಹಿಳೆಯರಿಗೆ ಈ ಯೋಜನೆ ವರದಾನವಾಗಿದೆ. ಮನೆಯಿಂದಲೇ ಆದಾಯ ಗಳಿಸಬಹುದಾಗಿದೆ. ಈ ಕಾರ್ಯಕ್ರಮ ರಾಜ್ಯಾದ್ಯಂತ ಪರಿಣಾಮಕಾರಿಯಾಗಿ ಅನುಷ್ಠಾನಗೊಂಡರೆ ನಿರುದ್ಯೋಗ ಸಮಸ್ಯೆ ನಿಯಂತ್ರಣವಾಗಿ ಗ್ರಾಮೀಣ ಜನರಲ್ಲಿ ಆರ್ಥಿಕ ಸ್ವಾವಲಂಬನೆ ಹೆಚ್ಚುತ್ತದೆ ಎಂದರು.

ಅರ್ಕ್ಯಾಲೋಸ್ ಇಂಟೆನ್ಸ್ ಟೆಕ್ನಾಲಜೀಸ್‌ನ ಸಿಇಒ ಎಸ್.ಜೆ. ವಿಶ್ವನಾಥ್ ಮಾತನಾಡಿ, 18 ವರ್ಷ ಮೇಲ್ಪಟ್ಟಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅಥವಾ ಸ್ಥಳೀಯ ಕೇಂದ್ರಗಳಲ್ಲಿ ನೋಂದಣಿ ಮಾಡುಬೇಕು. ಅವರಿಗೆ ಸರಳ ತರಬೇತಿ ಮತ್ತು ಮಾರ್ಗದರ್ಶನ ನೀಡಲಾಗುತ್ತದೆ: ಇದು ಕೇವಲ ಯೋಜನೆ ಅಲ್ಲ, ಒಂದು ವ್ಯವಸ್ಥಿತ ಉದ್ಯೋಗ ಮಾದರಿ. ಯೋಜನೆಯಿಂದ ಜನರಿಗೆ ಹಲವು ರೀತಿಯ ಲಾಭಗಳಿವೆ. ಮನೆಯಲ್ಲೇ ಉದ್ಯೋಗ, ಮಹಿಳೆಯರಿಗೆ ಹೆಚ್ಚು ಅವಕಾಶ, ಯುವಕರಿಗೆ ಡಿಜಿಟಲ್ ಕೌಶಲ್ಯ, ಸ್ಥಿರ ಆದಾಯದ ಸಾಧ್ಯತೆ, ಕುಟುಂಬದ ಆರ್ಥಿಕ ಸ್ಥಿತಿ ಸುಧಾರಣೆ ಸಾಧ್ಯವಾಗುತ್ತದೆ ಎಂದರು. ಲೋಕಸೇವಾ ಫೌಂಡೇಶನ್ ಟ್ರಸ್ಟಿಗಳಾದ ರಾಮಕೃಷ್ಣ, ಡಾ.ಆರ್. ಮಂಜುನಾಥ್, ಎಸ್.ಆರ್. ಲೀಲಾವತಿ, ಅಪೂರ್ವ ಅರುಣ್‌ಕುಮಾರ್, ನಗರಪಾಲಿಕೆ ಮಾಜಿ ಸದಸ್ಯ ಕೆ.ಪಿ. ಮಹೇಶ್ ಹಾಜರಿದ್ದರು.

# ಬೆಂಗಳೂರಿನಲ್ಲಿ ಅದ್ದೂರಿಯಾಗಿ ನಡೆದ 9ನೇ ಸಿಎಂಎಸ್‌ಬಿ ರಾಷ್ಟ್ರೀಯ ಪ್ರಶಸ್ತಿ ಸಮಾರಂಭ




ಬೆಂಗಳೂರು: ನವದೆಹಲಿ ಮೂಲದ Council for Media and Satellite Broadcasting ವತಿಯಿಂದ 2026ರ 9ನೇ ಸಿಎಂಎಸ್‌ಬಿ ರಾಷ್ಟ್ರೀಯ ಪ್ರಶಸ್ತಿ ಸಮಾರಂಭವು ನಗರದ ಲಲಿತ್ ಅಶೋಕ್ ಹೋಟೆಲ್ ನಲ್ಲಿ ಭರ್ಜರಿಯಾಗಿ ನಡೆಯಿತು.

"ಉತ್ತಮತೆ, ನಿಷ್ಠೆ ಮತ್ತು ದೇಶಕ್ಕೆ ವಿಶಿಷ್ಟ ಸಾರ್ವಜನಿಕ ಸೇವೆ" ಎಂಬ ಘೋಷಣೆಯೊಂದಿಗೆ ನಡೆದ ಈ ಪ್ರತಿಷ್ಠಿತ ಕಾರ್ಯಕ್ರಮವು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ವ್ಯಕ್ತಿಗಳನ್ನು ಗೌರವಿಸುವ ಉದ್ದೇಶ ಹೊಂದಿತ್ತು.

ಈ ಬಾರಿ ಗೌರವಾನ್ವಿತ ಅತಿಥಿಗಳಾಗಿ ಅನಿತಾ ಬಿ. ಹಡ್ಡಣ್ಣವರ್, ಎಚ್. ಮಂಜುನಾಥ ಬಾಬು, ಬಿಕೆ ಅಲ್ತಾಫ್ ಖಾನ್, ಗಂಡಸಿ ಸದಾನಂದಸ್ವಾಮಿ, ಮಹಾನಂದ ಹೆಚ್.ಕೆ, ಗೋಪಾಲ್ ಡಿ ಜೋಗಿನ್ ಹಾಗೂ ನಾರಾಯಣಸ್ವಾಮಿ ಸೇರಿದಂತೆ ಹಲವು ಗಣ್ಯರು ಭಾಗವಹಿಸಿದ್ದರು.

ಸಂಸ್ಥೆಯ ಸ್ಥಾಪಕ ಪ್ರಾಧಿಕಾರಿಯಾಗಿ ಡಾ. ಬೀಕಿ ಬಂಗಾರಿ ಹಾಗೂ ಸ್ಥಾಪಕ ಅಧ್ಯಕ್ಷ ಮುಬಾರಕ್ ಎಸ್ ಉಪಸ್ಥಿತರಿದ್ದು, ಕರ್ನಾಟಕ ರಾಜ್ಯ ಅಧ್ಯಕ್ಷರು ಹಾಗೂ ಕಾರ್ಯಕ್ರಮದ ನೇತೃತ್ವ ವಹಿಸಿದ್ದ ತಂಡ ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಸಿತು.

ಪ್ರತಿ ವರ್ಷ ಮಾಧ್ಯಮ, ಆಡಳಿತ, ಕಾನೂನು, ಸಾಮಾಜಿಕ ಸೇವೆ ಮತ್ತು ಸಾರ್ವಜನಿಕ ಜೀವನದಲ್ಲಿ ಮಹತ್ವದ ಕೊಡುಗೆ ನೀಡಿದ ವ್ಯಕ್ತಿಗಳನ್ನು ಈ ಪ್ರಶಸ್ತಿಯ ಮೂಲಕ ಗೌರವಿಸಲಾಗುತ್ತದೆ. ಕಳೆದ 2025ರಲ್ಲಿಯೂ ಇದೇ ಸಂಸ್ಥೆ ಬೆಂಗಳೂರಿನಲ್ಲಿ ಕಾರ್ಯಕ್ರಮ ಆಯೋಜಿಸಿ ವಿವಿಧ ಕ್ಷೇತ್ರಗಳ ಗಣ್ಯರನ್ನು ಸನ್ಮಾನಿಸಿತ್ತು.

ಈ ವರ್ಷದ ಸಮಾರಂಭದಲ್ಲಿ ವಿವಿಧ ಕ್ಷೇತ್ರಗಳ ಗಣ್ಯರು, ಮಾಧ್ಯಮ ಪ್ರತಿನಿಧಿಗಳು ಮತ್ತು ಸಾರ್ವಜನಿಕರು ಭಾಗವಹಿಸಿ ಕಾರ್ಯಕ್ರಮಕ್ಕೆ ಕಳೆ ತಂದರು. ಸಿಎಂಎಸ್‌ಬಿ ವೇದಿಕೆ ಸಂವಿಧಾನ ಮೌಲ್ಯಗಳು ಹಾಗೂ ಸಂಸ್ಥಾತ್ಮಕ ಜವಾಬ್ದಾರಿಗಳನ್ನು ಉತ್ತೇಜಿಸುವ ಮಹತ್ವದ ವೇದಿಕೆಯಾಗಿ ಪರಿಣಮಿಸುತ್ತಿದೆ.






# 'ಗ್ರೇಟ್ ಸ್ಲೀಪ್ ಸ್ಟೋರ್' ಉದ್ಘಾಟನೆ



ಬೆಂಗಳೂರು

ದೇಶದ ಪ್ರಮುಖ ಸ್ಪ್ರಿಂಗ್ ಮ್ಯಾಟ್ರೆಸ್ ಬ್ರ್ಯಾಂಡ್ ಗಳಲ್ಲಿ ಒಂದಾದ ಪೆಪ್ಸ್ ಇಂಡಸ್ಟ್ರೀಸ್ ಪ್ರೈವೇಟ್ ಲಿಮಿಟೆಡ್, ಸಿಲಿಕಾನ್ ಸಿಟಿಯಲ್ಲಿ ತನ್ನ ವಿಸ್ತರಣೆಯನ್ನು ಮುಂದುವರಿಸಿದ್ದು, ಶುಕ್ರವಾರ ಬೆಂಗಳೂರು ಚಂದಾಪುರ-ಆನೇಕಲ್ ಮುಖ್ಯರಸ್ತೆಯ ಇಗ್ಗಲೂರು ಬಳಿ ತನ್ನ 129ನೇ 'ದಿ ಗ್ರೇಟ್ ಸ್ಲೀಪ್ ಸ್ಟೋರ್' ಅನ್ನು ಅದ್ದೂರಿಯಾಗಿ ಉದ್ಘಾಟಿಸಿದೆ.

ಪೆಪ್ಸ್ ಮ್ಯಾನೇಜಿಂಗ್ ಡೈರೆಕ್ಟರ್ ಜಿ. ಶಂಕರ್ ರಾಮ್ ಅವರ ಉಪಸ್ಥಿತಿಯಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಮಾಜಿ ಕೇಂದ್ರ ಸಚಿವ ಎ. ನಾರಾಯಣಸ್ವಾಮಿ, ಚಲನಚಿತ್ರ ನಿರ್ಮಾಪಕ ಹಾಗೂ ಕೆಪಿಸಿಸಿ ಸದಸ್ಯ ಉಮಾಪತಿ ಶ್ರೀನಿವಾಸ್ ಗೌಡ, ಮತ್ತು ಆನೇಕಲ್ ಕ್ಷೇತ್ರದ ಶಾಸಕ ಬಿ. ಶಿವಣ್ಣ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಳಿಗೆಯನ್ನು ಲೋಕಾರ್ಪಣೆ ಮಾಡಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಜಿ. ಶಂಕರ್ ರಾಮ್ ಅವರು, "ಪೆಪ್ಸ್ ತನ್ನ ವೈಜ್ಞಾನಿಕ ವಿನ್ಯಾಸದ ಸ್ಪ್ರಿಂಗ್ ಮ್ಯಾಟ್ರೆಸ್‌ಗಳಿಗೆ ಚಿರಪರಿಚಿತವಾಗಿದೆ. ಬೆಂಗಳೂರಿನ ಜನರ ಜೀವನಶೈಲಿ ವೇಗವಾಗಿ ಬದಲಾಗುತ್ತಿದ್ದು, ಗುಣಮಟ್ಟದ ನಿದ್ರೆಯ ಅವಶ್ಯಕತೆ ಹೆಚ್ಚಾಗಿದೆ. ಗ್ರಾಹಕರು ನೇರವಾಗಿ ಮ್ಯಾಟ್ರೆಸ್‌ಗಳನ್ನು ಪರೀಕ್ಷಿಸಿ, ತಮ್ಮ ದೇಹದ ಅಗತ್ಯಕ್ಕೆ ತಕ್ಕಂತೆ ಸರಿಯಾದ ಆಯ್ಕೆ ಮಾಡಲು ಈ ಮಳಿಗೆಯಲ್ಲಿ ಪರಿಣಿತರ ಮಾರ್ಗದರ್ಶನ ಸಿಗಲಿದೆ," ಎಂದು ತಿಳಿಸಿದರು.

ಮಳಿಗೆಯಲ್ಲಿ ಪೆಪ್ಸ್‌ನ ಪ್ರಸಿದ್ಧ ಸ್ಪ್ರಿಂಗ್ ಮ್ಯಾಟ್ರೆಸ್‌ಗಳು ಮಾತ್ರವಲ್ಲದೆ, ಕಾಯಿರ್ ಮತ್ತು ಫೋಮ್ ಮ್ಯಾಟ್ರೆಸ್‌ಗಳ ದೊಡ್ಡ ಶ್ರೇಣಿಯೇ ಲಭ್ಯವಿದೆ. ಸಾಮಾನ್ಯ ಜನರಿಂದ ಹಿಡಿದು ಐಷಾರಾಮಿ ಹಾಸಿಗೆ ಬಯಸುವವರವರೆಗೆ ಎಲ್ಲರಿಗೂ ಅನುಕೂಲವಾಗುವಂತೆ 6,000 ರಿಂದ 1.5 ಲಕ್ಷದವರೆಗೆ ವಿವಿಧ ಬೆಲೆಯ ಉತ್ಪನ್ನಗಳಿವೆ.

# ಕರ್ನಾಟಕ ಪ್ರಾಂತ ರೈತ ಸಂಘದ 90 ನೆಯ ವರ್ಷದ ಸಂಸ್ಥಾಪನಾ ದಿನಾಚರಣೆ



ಕೋಲಾರ

ದೇಶದಲ್ಲಿ ಕೆಲವೇ ಕೆಲವು ಶ್ರೀಮಂತರ ಆದಾಯ ಮತ್ತು ಆಸ್ತಿ ಎಲ್ಲೆ ಮೀರಿ ಬೆಳೆಯುತ್ತಿದೆ. ಇದಕ್ಕೆ ಕಾರಣವಾಗಿರುವ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ರೈತ ವಿರೋಧಿ ನೀತಿಗಳನ್ನು ಹಿಮ್ಮೆಟ್ಟಿಸದಿದ್ದರೆ, ಬಿಕ್ಕಟ್ಟಿನಲ್ಲಿರುವ ಕೃಷಿಯನ್ನಾಗಲಿ ಅಥವಾ ಸಂಕಷ್ಟದಲ್ಲಿರುವ ರೈತ ಸಮುದಾಯವನ್ನಾಗಲಿ ಉಳಿಸಿಕೊಳ್ಳಲು ಸಾಧ್ಯವಿಲ್ಲ ಎಂದು ಕರ್ನಾಟಕ ಪ್ರಾಂತ ರೈತ ಸಂಘದ ಜಿಲೆ ಘಟಕದ ಅಧ್ಯಕ್ಷ ನುಕ್ಕನಹಳ್ಳಿ ಶ್ರೀರಾಮ್ ತಿಳಿಸಿದರು.

ನಗರದ ಪಾಲಸಂದ್ರ ಲೇಔಟ್ ನಲ್ಲಿ ಶನಿವಾರ ಕರ್ನಾಟಕ ಪ್ರಾಂತ ರೈತ ಸಂಘದ (ಕೆಪಿಆರ್‌ಎಸ್) ಸಂಘಟನೆಯ 90 ನೆಯ ವರ್ಷದ ಸಂಸ್ಥಾಪನಾ ದಿನಾಚರಣೆಯ ಭಾಗವಾಗಿ ಧ್ವಜಾರೋಹಣ ಮಾಡಿ ಮಾತನಾಡಿದ ಅವರು ಕೇಂದ್ರದ ನರೇಂದ್ರ ಮೋದಿ ಸರ್ಕಾರ ರೈತರ ಆದಾಯ ದ್ವಿಗುಣ ಮಾಡುವ ಭರವಸೆ ನೀಡಿ, ವಿದ್ಯುತ್ ಖಾಸಗೀಕರಣ, ಬೀಜ ಮಸೂದೆ, ಭೂಸ್ವಾಧೀನ ತಿದ್ದುಪಡಿ ಕಾಯ್ದೆ, ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ತಿದ್ದುಪಡಿ ಮಾಡುವ ಮೂಲಕ ರೈತರ ಮತ್ತು ಕೂಲಿಕಾರರ ಆದಾಯವನ್ನು ಸಂಪೂರ್ಣವಾಗಿ ಕುಸಿಯುವಂತೆ ಮಾಡಲಾಗಿದೆ' ಎಂದು ಹೇಳಿದರು. ಒಂದು ಕಡೆ ಸರ್ಕಾರಿ ಮತ್ತು ಅರಣ್ಯ ಭೂಮಿಗಳಲ್ಲಿ ಉಳುಮೆ ಮಾಡುತ್ತಿರುವ ರೈತರಿಗೆ ಹಕ್ಕುಪತ್ರಗಳನ್ನು ನೀಡದೇ, ಮತ್ತೊಂದೆಡೆ ಫಲವತ್ತಾದ ಕೃಷಿಯೋಗ್ಯ ಭೂಮಿಯನ್ನು ವಿವಿಧ ಯೋಜನೆಗಳ ಹೆಸರಿನಲ್ಲಿ ಭೂಸ್ವಾಧೀನ ಮಾಡಿಕೊಳ್ಳಲಾಗುತ್ತಿದೆ. ಇದರಿಂದಾಗಿ ಕೃಷಿಯನ್ನು ಬಿಟ್ಟು ನಗರ ಪ್ರದೇಶಗಳಿಗೆ ವಲಸೆ ಹೋಗುವವರ ಸಂಖ್ಯೆ ಹೆಚ್ಚಾಗುತ್ತಿದೆ. ಇಂತಹ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳದಿದ್ದರೆ, ದೇಶಕ್ಕೆ ಅನ್ನ ನೀಡುವ ರೈತಾಪಿ ವರ್ಗ ಸಂಪೂರ್ಣ ನಾಶವಾಗುತ್ತದೆ ಎಂದು ಎಚ್ಚರಿಸಿದರು.

ರೈತರು ಜಾಗೃತರಾಗದಂತೆ ಅವರ ಮೇಲೆ ಜಾತಿ, ಧರ್ಮ ಮತ್ತು ದೇವರು, ಪಾಪ, ಪುಣ್ಯದಂತಹ ಮೌಢ್ಯದ ವಿಚಾರಗಳನ್ನು ತುಂಬಿ ದಾರಿ ತಪ್ಪಿಸಲಾಗುತ್ತಿದೆ. ಅವರ ನಡುವಿನ ಏಕತೆಯನ್ನು ವ್ಯವಸ್ಥಿತವಾಗಿ ಒಡೆಯು ಮೂಲಕ ಆಳುವ ವರ್ಗ ಲಾಭ ಮಾಡಿಕೊಳ್ಳುತ್ತಿದೆ. ರೈತರು ಮತ್ತು ಕೃಷಿ ಉಳಿಸಲು ಎಲ್ಲರಲ್ಲ ದುಡಿಯುವ ಜನ ಒಗ್ಗಟ್ಟಾಗಿ ಸಂಘಟಿತ ಹೋರಾಟ ನಡೆಸಬೇಕಾಗಿದೆ ಎಂದರು. ಈ ಸಂದರ್ಭದಲ್ಲಿ ಸಂಘಟನೆಯ ಜಿಲ್ಲಾ ಉಪಾಧ್ಯಕ್ಷೆ ಗಂಗಮ್ಮ ಸಹ ಕಾರ್ಯದರ್ಶಿ ಸುಗಟೂರು ಶ್ರೀಧರ್, ತಾಲೂಕು ಅಧ್ಯಕ್ಷ ಹೊಲ್ಲಂಬಳ್ಳಿ ವೆಂಕ, ಕಾರ್ಯದರ್ಶಿ ವಿ.ನಾರಾಯಣರೆಡ್ಡಿ, ಸದಸ್ಯರಾದ ರಾಜೇಂದ್ರ ಪ್ರಸಾದ್ ಮುಂತಾದವರು ಇದ್ದರು.

# ಆರೋಗ್ಯ ಗುಣಮಟ್ಟ ಸಮ್ಮೇಳನ ಉದ್ಘಾಟನೆ

ಬೆಂಗಳೂರು

ಭಾರತದ ಮಾಜಿ ಉಪರಾಷ್ಟ್ರಪತಿ ಎಂ. ವೆಂಕಯ್ಯ ನಾಯ್ಡು ಅವರು ಮಾನ್ಯತೆ ಪಡೆದ ಆರೋಗ್ಯ ರಕ್ಷಣಾ ಸಂಸ್ಥೆಗಳ ಒಕ್ಕೂಟ ಆಯೋಜಿಸಿದ್ದ ದೇಶದ ಪ್ರಮುಖ ಆರೋಗ್ಯ ರಕ್ಷಣಾ ಗುಣಮಟ್ಟ ಸಮ್ಮೇಳನದ 10ನೇ ಆವೃತ್ತಿಯನ್ನು ಉದ್ಘಾಟಿಸಿದರು.

ಏಪ್ರಿಲ್ 10 ರಿಂದ 12ರವರೆಗೆ ನಡೆಯುತ್ತಿರುವ ಈ ಸಮ್ಮೇಳನದಲ್ಲಿ ವೈಜ್ಞಾನಿಕ ಅಧಿವೇಶನಗಳು, ಫಲಕ ಚರ್ಚೆಗಳು, ನಾವೀನ್ಯತೆ ಪ್ರದರ್ಶನಗಳು ಮತ್ತು ಸಂವಾದಾತ್ಮಕ ಸಂಪರ್ಕ ಅವಕಾಶಗಳು ಪ್ರಮುಖ ಆಕರ್ಷಣೆಯಾಗಿವೆ. ಸಂಶೋಧಕರು ಮತ್ತು ವೈದ್ಯರಿಂದ ಪೋಸ್ಟರ್ ಪ್ರಸ್ತುತಿಗಳು ನಡೆಯುತ್ತಿದ್ದು, ನವೀನ ಯೋಜನೆಗಳ ಪರಿಚಯ ಮತ್ತು ಜ್ಞಾನ ವಿನಿಮಯಕ್ಕೆ ವೇದಿಕೆಯಾಗಿದೆ.




ಅಪೋಲೋ ಆಸ್ಪತ್ರೆಗಳ ಸಮೂಹದ ಜಂಟಿ ವ್ಯವಸ್ಥಾಪಕ ನಿರ್ದೇಶಕಿ ಡಾ. ಸಂಗೀತಾ ರೆಡ್ಡಿ ಮುಖ್ಯ ಭಾಷಣ ಮಾಡಿದರು. ಅಂತರರಾಷ್ಟ್ರೀಯ ಆರೋಗ್ಯ ಗುಣಮಟ್ಟ ಸಂಸ್ಥೆಯ ಅಧ್ಯಕ್ಷೆ ಡಾ. ಎಜೆಕ್ವಿಯೆಲ್ ಗಾರ್ಸಿಯಾ ಎಲೋರಿಯೊ ವಿಶೇಷ ಭಾಷಣ ಮಾಡಿದರು. ಸಂಸ್ಥೆಯ ಅಧ್ಯಕ್ಷ ಡಾ. ವಿಜಯ್ ಅಗರ್ವಾಲ್ ಮತ್ತು ಪ್ರಧಾನ ಕಾರ್ಯದರ್ಶಿ ಡಾ. ಲಲ್ಲು ಜೋಸೆಫ್ ಸೇರಿದಂತೆ ಗಣ್ಯರು ಭಾಗವಹಿಸಿದ್ದರು. ಸಮ್ಮೇಳನದ ಸಂಘಟನಾ ಅಧ್ಯಕ್ಷೆ ಡಾ. ನಲ್ಲ ಜಿ ಪಳನಿಸ್ವಾಮಿ ಸಭೆಯನ್ನು ಸ್ವಾಗತಿಸಿದರು.

# ಇಂದು ಉಚಿತ ಮೆಗಾ ಬಂಜೆತನದ ನಿವಾರಣಾ ಶಿಬಿರ



ಬಂಗಾರಪೇಟೆ

ಪಟ್ಟಣದ ಸರ್ಕಾರಿ ಆಸ್ಪತ್ರೆ ಬಳಿ ಇರುವ ಶ್ರೀ ನಂಜುಂಡೇಶ್ವರ ಆಸ್ಪತ್ರೆಯಲ್ಲಿ ಇದೇ 12ರ ಭಾನುವಾರ ಉಚಿತ ಬಂಜೆತನ ನಿವಾರಣಾ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ ಎಂದು ಆಸ್ಪತ್ರೆಯ ವ್ಯವಸ್ಥಾಪಕ ನಿರ್ದೇಶಕಿ ಡಾ. ಬಿ.ಸಿ. ರೂಪಶ್ರೀ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, "ಮಕ್ಕಳಿಲ್ಲದ ದಂಪತಿಗಳಿಗೆ ನೆರವಾಗುವ ನಿಟ್ಟಿನಲ್ಲಿ ಈ ವಿಶೇಷ ಶಿಬಿರವನ್ನು ಆಯೋಜಿಸಲಾಗಿದೆ. ಬೆಂಗಳೂರಿನ ವೈಟ್ ಫೀಲ್ಡ್‌ನ ಪ್ರತಿಷ್ಠಿತ ವೃಕ್ಷ್ ಫರ್ಟಿಲಿಟಿ ಆಸ್ಪತ್ರೆಯ ಬಂಜೆತನ ನಿವಾರಣಾ ತಜ್ಞರಾದ ಡಾ. ನಾಗ ತೇಜಸ್ವಿ ನೇತೃತ್ವದಲ್ಲಿ ಅಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರೆಗೆ ತಪಾಸಣೆ ಮತ್ತು ಸಮಾಲೋಚನೆ ನಡೆಯಲಿದೆ," ಎಂದು ಮಾಹಿತಿ ನೀಡಿದರು.

ಯಾರೆಲ್ಲಾ ಭಾಗವಹಿಸಬಹುದು?

ಹಲವು ವರ್ಷಗಳಿಂದ ಐಯುಐ ವೈಫಲ್ಯ ಎದುರಿಸುತ್ತಿರುವವರು.

ಈಗಾಗಲೇ ಐವಿಎಫ್ ಚಿಕಿತ್ಸೆಗೆ ಪ್ರಯತ್ನಿಸುತ್ತಿರುವವರು.

ಪದೇ ಪದೇ ಗರ್ಭಪಾತದ ಸಮಸ್ಯೆಯಿಂದ ಬಳಲುತ್ತಿರುವವರು. ಒಂದು ವರ್ಷಕ್ಕಿಂತ ಹೆಚ್ಚು ಕಾಲದಿಂದ ಗರ್ಭ ಧರಿಸಲು ಪ್ರಯತ್ನಿಸುತ್ತಿರುವವರು.

ಎರಡನೇ ಮಗುವಿಗಾಗಿ ಕಾಯುತ್ತಿರುವ ದಂಪತಿಗಳು ಈ ಶಿಬಿರದ ಪ್ರಯೋಜನ ಪಡೆಯಬಹುದು. ಮಕ್ಕಳಿಲ್ಲದ ಚಿಂತೆಯಲ್ಲಿರುವ ಮಹಿಳೆಯರು ಮತ್ತು ದಂಪತಿಗಳು ಈ ಉಚಿತ ಶಿಬಿರದಲ್ಲಿ ಭಾಗವಹಿಸಿ ತಜ್ಞ ವೈದ್ಯರಿಂದ ಸೂಕ್ತ ಮಾರ್ಗದರ್ಶನ ಹಾಗೂ ತಪಾಸಣೆ ಮಾಡಿಸಿಕೊಳ್ಳುವಂತೆ ಆಸ್ಪತ್ರೆಯ ಆಡಳಿತ ಮಂಡಳಿ ಕೋರಿದೆ.

# ಹೊಸ ಮೈಲಿಗಲ್ಲು ನಿರ್ಮಿಸಿದ ಸಹಯೋಗ

ಬೆಂಗಳೂರು

ಪ್ರಮುಖ ಸಾಮಾಜಿಕ ಪ್ರಭಾವದ ಸಂಸ್ಥೆಯಾದ ದಿ ಡಬ್ಲ್ಯೂಇ ಫೌಂಡೇಶನ್, ಜಾಗತಿಕ ತಂತ್ರಜ್ಞಾನ ಸಂಸ್ಥೆಯಾದ ಸಿಜಿಐ ಮತ್ತು ಬೆಂಗಳೂರಿನ ಖ್ಯಾತ ಬಿಇಎಸ್ ಪಾಲಿಟೆಕ್ನಿಕ್ ಸಹಯೋಗದೊಂದಿಗೆ ಆಯೋಜಿಸಿದ 'ಸೌರ ಪಿವಿ ಸ್ಥಾಪನಾ' ತರಬೇತಿ ಕಾರ್ಯಕ್ರಮದ ಪದವಿ ಪ್ರದಾನ ಸಮಾರಂಭ ಭರ್ಜರಿಯಾಗಿ ನಡೆಯಿತು.

ಸೌರ ಪಿವಿ ತಂತ್ರಜ್ಞರ ತರಬೇತಿ ಕೇಂದ್ರದಲ್ಲಿ ನಡೆದ ಪ್ರಮಾಣಪತ್ರ ವಿತರಣಾ ಸಮಾರಂಭವು ತರಬೇತಿ ಪಡೆದವರ ಸಾಧನೆಯನ್ನು ಗುರುತಿಸುವ ಮಹತ್ವದ ಕ್ಷಣವಾಗಿದ್ದು, ಕಾರ್ಯಕ್ರಮದ ಯಶಸ್ವಿ ಮುಕ್ತಾಯವನ್ನು ಸೂಚಿಸಿತು.



# ಅಂಬೇಡ್ಕರ್ ಜಯಂತಿ ಆಚರಣೆಗೆ ಸಿದ್ಧತೆ; ಸ್ತಬ್ಧಚಿತ್ರಗಳ ಭವ್ಯ ಮೆರವಣಿಗೆ

ಕೋಲಾರ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಹಯೋಗದಲ್ಲಿ ಭಾರತರತ್ನ, ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿ ಕಾರ್ಯಕ್ರಮವನ್ನು ಇದೇ 14 ರಂದು ನಗರದಲ್ಲಿ ಅತ್ಯಂತ ಅರ್ಥಪೂರ್ಣವಾಗಿ ಹಮ್ಮಿಕೊಳ್ಳಲಾಗಿದೆ.

ಅಂದು ಬೆಳಿಗ್ಗೆ 10 ಗಂಟೆಗೆ ನಗರದ



ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿರುವ ಬಾಬಾಸಾಹೇಬರ ಪ್ರತಿಮೆಗೆ ಮಾಲಾರ್ಪಣೆ ಮಾಡುವ ಮೂಲಕ ಚಾಲನೆ ನೀಡಲಾಗುವುದು. ಇದೇ ಸಂದರ್ಭದಲ್ಲಿ ವಿವಿಧ ಸ್ತಬ್ಧಚಿತ್ರಗಳ ಭವ್ಯ ಮೆರವಣಿಗೆಗೆ



ಗಣ್ಯರು ಚಾಲನೆ ನೀಡಲಿದ್ದಾರೆ. ನಂತರ ಮಧ್ಯಾಹ್ನ 2 ಗಂಟೆಗೆ ನಗರದ ಟಿ. ಚನ್ನಯ್ಯ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ.

ನಗರಾಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಬಿ.ಎಸ್. ಸುರೇಶ್ (ಬೈರತಿ ಸುರೇಶ್) ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಕೋಲಾರ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ. ಕೊತ್ತೂರು ಜಿ. ಮಂಜುನಾಥ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್, ಸಂಸದ ಎಂ. ಮಲ್ಲೇಶ್ ಬಾಬು, ಶಾಸಕರುಗಳಾದ ಎಸ್.ಎನ್. ನಾರಾಯಣಸ್ವಾಮಿ, ಡಾ. ರೂಪಕಲಾ ಶಶಿಧರ್, ಜಿ.ಕೆ. ವೆಂಕಟಶಿವಾರೆಡ್ಡಿ, ಸಮೃದ್ಧಿ ಮಂಜುನಾಥ್ ಹಾಗೂ ವಿಧಾನ ಪರಿಷತ್ ಸದಸ್ಯರು ಭಾಗವಹಿಸಲಿದ್ದಾರೆ.

ಇವರೊಂದಿಗೆ ವಿವಿಧ ನಿಗಮ ಮಂಡಳಿಗಳ ಅಧ್ಯಕ್ಷರು, ನ್ಯಾಯಾಧೀಶರು ಹಾಗೂ ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳು ಪಾಲ್ಗೊಳ್ಳಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

# ವಿಷಮುಕ್ತ ಆಹಾರ ಉತ್ಪಾದನೆಯತ್ತ ರೈತರು ಗಮನಹರಿಸಬೇಕು: ಡಿಸಿ ರವಿ

ಕೋಲಾರ

"ಇಂದಿನ ಕೃಷಿ ಪದ್ಧತಿಯಲ್ಲಿ ನಾವು ಅರಿವಿಲ್ಲದೆಯೇ ವಿಷವನ್ನು ಬೆಳೆದು ನಮ್ಮ ಮಕ್ಕಳಿಗೆ ಉಣಬಡಿಸುತ್ತಿದ್ದೇವೆ. ಈ ಅಪಾಯಕಾರಿ ಧೋರಣೆ ಬದಲಾಗಿ, ಜಿಲ್ಲೆಯ ಕೃಷಿಕರು ವಿಷಮುಕ್ತ ಆಹಾರ ಉತ್ಪಾದನೆಯತ್ತ ಹೆಜ್ಜೆ ಹಾಕಬೇಕು," ಎಂದು ಕೋಲಾರ ಜಿಲ್ಲಾಧಿಕಾರಿ ಡಾ. ಎಂ.ಆರ್. ರವಿ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕೃಷಿ ಇಲಾಖೆ ಸಹಯೋಗದಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಆಡಿಟೋರಿಯಂನಲ್ಲಿ ವಿಷಮುಕ್ತ ಆಹಾರ ಉತ್ಪಾದನೆ ಕಡೆಗೆ ಕೋಲಾರ ಜಿಲ್ಲೆಯ ಒಂದು ಹೆಜ್ಜೆ ಎಂಬ ಪರಿಕಲ್ಪನೆಯೊಂದಿಗೆ ಹಮ್ಮಿಕೊಂಡಿದ್ದ 'ಜೈವಿಕ ಗೊಬ್ಬರ ಹಾಗೂ ಸುರಕ್ಷಿತ ಕೀಟನಾಶಕಗಳ ಬಳಕೆ ಕುರಿತ ಜಿಲ್ಲಾ ಮಟ್ಟದ ಅರಿವು ಮೂಡಿಸುವ ಕಾರ್ಯಕ್ರಮ'ದ ಅಧ್ಯಕ್ಷತೆ ವಹಿಸಿ ಅವರು ಮಾತನಾಡುತ್ತಿದ್ದರು.

ಕೋಲಾರದ ಕೃಷಿಕರು ಇನ್ನು ಮುಂದೆ ವಿಷಮುಕ್ತ ಆಹಾರ ಉತ್ಪಾದನೆಯ ಕಡೆಗೆ ಗಮನ ಹರಿಸಬೇಕು. ಈ ಅರಿವು ಕಾರ್ಯಕ್ರಮ ಕೇವಲ ಜಿಲ್ಲಾ ಮಟ್ಟಕ್ಕೆ ಸೀಮಿತವಾಗದೆ ತಾಲೂಕು, ಹೋಬಳಿ ಮತ್ತು ಗ್ರಾಮ ಪಂಚಾಯತಿ ಮಟ್ಟಕ್ಕೂ ತಲುಪಬೇಕು. ಕೃಷಿ ಎನ್ನುವುದು ಕೇವಲ ಶ್ರಮವಲ್ಲ, ಅದೊಂದು ವಿಜ್ಞಾನ. ವಿವಿಗಳ ಜ್ಞಾನ ಕೇವಲ ಪುಸ್ತಕಕ್ಕೆ ಸೀಮಿತವಾಗದೆ ಭೂಮಿಯಲ್ಲಿ ಪ್ರಯೋಗವಾಗಬೇಕು. ವೈಜ್ಞಾನಿಕ ನೆಲೆಯಲ್ಲಿ ಕೃಷಿಯನ್ನು ಅರ್ಥ ಮಾಡಿಕೊಳ್ಳದಿದ್ದರೆ ಮುಂದಿನ ದಿನಗಳಲ್ಲಿ ಸಂಕಷ್ಟ ಎದುರಿಸಬೇಕಾಗುತ್ತದೆ ಎಂದರು.

ರೈತರು ಬೆಳೆಗಳಿಗೆ ರೋಗ ಬಂದಾಗ ನೇರವಾಗಿ ರಸಗೊಬ್ಬರಗಳ ಮಳಿಗೆಳಿಗೆ ಹೋಗುವ ಬದಲು ತಜ್ಞರ ಸಲಹೆ ಪಡೆಯಲು 'ಅಗ್ರಿ ಕ್ಲಿನಿಕ್'ಗಳನ್ನು ಸ್ಥಾಪಿಸುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಪ್ರಸ್ತುತ ಇರುವ ರೈತ ಸಂಪರ್ಕ ಕೇಂದ್ರಗಳನ್ನು ಈ ನಿಟ್ಟಿನಲ್ಲಿ



ಮೇಲ್ದರ್ಜೆಗೇರಿಸುವ ಯೋಜನೆಯಿದೆ.

ನಗರ ಪ್ರದೇಶದ ಕಸ ಅಥವಾ ತ್ಯಾಜ್ಯವನ್ನು ವೈಜ್ಞಾನಿಕವಾಗಿ ಸಂಸ್ಕರಿಸಿ ಗೊಬ್ಬರವನ್ನಾಗಿ ಮಾಡುವುದರಿಂದ ಭೂಮಿಯ ಫಲವತ್ತತೆ ಹೆಚ್ಚಿಸಬಹುದು. ಇದನ್ನು 'ತ್ಯಾಜ್ಯ ಲಕ್ಷ್ಮಿ' ಪರಿಕಲ್ಪನೆಯಡಿ ಲಾಭದಾಯಕವಾಗಿ ಬಳಸಿಕೊಳ್ಳಬಹುದು.

ಕೋಲಾರ ಜಿಲ್ಲೆಯ ತೋಟಗಾರಿಕೆ, ರೇಷ್ಮೆ ಮತ್ತು ಪಶುಸಂಗೋಪನೆ ಇಲಾಖೆಗಳನ್ನು ಒಳಗೊಂಡ ಸಮಗ್ರ ಕೃಷಿ ಅಭಿವೃದ್ಧಿಗೆ 'ರೋಡ್ ಮ್ಯಾಪ್' ಸಿದ್ಧಪಡಿಸಿ ನೀಲಿನಕ್ಷೆ ತಯಾರಿಸಲು ತಜ್ಞರ ಸಮಿತಿಯನ್ನು ರಚಿಸಲಾಗುವುದು ಎಂದರು.

ಜಿಲ್ಲೆಯ ಶೇ. 95ರಷ್ಟು ರೈತರು ಸಣ್ಣ ಹಿಡುವಳಿದಾರರಾಗಿದ್ದಾರೆ. ಕೇವಲ ಎರಡು ಹಸುಗಳನ್ನು ಕಟ್ಟಿಕೊಂಡು ಮಕ್ಕಳನ್ನು ಇಂಜಿನಿಯರ್, ಡಾಕ್ಟರ್ ಮಾಡಿದ ಖ್ಯಾತಿ ಕೋಲಾರದ ರೈತರಿಗಿದೆ. ಅಂತಹ ರೈತರ ಶ್ರಮಕ್ಕೆ ತಕ್ಕ ಪ್ರತಿಫಲ ಸಿಗಬೇಕಾದರೆ ಮಾರುಕಟ್ಟೆ ತಂತ್ರಗಾರಿಕೆ ಮತ್ತು ಮೌಲ್ಯವರ್ಧನೆ ಅತ್ಯಗತ್ಯ . ಇದಕ್ಕಾಗಿಯೇ ಸಂಸ್ಕರಣ ಘಟಕ ತೆರೆಯಬೇಕೆಂದು ಎಂದು ಜಿಲ್ಲಾಧಿಕಾರಿಗಳು ಅಭಿಪ್ರಾಯಪಟ್ಟರು.

ಜಿಲ್ಲೆಯಲ್ಲಿ ಕುಡಿಯುವ ನೀರು ಹಾಗೂ ಹಾಲಿನ ಕಲಬೆರಿಕೆ ಕಂಡುಬರುತ್ತಿದ್ದು, ತಪ್ಪಿತಸ್ಥರ ವಿರುದ್ಧ ಜಿಲ್ಲಾಡಳಿತ ಕಠಿಣ ಕ್ರಮ ಕೈಗೊಳ್ಳಲಿದೆ ಎಂದು ಎಚ್ಚರಿಕೆ ಸಹ ನೀಡಿದರು.

ಕೃಷಿ ಜಂಟಿ ನಿರ್ದೇಶಕರಾದ ಜಾವೇದಾ ನಸೀಮಾ ಖಾನಮ್ ಅವರು ಪ್ರಸ್ತಾವಿಕವಾಗಿ ಮಾತನಾಡಿ ಜಿಲ್ಲೆಯ ಮಣ್ಣಿನ ಪರೀಕ್ಷಾ ವರದಿಗಳ ಪ್ರಕಾರ, ಮಣ್ಣಿನಲ್ಲಿ ಸಾರಜನಕ ಮತ್ತು ಸಾವಯವ ಇಂಗಾಲದ ಪ್ರಮಾಣ ಶೇ 0.5ಕ್ಕಿಂತ ಕಡಿಮೆಯಾಗಿದೆ. ರಾಸಾಯನಿಕ ಗೊಬ್ಬರಗಳ ಅತಿಯಾದ ಮತ್ತು ಅಸಮತೋಲಿತ ಬಳಕೆಯಿಂದ ಮಣ್ಣಿನ ಗುಣಮಟ್ಟ ಕ್ಷೀಣಿಸುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದರು. "ನಮ್ಮ ಜಿಲ್ಲೆಗೆ ಅವಶ್ಯಕತೆಗಿಂತ ಎರಡು ಪಟ್ಟು ಹೆಚ್ಚು ರಸಗೊಬ್ಬರ ಬಳಕೆಯಾಗುತ್ತಿದೆ. ಇದನ್ನು ತಡೆದು ಸಮತೋಲಿತ ಗೊಬ್ಬರ ಬಳಕೆಗೆ ರೈತರು ಮುಂದಾಗಬೇಕು" ಎಂದು ಅವರು ಕರೆ ನೀಡಿದರು.

ವೃತ್ತಪತ್ರಿಕೆಗಳಲ್ಲಿ ಬಂದ ವರದಿಗಳಂತೆ ಕೋಲಾರ ಮತ್ತು ಸುತ್ತಮುತ್ತಲಿನ ಜಿಲ್ಲೆಗಳಲ್ಲಿ ಬೆಳೆಯುವ ಟೊಮ್ಯಾಟೋ, ಬೀನ್ಸ್ ಮುಂತಾದ ಬೆಳೆಗಳಲ್ಲಿ ಕೀಟನಾಶಕಗಳ ಅವಶೇಷಗಳು ಅಪಾಯಕಾರಿ ಮಟ್ಟದಲ್ಲಿವೆ. ಇದು ಮನುಷ್ಯನ ಆರೋಗ್ಯದ ಮೇಲೆ ತೀವ್ರ ಪರಿಣಾಮ ಬೀರುತ್ತಿದ್ದು, ಪಂಜಾಬ್‌ನಂತಹ ರಾಜ್ಯಗಳಲ್ಲಿ ಕಂಡುಬಂದ 'ಕ್ಯಾನ್ಸರ್ ಟ್ರೈನ್' ನಂತಹ ಪರಿಸ್ಥಿತಿ ನಮ್ಮ ಜಿಲ್ಲೆಗೆ ಬರುವುದು ಬೇಡ ಎಂದು ಅವರು ಎಚ್ಚರಿಸಿದರು.

ಕೀಟ ಮತ್ತು ರೋಗಗಳ ನಿಖರ ಗುರುತಿಸುವಿಕೆ ಹಾಗೂ ಶಿಫಾರಸು ಮಾಡಿದ ಪ್ರಮಾಣದಲ್ಲಿ ಮಾತ್ರ ಔಷಧ ಸಿಂಪಡಣೆ ಮಾಡಬೇಕು. ಒಂದೇ ಬೆಳೆಯನ್ನು ಪದೇ ಪದೇ ಬೆಳೆಯುವ ಬದಲು ಅಂತರ ಬೆಳೆ ಪದ್ಧತಿ ಅಳವಡಿಸಿಕೊಳ್ಳುವುದು ಮುಖ್ಯ ಈಗಾಗಲೇ ತಾಲ್ಲೂಕು ಮಟ್ಟದ ರಸಗೊಬ್ಬರ ಮತ್ತು ಕೀಟನಾಶಕ ಡೀಲರ್‌ಗಳಿಗೆ ತಾಂತ್ರಿಕ ತರಬೇತಿ ನೀಡಲಾಗಿದ್ದು, ಮುಂದಿನ ಹಂತದಲ್ಲಿ ಹೋಬಳಿ ಮತ್ತು ಗ್ರಾಮ ಮಟ್ಟದಲ್ಲಿ ರೈತರಿಗೆ ತರಬೇತಿ ನೀಡಲಾಗುವುದು. ಕೃಷಿ ವಿಜ್ಞಾನ ಕೇಂದ್ರ ಮತ್ತು ಜಿಕೆವಿಕೆ ವಿಜ್ಞಾನಿಗಳ ಸಲಹೆ ಪಡೆದು ವಿಷಮುಕ್ತ ಕೃಷಿಯತ್ತ ಹೆಜ್ಜೆ ಇಡುವುದು ಅವಶ್ಯಕ ಎಂದರು.

ಕಾರ್ಯಕ್ರಮದಲ್ಲಿ ರೈತರು ತಮ್ಮ ಸಮಸ್ಯೆಗಳನ್ನು ಹಂಚಿಕೊಳ್ಳಲು ಮುಕ್ತ ಅವಕಾಶ ನೀಡಲಾಗಿದ್ದು, ತಾಂತ್ರಿಕ ಮಾಹಿತಿ ಪಡೆದುಕೊಳ್ಳುವಂತೆ ಜಂಟಿ ನಿರ್ದೇಶಕರು ಕೋರಿದರು.

ಈ ಕಾರ್ಯಕ್ರಮವು ಜಿಲ್ಲೆಯಲ್ಲಿ ಸುಸ್ಥಿರ ಮತ್ತು ಆರೋಗ್ಯಕರ ಕೃಷಿ ಪದ್ಧತಿಗೆ ನಾಂದಿಯಾಗಲಿದೆ ಎಂಬ ಆಶಯ ಅವರು ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಉಪ ಕೃಷಿ ನಿರ್ದೇಶಕರಾದ ಎಸ್. ನಾಗರಾಜ್, ಐ.ಸಿ.ಎ.ಆರ್ ದೆಹಲಿಯ ನಿವೃತ್ತ ಸಹಾಯಕ ಮಹಾನಿರ್ದೇಶಕ ಡಾ. ಭಾಸ್ಕರ್, ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕ ಕುಮಾರಸ್ವಾಮಿ, ಕೃಷಿ ಕಾಲೇಜು ಡೀನ್ ಆಂಜಿನಪ್ಪ, ಕೋಲಾರ ಕೆ.ವಿ.ಕೆ ಮುಖ್ಯಸ್ಥ ಶಿವಾನಂದ ಹೊಂಗಲ್, ಪಶುಸಂಗೋಪನಾ ಇಲಾಖೆಯ ವಿಜಯ್ ಪಾಟೀಲ್, ವಾರ್ತಾ ಇಲಾಖೆಯ ಹಿರಿಯ ನಿರ್ದೇಶಕಿ ಡಾ. ಕೆ.ಎನ್.ಕವನ, ಇಫ್ಕೊ ಸಂಸ್ಥೆಯ ಚೇತನ್,ಅರೆಕಲ್ ಜೈವಿಕ ಗೊಬ್ಬರ ಸಂಸ್ಥೆಯ ಡಾ. ದಿವಾಕರ್ ಕೃಷಿ ಇಲಾಖೆಯ ಅಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯದ ತಜ್ಞರು ಹಾಗೂ ಜಿಲ್ಲೆಯ ನೂರಾರು ಪ್ರಗತಿಪರ ರೈತರು ಭಾಗವಹಿಸಿದ್ದರು.

# ಹೆಚ್‌ಪಿ ಗ್ಯಾಸ್ ವಿತರಣೆಯಲ್ಲಿ ವಿಳಂಬ; ಗ್ರಾಹಕರು ಹೈರಾಣು



ಬಂಗಾರಪೇಟೆ

ಪಟ್ಟಣದ ರಘುಮಕ್ಷಿ ಹೆಚ್‌ಪಿ ಗ್ಯಾಸ್ ಏಜೆನ್ಸಿಯಲ್ಲಿ ಗೃಹ ಬಳಕೆಯ ಸಿಲಿಂಡರ್‌ಗಳ ವಿತರಣೆ ವ್ಯವಸ್ಥೆ ಸಂಪೂರ್ಣ ಹದಗೆಟ್ಟಿದ್ದು, ಗ್ರಾಹಕರು ಪ್ರತಿದಿನ ಕಾಲಿ ಸಿಲಿಂಡರ್ ಹೊತ್ತು ಗಂಟೆಗಟ್ಟಲೆ ಸಾಲಿನಲ್ಲಿ ನಿಲ್ಲಬೇಕಾದ ದುಸ್ಥಿತಿ ನಿರ್ಮಾಣವಾಗಿದೆ.

ನಿಯಮದ ಪ್ರಕಾರ ಸಿಲಿಂಡರ್‌ಗಳನ್ನು ಗ್ರಾಹಕರ ಮನೆ ಬಾಗಿಲಿಗೇ ತಲುಪಿಸಬೇಕಿದ್ದರೂ, ಇಲ್ಲಿನ ಏಜೆನ್ಸಿಯಲ್ಲಿ ಉಲ್ಟಾ ವ್ಯವಸ್ಥೆ ಜಾರಿಯಲ್ಲಿದೆ. ಸಿಲಿಂಡರ್ ಪಡೆಯಲು ಗ್ರಾಹಕರು ಬೆಳಿಗ್ಗೆ 6 ಗಂಟೆಯಿಂದಲೇ ಏಜೆನ್ಸಿ ಮುಂದೆ ಸಾಲು ನಿಲ್ಲುತ್ತಿದ್ದಾರೆ. ಬುಕ್ಕಿಂಗ್ ಮಾಡಿದ ನಂತರ ಮೊಬೈಲ್‌ಗೆ 'ಡೆಲಿವರಿ ಮಾಹಿತಿ' ಹಾಗೂ ಒಟಿಪಿ ಸಂದೇಶ ಬಂದರೂ, ಸಿಲಿಂಡರ್ ಮಾತ್ರ ಮನೆಗೆ ತಲುಪುತ್ತಿಲ್ಲ ಎಂಬುದು ಗ್ರಾಹಕರ ಪ್ರಮುಖ ಆಕ್ಷೇಪವಾಗಿದೆ.

ಗ್ರಾಹಕರು ಮೊದಲು ಕಾಲಿ ಸಿಲಿಂಡರ್‌ನೊಂದಿಗೆ ಸರದಿಯಲ್ಲಿ ನಿಲ್ಲಬೇಕು. ನಂತರ 9 ಗಂಟೆಗೆ ಕಚೇರಿ ತೆರೆದ ಬಳಿಕ ಹಣ ಪಾವತಿಸಿ ರಸೀದಿ ಪಡೆಯಬೇಕು. ಈ ಪ್ರಕ್ರಿಯೆ ಮುಗಿದ ನಂತರವೇ ಲಾರಿಯಿಂದ ಸಿಲಿಂಡರ್ ನೀಡಲಾಗುತ್ತಿದೆ. ಒಂದು ವೇಳೆ ಲಾರಿಯಲ್ಲಿನ ಸ್ಟಾಕ್ ಮುಗಿದರೆ, ಗಂಟೆಗಟ್ಟಲೆ ಕಾದ ಗ್ರಾಹಕರು ಬರಿಗೈನಲ್ಲಿ ವಾಪಸ್ ಹೋಗಬೇಕಾದ ಪರಿಸ್ಥಿತಿ ಇದೆ. ಇದರಿಂದ ದಿನಗೂಲಿ ಕಾರ್ಮಿಕರು, ವಯೋವೃದ್ಧರು ಹಾಗೂ ಗೃಹಿಣಿಯರ ಅಡುಗೆ ವ್ಯವಸ್ಥೆ ಸಂಪೂರ್ಣ ಅಸ್ತವ್ಯಸ್ತಗೊಂಡಿದೆ.

ಈ ಕುರಿತು ಏಜೆನ್ಸಿಯ ಸಿಬ್ಬಂದಿಯೊಬ್ಬರು ಪ್ರತಿಕ್ರಿಯಿಸಿ, "ನಮಗೆ ಪ್ರತಿದಿನ ಕೇವಲ 504 ಸಿಲಿಂಡರ್‌ಗಳು ಮಾತ್ರ ಪೂರೈಕೆಯಾಗುತ್ತಿವೆ. ಆದರೆ ಗ್ರಾಹಕರಿಂದ ಪ್ರತಿನಿತ್ಯ 1,000ಕ್ಕೂ ಹೆಚ್ಚು ಸಿಲಿಂಡರ್‌ಗಳಿಗೆ ಬೇಡಿಕೆ ಇದೆ. ಈ ಅಂತರವೇ ವಿಳಂಬಕ್ಕೆ ಕಾರಣ," ಎಂದು ತಿಳಿಸಿದ್ದಾರೆ.

ವಿತರಣಾ ವ್ಯವಸ್ಥೆಯಲ್ಲಿನ ಈ ಲೋಪವನ್ನು ಸರಿಪಡಿಸಲು ಜಿಲ್ಲಾಡಳಿತ ಹಾಗೂ ಆಹಾರ ಇಲಾಖೆಯ ಅಧಿಕಾರಿಗಳು ತಕ್ಷಣ ಮಧ್ಯಪ್ರವೇಶಿಸಿ, ಮನೆ ಬಾಗಿಲಿಗೆ ವಿತರಣೆ ಮಾಡುವುದನ್ನು ಖಚಿತಪಡಿಸಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

# ಸರ್ವ ಧರ್ಮ ಸಮನ್ವಯದ ಸಂಕೇತವಾಗಿ ಸಂಪನ್ನಗೊಂಡ ದ್ರೌಪದಮ್ಮನ ಬೃಹತ್ ಹಬ್ಬ

ಕೋಲಾರ

ತಾಲೂಕಿನ ವೇಮಗಲ್ ಪಟ್ಟಣದ ಶ್ರೀ ದ್ರೌಪದಮ್ಮ ಧರ್ಮರಾಯಸ್ವಾಮಿ ದೇವಿಯ 51ನೇ ವರ್ಷದ ಐತಿಹಾಸಿಕ ಕರಗ ಮಹೋತ್ಸವವು ಸಹಸ್ರಾರು ಭಕ್ತಾದಿಗಳ ಹರ್ಷೋದ್ಗಾರ ಹಾಗೂ ಭಕ್ತಿ ಸಡಗರದ ನಡುವೆ ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್, ಶಾಸಕ ಕೊತ್ತೂರು ಮಂಜುನಾಥ್, ಎಂಎಲ್ಸಿ ಎಂ.ಎಲ್ ಅನಿಲ್ ಕುಮಾರ್ ಭಾಗವಹಿಸಿದ್ದರು

ರಾಜ್ಯ ಮಟ್ಟದಲ್ಲಿ ಖ್ಯಾತಿ ಪಡೆದಿರುವ ಈ ಕರಗ ಮಹೋತ್ಸವವು ಜಾತಿ–ಮತಗಳ ಬೇಧವಿಲ್ಲದೆ ಸರ್ವಧರ್ಮಗಳ ಸಮನ್ವಯತೆಯ ಸಂಕೇತವಾಗಿ ನೆರವೇರಿದ್ದು, ಪಟ್ಟಣದ ಮನೆಮನಗಳಲ್ಲಿ ಹಬ್ಬದ ಸಂಭ್ರಮ ಮನೆಮಾಡಿತ್ತು. ಈ ಬಾರಿಯ ಮಹೋತ್ಸವದ ಪ್ರಮುಖ ಆಕರ್ಷಣೆಯಾಗಿ ಕರಗ ಪೂಜಾರಿ ಜಗದೀಶ್ ಅವರು ಸತತ 11ನೇ ವರ್ಷವೂ ಅತ್ಯಂತ ಶ್ರದ್ಧಾಭಕ್ತಿಯಿಂದ ಸತತ 22 –23 ಗಂಟೆಗಳ ಕಾಲ ಕರಗ ಹೊತ್ತು ಸಾಗುವ ಮೂಲಕ ಜಿಲ್ಲೆಯ ಗಮನ ಸೆಳೆದರು.

ಒಟ್ಟು ಏಳು ದಿನಗಳ ಕಾಲ ನಡೆದ ವಿವಿಧ ಧಾರ್ಮಿಕ ವಿಧಿವಿಧಾನಗಳ ಮುಖ್ಯ ಭಾಗವಾಗಿ ಗುರುವಾರ ರಾತ್ರಿ ಕರಗ ಮಹೋತ್ಸವವು ವಿದ್ಯುಕ್ತವಾಗಿ ಚಾಲನೆ ಪಡೆಯಿತು. ಹಳದಿ ವರ್ಣದ ಸೀರೆ ಉಟ್ಟು, ಮಲ್ಲಿಗೆ ಹೂವಿನಿಂದ ಸುಂದರವಾಗಿ ಅಲಂಕೃತಗೊಂಡಿದ್ದ ಹೂವಿನ ಕರಗವನ್ನು ಹೊತ್ತು ಪೂಜಾರಿ ಜಗದೀಶ್ ಅವರು ಧರ್ಮರಾಯಸ್ವಾಮಿ ದೇಗುಲದಿಂದ ಹೊರಬರುತ್ತಿದ್ದಂತೆ ನೆರೆದಿದ್ದ ಭಕ್ತಸಾಗರವು ಚಪ್ಪಾಳೆ ಮತ್ತು 'ಗೋವಿಂದ ಗೋವಿಂದ' ಎಂಬ ನಾಮಸ್ಮರಣೆಯೊಂದಿಗೆ ಬರಮಾಡಿಕೊಂಡಿತು. ಕರಗ ಸಾಗುವ ಹಾದಿಯುದ್ದಕ್ಕೂ ಭಕ್ತರು ಮಲ್ಲಿಗೆ ಹೂವಿನ ಮಳೆಗರೆಯುತ್ತಾ, ಹೂವಿನ ನೆಲಹಾಸು ನಿರ್ಮಿಸಿ ಭಕ್ತಿ ಸಮರ್ಪಿಸಿದರು. ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ತಂಡೋಪತಂಡವಾಗಿ ಜಮಾಯಿಸಿದ್ದ ಜನರು, ತಮ್ಮ ಮನೆಗಳ ಮುಂದೆ ರಂಗೋಲಿ ಬಿಡಿಸಿ, ತಳಿರು ತೋರಣಗಳಿಂದ ಸ್ವಾಗತಿಸಿ ಮಹಿಳೆಯರು ಕರಗಕ್ಕೆ ವಿಶೇಷ ಪೂಜೆ ಸಲ್ಲಿಸಿ ಹರಕೆ ತೀರಿಸಿದರು.

ಈ ಮಹೋತ್ಸವದ ಮತ್ತೊಂದು ವಿಶೇಷವೆಂದರೆ ಇಲ್ಲಿನ ಧಾರ್ಮಿಕ ಸಾಮರಸ್ಯ. ಸಂಪ್ರದಾಯದಂತೆ ಕರಗವು ಪಟ್ಟಣದ ದರ್ಗಾಕ್ಕೆ ಭೇಟಿ ನೀಡಿದಾಗ ಮುಸ್ಲಿಂ ಬಾಂಧವರು ವಿಶೇಷ ಪ್ರಾರ್ಥನೆ ಮತ್ತು ಪೂಜೆಗಳನ್ನು ಸಲ್ಲಿಸುವ ಮೂಲಕ ಸೌಹಾರ್ದತೆಯನ್ನು ಮೆರೆದರು. ಕೈಯಲ್ಲಿ ಕತ್ತಿ ಹಿಡಿದಿದ್ದ ವೀರಕುಮಾರರು ಗೋವಿಂದ ನಾಮಸ್ಮರಣೆಯೊಂದಿಗೆ



ಕರಗವು ಪಟ್ಟಣದಾದ್ಯಂತ ಸಂಚರಿಸಿತು.

ಮಿನಿ ಕ್ರೀಡಾಂಗಣದಲ್ಲಿ ನಿರ್ಮಿಸಲಾಗಿದ್ದ ವೇದಿಕೆಯಲ್ಲಿ ಪೂಜಾರಿ ಜಗದೀಶ್ ಅವರು ತಮಟೆಯ ವಾದನಕ್ಕೆ ತಕ್ಕಂತೆ ವಿವಿಧ ಭಂಗಿಗಳಲ್ಲಿ ನೀಡಿದ ಅದ್ಭುತ ನೃತ್ಯ ಪ್ರದರ್ಶನವು ಭಕ್ತರನ್ನು ಮಂತ್ರಮುಗ್ಧಗೊಳಿಸಿತು. ಕರಗ ಹೊತ್ತ ಕ್ಷಣದಿಂದ ಅದು ಇಳಿಯುವವರೆಗೂ ಜಗದೀಶ್ ಅವರ ಮುಖದಲ್ಲಿ ಅರಳಿದ್ದ ಮಂದಹಾಸ ಮತ್ತು ಚೈತನ್ಯವು ದೇವಿಯ ಪವಾಡವೇ ಸರಿ ಎಂದು ಭಕ್ತರು ಕೊಂಡಾಡಿದರು.

ಮಹೋತ್ಸವದ ಅಂತಿಮ ಘಟ್ಟವಾಗಿ ಅಗ್ನಿಕುಂಡ ಪ್ರವೇಶ ಕಾರ್ಯಕ್ರಮವು ಅತ್ಯಂತ ಭಾವುಕವಾಗಿ ನೆರವೇರಿತು. ಗುರುವಾರ ರಾತ್ರಿಯಿಡೀ ಸಂಚರಿಸಿದ ಕರಗವು ಮರುದಿನ ಶುಕ್ರವಾರ ಸಂಜೆಯ ವೇಳೆಗೆ ದೇವಾಲಯದ ಮುಂಭಾಗ ಸಜ್ಜುಗೊಂಡಿದ್ದ ಅಗ್ನಿಕುಂಡದ ಬಳಿ ಆಗಮಿಸಿತು. ಈ ವೇಳೆ ವೀರಕುಮಾರರು ತಮ್ಮ ಆರಾಧ್ಯ ದೈವದ ದರ್ಶನ ಪಡೆಯಲು ಮತ್ತೆ ಒಂದು ವರ್ಷ ಕಾಯಬೇಕೆಂಬ ನೋವನ್ನು ಭಕ್ತಿಯ ಅಲಗು ಸೇವೆ ಮೂಲಕ ಹೊರಹಾಕಿದ ದೃಶ್ಯವು ಭಕ್ತರ ಕಣ್ಣುಗಳಲ್ಲಿ ನೀರು ತರಿಸಿತು. ಸಹಸ್ರಾರು ಭಕ್ತರ ಸಮ್ಮುಖದಲ್ಲಿ ಜಗದೀಶ್ ಅವರು ಅಗ್ನಿಕುಂಡ ಪ್ರವೇಶಿಸಿ ಕರಗವನ್ನು ಯಶಸ್ವಿಯಾಗಿ ಗರ್ಭಗುಡಿ ಸೇರಿಸುವ ಮೂಲಕ 51ನೇ ವರ್ಷದ ಸಂಭ್ರಮಕ್ಕೆ ಮಂಗಲ ಹಾಡಿದರು.

ವಿವಿಧ ಸಂಘಟನೆಗಳ ವತಿಯಿಂದ ಸಹಸ್ರಾರು ಭಕ್ತರಿಗಾಗಿ ಅನ್ನದಾನ ಕಾರ್ಯಕ್ರಮ, ಪಾನಕ–ಮಜ್ಜಿಗೆ ಕೋಸಂಬರಿ ವಿತರಣೆಯ ವ್ಯವಸ್ಥೆಯನ್ನು ಹಮ್ಮಿಕೊಂಡಿದ್ದವು.

ಜಿಲ್ಲಾ ರಕ್ಷಣಾಧಿಕಾರಿಗಳ ಮಾರ್ಗದರ್ಶನದಲ್ಲಿ ಹಾಗೂ ವೇಮಗಲ್ ಇನ್ಸ್ ಪೆಕ್ಟರ್ ಬಿ.ಪಿ. ಮಂಜು ಅವರ ನೇತೃತ್ವದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಕಲ್ಪಿಸಲಾಗಿತ್ತು.

ಪಟ್ಟಣದ ವಿವಿಧ ದೇವಾಲಯಗಳ 25ಕ್ಕೂ ಹೆಚ್ಚು ಪಲ್ಲಕ್ಕಿಗಳ ಮೆರವಣಿಗೆ ಮತ್ತು ಝಗಮಗಿಸುವ ವಿದ್ಯುತ್ ದೀಪಾಲಂಕಾರದಿಂದ ವೇಮಗಲ್ ಪಟ್ಟಣವು ಈ ಐತಿಹಾಸಿಕ ಕ್ಷಣಕ್ಕೆ ಸಾಕ್ಷಿಯಾಯಿತು.

ಈ ಸಂದರ್ಭದಲ್ಲಿ ಮಾಜಿ ಶಾಸಕ ವರ್ತೂರ್ ಪ್ರಕಾಶ್, ಜೆಡಿಎಸ್ ಮುಖಂಡ ಹೂಡಿ ವಿಜಯ್ ಕುಮಾರ್, ಪಪಂ ಉಪಾಧ್ಯಕ್ಷ ಸಿ.ಎಸ್ ವೆಂಕಟೇಶ್, ಸಿಎಂಆರ್ ಶ್ರೀನಾಥ್, ಮುಖಂಡರಾದ ಉದಯ್ ಕುಮಾರ್, ಕುರ್ಕಿ ರಾಜೇಶ್ವರಿ, ಕುಲದ ಗೌಡರಾದ ಚಿಕ್ಕಮುನಿಯಪ್ಪ, ಯಜಮಾನ್ ಅಶ್ವಥಪ್ಪ, ಅಧ್ಯಕ್ಷ ರಾಜೇಂದ್ರ ಪ್ರಸಾದ್, ಪ್ರಾಧಿಕಾರ ಅಧ್ಯಕ್ಷ ಉರಟ ಅಗ್ರಹಾರ ಚೌಡರೆಡ್ಡಿ, ಕೋಮುಲ್ ನಿರ್ದೇಶಕ ಚಂಜಿಮಲೆ ರಮೇಶ್, ಗ್ಯಾರಂಟಿ ಯೋಜನೆಗಳ ಜಿಲ್ಲಾಧ್ಯಕ್ಷ ಶಿವಕುಮಾರ್, ತಾಲ್ಲೂಕು ಅಧ್ಯಕ್ಷ ವಿ.ಎಂ ಮುನಿಯಪ್ಪ, ಮೈಲಾಂಡಹಳ್ಳಿ ಮುರಳಿ, ಪ್ರಾಧಿಕಾರ ಸದಸ್ಯ ಬಿ ನಾಗರಾಜ್, ವಹ್ನಿಕುಲ ಸಂಘದ ಗೌರವಾಧ್ಯಕ್ಷರುಗಳು, ಉಪಾಧ್ಯಕ್ಷರುಗಳು, ಸರ್ವ ಪದಾಧಿಕಾರಿಗಳು, ವೀರಕುಮಾರರು, ವಿವಿಧ ಜಿಲ್ಲೆಗಳ ಅಪಾರ ಭಕ್ತರು ಆಗಮಿಸಿ ಕರಗ ದರ್ಶನ ಪಡೆದರು.

# ಪರವಾನಗಿ ಇಲ್ಲದೆ ಎಗ್ಗಿಲ್ಲದೆ ನಡೆಯುತ್ತಿದೆ ಫೈನಾನ್ಸ್ ದಂಧೆ

ಬೂದಿಕೋಟೆ



"ಸರ್ಕಾರದ ನಿಯಮಗಳನ್ನು ಗಾಳಿಗೆ ತೂರಿ ಖಾಸಗಿ ಫೈನಾನ್ಸ್‌ಗಳು ಬಡವರು ಹಾಗೂ ರೈತರ ಹಣವನ್ನು ಕೊಳ್ಳೆ ಹೊಡೆಯುತ್ತಿವೆ. ಅಕ್ರಮವಾಗಿ ನಡೆಯುತ್ತಿರುವ ಇಂತಹ ದಂಧೆಗಳನ್ನು ತಡೆಯಬೇಕಾದ ಅಧಿಕಾರಿಗಳು ಮೌನ ವಹಿಸಿರುವುದು ಹಲವು ಅನುಮಾನಗಳಿಗೆ ಎಡೆಮಾಡಿಕೊಟ್ಟಿದೆ," ಎಂದು ಸ್ವಾಭಿಮಾನ ರೈತ ಸಂಘದ ಸಂಸ್ಥಾಪಕ ರಾಜ್ಯಾಧ್ಯಕ್ಷ ಐತಾಂಡಹಳ್ಳಿ ಮಂಜುನಾಥ್ ಆಕ್ರೋಶ ವ್ಯಕ್ತಪಡಿಸಿದರು.

ನಗರದ ಕೋಲಾರ ಮುಖ್ಯ ರಸ್ತೆಯಲ್ಲಿರುವ ಅಂಬೇಡ್ಕರ್ ಪುತ್ಥಳಿ ಬಳಿ ಪತ್ರಿಕಾ ಹೇಳಿಕೆ ನೀಡಿದ ಅವರು, ವೆಂಕಟೇಶ್ವರನ್ ಮಾಲೀಕತ್ವದ ಶ್ರೀ ಸಾಯಿ ಕೃಷ್ಣ ಫೈನಾನ್ಸ್ ಮತ್ತು ಚಿಟ್ ಫಂಡ್ ಸಂಸ್ಥೆಯ ವಿರುದ್ಧ ಗಂಭೀರ ವಂಚನೆಯ ಆರೋಪ ಮಾಡಿದರು.

"ಈ ಸಂಸ್ಥೆಯು 2015 ರಲ್ಲಿ ಪರವಾನಗಿ ಪಡೆದು ವ್ಯವಹಾರ ಆರಂಭಿಸಿತ್ತು. ಆದರೆ 2018 ರ ನಂತರ ವ್ಯವಹಾರ ಸ್ಥಗಿತಗೊಳಿಸಿರುವುದಾಗಿ ಅಧಿಕಾರಿಗಳಿಗೆ ಸುಳ್ಳು ಮಾಹಿತಿ ನೀಡಿ, ಪರವಾನಗಿ ನವೀಕರಿಸದೆ ಇಂದಿನವರೆಗೂ (2026) ನಿಯಮಬಾಹಿರವಾಗಿ ಲಕ್ಷಾಂತರ ರೂಪಾಯಿಗಳ ಲೇವಾದೇವಿ ನಡೆಸುತ್ತಿದೆ. 2015 ರಿಂದ ಈವರೆಗಿನ ಯಾವುದೇ ಲೆಕ್ಕಪತ್ರಗಳನ್ನು ಇಲಾಖೆಗೆ ಸಲ್ಲಿಸದೆ ಸರ್ಕಾರಕ್ಕೆ ದೊಡ್ಡ ಪ್ರಮಾಣದ ತೆರಿಗೆ ವಂಚನೆ ಮಾಡಲಾಗಿದೆ," ಎಂದು ಮಂಜುನಾಥ್ ವಿವರಿಸಿದರು.

2018 ರಲ್ಲಿ ವ್ಯವಹಾರ ರದ್ದುಪಡಿಸಿರುವುದಾಗಿ ಹೇಳಿದರೂ, ಮಾಲೀಕರು ಅಕ್ರಮವಾಗಿ ಫೈನಾನ್ಸ್ ನಡೆಸುತ್ತಿರುವುದು ಕಪ್ಪು ಹಣದ ಸಂಗ್ರಹಕ್ಕೆ ವೇದಿಕೆಯನ್ನಾಗಿಸಿಕೊಂಡಿರುವ ಸಂಶಯವನ್ನು ಹುಟ್ಟುಹಾಕಿದೆ.

ಸಾವಿರಾರು ಬಡವರು ಮತ್ತು ಶ್ರಮಿಕ ವರ್ಗದವರು ತಮ್ಮ ಕಷ್ಟದ ದುಡಿಮೆಯನ್ನು ಇಲ್ಲಿ ಹೂಡಿಕೆ ಮಾಡಿದ್ದಾರೆ. ಒಂದು ವೇಳೆ ಸಂಸ್ಥೆ ನಷ್ಟ ಹೊಂದಿದರೆ ಅವರ ಗತಿ ಏನು? ಎಂದು ಅವರು ಪ್ರಶ್ನಿಸಿದರು.

ಈ ಕೂಡಲೇ ಸಂಬಂಧಪಟ್ಟ ಅಧಿಕಾರಿಗಳು ಈ ಅಕ್ರಮ ಫೈನಾನ್ಸ್ ವಿರುದ್ಧ ದಾಳಿ ನಡೆಸಿ, ತನಿಖೆ ಕೈಗೊಂಡು ಮಾಲೀಕರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕು ಎಂದು ರೈತ ಸಂಘ ಆಗ್ರಹಿಸಿದೆ.

# ಇಂದು ಉಚಿತ ಆರೋಗ್ಯ ಶಿಬಿರ

ಕೆ.ಜಿ.ಎಫ್

ನಗರಸಭೆ ವ್ಯಾಪ್ತಿಯ 29ನೇ ಗಣೇಶ್‌ಪುರಂ ವಾರ್ಡಿನ ನಾಚಪಲ್ಲಿಯಲ್ಲಿ ಇದೇ 12ರ ಭಾನುವಾರ ಬೃಹತ್ ಉಚಿತ ವೈದ್ಯಕೀಯ ತಪಾಸಣಾ ಶಿಬಿರವನ್ನು ಆಯೋಜಿಸಲಾಗಿದೆ. ಬೆಂಗಳೂರಿನ ಖ್ಯಾತ ವೈದೇಹಿ ಆಸ್ಪತ್ರೆಯ ಸಹಯೋಗದೊಂದಿಗೆ ಡಾ. ಅಂಬೇಡ್ಕರ್ ಯುವಕರ ಸಂಘ ಈ ಸಮಾಜಮುಖಿ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.

ಸ್ಥಳ ಮತ್ತು ಸಮಯ: ನಾಚಪಲ್ಲಿಯ ನೀರಿನ ಟ್ಯಾಂಕ್ ಆವರಣದಲ್ಲಿ ಅಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 3 ಗಂಟೆಯವರೆಗೆ ಶಿಬಿರ ನಡೆಯಲಿದೆ.

ಶಿಬಿರದ ವಿಶೇಷತೆಗಳು:

ತಜ್ಞ ವೈದ್ಯರ ಸಮಾಲೋಚನೆ:

ವೈದೇಹಿ ಆಸ್ಪತ್ರೆಯ ವಿವಿಧ ವಿಭಾಗಗಳ ತಜ್ಞ ವೈದ್ಯರು ಹಾಗೂ ಆರೋಗ್ಯ ಸಿಬ್ಬಂದಿಗಳು ಎಲ್ಲಾ ತರಹದ ಕಾಯಿಲೆಗಳಿಗೆ ಉಚಿತ ತಪಾಸಣೆ ನಡೆಸಲಿದ್ದಾರೆ.

ಉಚಿತ ಪರೀಕ್ಷೆಗಳು: ಶಿಬಿರಕ್ಕೆ ಬರುವ ಸಾರ್ವಜನಿಕರಿಗೆ ಬಿಪಿ (ರಕ್ತದೊತ್ತಡ), ಸಕ್ಕರೆ ಕಾಯಿಲೆ (ಶುಗರ್) ಪರೀಕ್ಷೆಗಳ ಜೊತೆಗೆ ಹೃದ್ರೋಗಕ್ಕೆ ಸಂಬಂಧಿಸಿದ ಎಕೋ ಮತ್ತು ಇಸಿಜಿ ಪರೀಕ್ಷೆಗಳನ್ನು ಸ್ಥಳದಲ್ಲೇ ನಡೆಸಿ ವರದಿ ನೀಡಲಾಗುವುದು.

ಔಷಧಿ ವಿತರಣೆ: ತಪಾಸಣೆಗೊಳಗಾದ ರೋಗಿಗಳಿಗೆ ಅಗತ್ಯವಿರುವ ಔಷಧಿಗಳನ್ನು ಸಂಪೂರ್ಣ ಉಚಿತವಾಗಿ ವಿತರಿಸಲಾಗುವುದು.

ಡಾ. ಅಂಬೇಡ್ಕರ್ ಯುವಕರ ಸಂಘದ ಅಧ್ಯಕ್ಷರಾದ ಆರ್. ಪ್ರಭು ಅವರ ಅಧ್ಯಕ್ಷತೆಯಲ್ಲಿ ಈ ಶಿಬಿರ ನಡೆಯಲಿದ್ದು, ಗಣೇಶ್‌ಪುರಂ ವಾರ್ಡ್ ಸೇರಿದಂತೆ ಸುತ್ತಮುತ್ತಲಿನ ಸಮಸ್ತ ಸಾರ್ವಜನಿಕರು ಈ ಬೃಹತ್ ಮೇಗಾ ಆರೋಗ್ಯ ಶಿಬಿರದ ಸದುಪಯೋಗ ಪಡೆದುಕೊಳ್ಳಬೇಕೆಂದು ಮನವಿ ಮಾಡಲಾಗಿದೆ.

# ವೇಮಗಲ್ ಸರ್ಕಾರಿ ಕಾಲೇಜಿಗೆ ಶೇ. 100ರಷ್ಟು ಉತ್ತಮ ಫಲಿತಾಂಶ

ಕೋಲಾರ

ಕಾಲೇಜಿನ ಇತಿಹಾಸದಲ್ಲೇ ಮೊದಲೆನ್ನುವಂತೆ ತಾಲ್ಲೂಕಿನ ವೇಮಗಲ್ ಪಟ್ಟಣದ ಸರ್ಕಾರಿ ಕಾಲೇಜಿಗೆ ಈ ಬಾರಿಯ ದ್ವಿತೀಯ ಪಿಯುಸಿಯಲ್ಲಿ ಶೇ.100 ಫಲಿತಾಂಶ ಬಂದಿದೆ ಎಂದು ಕಾಲೇಜಿನ ಪ್ರಾಂಶುಪಾಲ ಎನ್.ವಾಸು ಹರ್ಷ ವ್ಯಕ್ತಪಡಿಸಿ, ಶುಕ್ರವಾರ ಅತ್ಯುನ್ನತ ಶ್ರೇಣಿಯಲ್ಲಿ ಸಾಧನೆ ಮಾಡಿದ ಮಕ್ಕಳನ್ನು ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, 2026ರ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ವಿಜ್ಞಾನ, ವಾಣಿಜ್ಯ ಮತ್ತು ಕಲಾ ಮೂರು ವಿಭಾಗಗಳಲ್ಲಿ ಶೇ.100 ಫಲಿತಾಂಶ ಸಾಧಿಸಿರುವುದು ನಮಗೆ ಅತ್ಯಂತ ಸಂತೋಷ ಮತ್ತು ಹೆಮ್ಮೆಯ ವಿಷಯವಾಗಿದೆ ಎಂದು ತಿಳಿಸಿದರು.

ಒಟ್ಟು 91 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, ಎಲ್ಲರೂ ಉತ್ತೀರ್ಣರಾಗಿದ್ದಾರೆ, ಇದು ನಮ್ಮ ಕಾಲೇಜಿನ ಶೈಕ್ಷಣಿಕ ಸಾಧನೆಯನ್ನೇ ಪ್ರತಿಬಿಂಬಿಸುತ್ತದೆ ಎಂದ ಅವರು ಇದಕ್ಕೆ ಕಾರಣರಾದ ಎಲ್ಲಾ ಉಪನ್ಯಾಸಕರು,



ಸಿಬ್ಬಂದಿಗೆ ಈ ಸಂದರ್ಭದಲ್ಲಿ ಧನ್ಯವಾದ ಸಲ್ಲಿಸುತ್ತಿದ್ದೇನೆ ಎಂದರು.

ವಿದ್ಯಾರ್ಥಿಗಳಸಾಧನೆಗೆ ಪ್ರಾಂಶುಪಾಲರ ಶ್ಲಾಘನೆ: ಗ್ರಾಮೀಣ ಭಾಗದ ಸರ್ಕಾರಿ ಕಾಲೇಜೊಂದರಲ್ಲಿ ಶೇ.100 ಫಲಿತಾಂಶದ ಸಾಧನೆ ಸುಲಭದ ಮಾತಲ್ಲ ಎಂದ ಪ್ರಾಂಶುಪಾಲ ವಾಸು, ವಿದ್ಯಾರ್ಥಿಗಳು ಈ ಸಾಧನೆಯೊಂದಿಗೆ ನಿಮ್ಮ ಬದುಕು ಉಜ್ವಲಗೊಳಿಸಿಕೊಂಡಿದ್ದೀರಿ, ನಿಮ್ಮ ಬದುಕಿನ ಮುಂದಿನ ಹಾದಿ ಮತ್ತಷ್ಟು ಸುಲಭವಾಗಲಿ, ಉನ್ನತ ಶಿಕ್ಷಣದಲ್ಲಿ ಉತ್ತಮ ಅವಕಾಶಗಳು ಒದಗಿ ಬರಲಿ ಎಂದು ಹಾರೈಸಿದರು.

ದುಶ್ಚಟಗಳಿಂದ ದೂರವಿರಿ, ನಿಮ್ಮ ಮುಂದಿನ ಬದುಕಿನಲ್ಲಿ ಉತ್ತಮ ಗುರಿಯೊಂದಿಗೆ ಮುನ್ನಡೆದು ಪೋಷಕರ ಆಶಯ ಈಡೇರಿಸಿ, ಉತ್ತಮ ಬದುಕು ಕಟ್ಟಿಕೊಳ್ಳಿ ಎಂದು ತಿಳಿಸಿ, ವೈದ್ಯಕೀಯ, ಇಂಜಿಯರಿಂಗ್ ಮಾತ್ರವಲ್ಲ ಇತರೆ ಅರೆ ವೈದ್ಯಕೀಯ,ತಾಂತ್ರಿಕವಾದ ಅನೇಕ ಕಲಿಕೆಯ ಹಾದಿಗಳಿದ್ದು, ಬಳಸಿಕೊಳ್ಳಿ ಎಂದರು.

8ವಿದ್ಯಾರ್ಥಿಗಳಿಗೆ ಅತ್ಯುನ್ನತ ಶ್ರೇಣಿ: ಕಾಲೇಜಿನ ಫಲಿತಾಂಶ ವಿಶ್ಲೇಷಿಸಿದ ಅವರು, ಅತ್ಯುನ್ನತ ಶ್ರೇಣಿಯಲ್ಲಿ 8 ವಿದ್ಯಾರ್ಥಿಗಳು ಅತ್ಯುನ್ನತ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದು, ಇದರಲ್ಲಿ ವಿಜ್ಞಾನ ವಿಭಾಗದಿಂದ 3, ವಾಣಿಜ್ಯ ವಿಭಾಗದಿಂದ 3 ಹಾಗೂ ಕಲಾ ವಿಭಾಗದಿಂದ 2 ಮಕ್ಕಳಿದ್ದಾರೆ ಎಂದು ತಿಳಿಸಿದರು.

ಉಳಿದಂತೆ ಪ್ರಥಮ ಶ್ರೇಣಿಯಲ್ಲಿ 59 ವಿದ್ಯಾರ್ಥಿಗಳು, ದ್ವಿತೀಯ ಶ್ರೇಣಿಯಲ್ಲಿ 19 ಹಾಗೂ ಐವರು ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, ಶಾಲೆಯ ಎನ್.ಭವ್ಯ 561 ಅಂಕ ಗಳಿಸಿ ಕಾಲೇಜಿಗೆ ಮೊದಲಿಗಳಾಗಿದ್ದಾಳೆ ಎಂದರು.


ಅತ್ಯುನ್ನತ ಶ್ರೇಣಿ ಪಡೆದ ಸಾಧಕರೆಂದರೆ ಭವ್ಯ ಎನ್–561, ಪಾವನಾ ಕೆಸಿ–553, ಯಶಸ್ವಿನಿ ಸಿಎಸ್–533, ಕಸ್ತೂರಿ ಹೆಚ್‌ಎಂ –532, ಧನ್ಯಶ್ರೀ ಎಸ್– 529, ನಂದಿತಾ ಸಿ– 526, ಶೈಲಾ ಎಂಎ –523 ಹಾಗೂ ಹರ್ಷಿಣಿ ಸಿಆರ್–518 ಅಂಕಗಳ ಸಾಧನೆ ಮಾಡಿದ್ದು, ಈ ಮಕ್ಕಳನ್ನು ಕಾಲೇಜಿನ ವತಿಯಿಂದ ಸನ್ಮಾನಿಸಿ ಶುಭ ಹಾರೈಸಲಾಯಿತು.

ಈ ಸಾಧನೆಗೆ ವಿದ್ಯಾರ್ಥಿಗಳ ಪರಿಶ್ರಮ, ದೃಢ ನಿರ್ಧಾರಗಳು, ಪೋಷಕರ ಸಹಕಾರ ನಮ್ಮ ಎಲ್ಲಾ ಉಪನ್ಯಾಸಕರ ನಿರಂತರ ಪ್ರಯತ್ನ ಶ್ರಮ ಕಾರಣವಾಗಿದ್ದು, ನಮ್ಮ ಸಮರ್ಪಿತ ಉಪನ್ಯಾಸಕರು ಮತ್ತು ಸಿಬ್ಬಂದಿಗಳಿಗೆ ಹೃತ್ಪೂರ್ವಕ ಕೃತಜ್ಞತೆಗಳು. ಅವರ ನಿರಂತರ ಪರಿಶ್ರಮ, ಸೂಕ್ತ ಮಾರ್ಗದರ್ಶನ ಮತ್ತು ಪ್ರೋತ್ಸಾಹವೇ ಈ ಸಾಧನೆಗೆ ಮುಖ್ಯ ಕಾರಣವಾಗಿದೆ ಎಂದರು. ಗ್ರಾಮೀಣ ಪ್ರದೇಶದಲ್ಲಿರುವ ವೇಮಗಲ್ ಸರ್ಕಾರಿ ಪಿಯು ಕಾಲೇಜು ಈ ಮಟ್ಟದ ಶೇ.100 ಫಲಿತಾಂಶ ಸಾಧಿಸಿರುವುದು ಅತ್ಯಂತ ಶ್ಲಾಘನೀಯವಾಗಿದೆ. ಈ ಸಾಧನೆ ನಮ್ಮೆಲ್ಲರಿಗೂ ಮತ್ತಷ್ಟು ಪ್ರೇರಣೆಯಾಗಲಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಉನ್ನತ ಗುರಿಗಳನ್ನು ಸಾಧಿಸೋಣ ಎಂದು ತಿಳಿಸಿ, ತಮ್ಮ ಪ್ರಯತ್ನಕ್ಕೆ ನಿರಂತರವಾಗಿ ಮಾರ್ಗದರ್ಶನ ನೀಡಿದ ಮಾಜಿಸಭಾಪತಿ ವಿ.ಆರ್.ಸುದರ್ಶನ್ ಅವರಿಗೂ ಧನ್ಯವಾದ ಸಲ್ಲಿಸಿದರು.

ಈ ವೇಳೆ ಹಿರಿಯ ಉಪನ್ಯಾಸಕರಾದ ಟಿ.ಕೆ. ನಟರಾಜ್, ಭಾರತೀ ಕೆ ಎಂ ಸತೀಶ್ ಬಿ, ವೊಲ್ಲ ಶ್ರುತಿ, ನಿರ್ಮಲಾ ಕೆ, ಆನಂದ ಎನ್, ಮನೋಜ್ ಪಿ, ನಳಿನ ಆರ್, ರವಿಚಂದ್ರ ಎಂ, ವಿಶ್ವನಾಥ್, ಗಂಗಾಧರ್ ಮತ್ತು ವಿ.ಎಸ್.ಇನಾಯತ್ ಪಾಷಾ ಉಪಸ್ಥಿತರಿದ್ದರು.

ಭಾರತ ಸಾರಥಿ
14/04/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ರಾಜಾಜಿನಗರದಲ್ಲಿ ಪ್ರಾಂತೀಯ ಹಿಂದೂ ರಾಷ್ಟ್ರ ಅಧಿವೇಶನ ಸಂಪನ್ನ



ಬೆಂಗಳೂರು

"ಹಿಂದೂ ಸಮಾಜವು ಕೇವಲ ವಿನಯತೆ ಮತ್ತು ಉದಾರತೆಗೆ ಸೀಮಿತವಾಗದೆ, ಸ್ವಾಮಿ ವಿವೇಕಾನಂದರು ನೀಡಿದ ಕರೆಯಂತೆ ದೌರ್ಬಲ್ಯ ತೊರೆದು ಶಕ್ತಿ ಹಾಗೂ ಕ್ಷಾತ್ರ ವೃತ್ತಿಯನ್ನು ಮೈಗೂಡಿಸಿಕೊಳ್ಳಬೇಕು," ಎಂದು ಶ್ರೀರಾಮ ಸೇನೆಯ ರಾಷ್ಟ್ರೀಯ ಅಧ್ಯಕ್ಷ ಪ್ರಮೋದ್ ಮುತಾಲಿಕ್ ತಿಳಿಸಿದರು.



ನಗರದ ರಾಜಾಜಿನಗರದಲ್ಲಿರುವ ಅಕ್ಷರಧಾಮ ಅತಿಥಿ ನಿವಾಸದಲ್ಲಿ ಏಪ್ರಿಲ್ 11ರ ಶನಿವಾರದಂದು ಹಿಂದೂ ಜನಜಾಗೃತಿ ಸಮಿತಿ ಆಯೋಜಿಸಿದ್ದ 'ಪ್ರಾಂತೀಯ ಹಿಂದೂ ರಾಷ್ಟ್ರ ಅಧಿವೇಶನ'ದಲ್ಲಿ ಮುಖ್ಯ ವಕ್ತಾರರಾಗಿ ಅವರು ಮಾತನಾಡುತ್ತಿದ್ದರು.

<u>ಸಂಘಟಿತ ಸಂಘರ್ಷಕ್ಕೆ ಸಿದ್ಧರಾಗಿ:</u> ಅಧಿವೇಶನವನ್ನುದ್ದೇಶಿಸಿ



ಮಾತನಾಡಿದ ಮುತಾಲಿಕ್ ಅವರು, "ಬರಿ ಪುಸ್ತಕದ ಓದು ಅಥವಾ ಸೌಹಾರ್ದತೆಯ ಭಜನೆಯಿಂದ ದೇಶವನ್ನು ಉಳಿಸಲು ಸಾಧ್ಯವಿಲ್ಲ. ಪ್ರತಿಯೊಬ್ಬ ಹಿಂದೂವೂ ಶಾರೀರಿಕವಾಗಿ ದೃಢವಾಗಬೇಕು ಮತ್ತು ಅನ್ಯಾಯದ ವಿರುದ್ಧ ಹೋರಾಡುವ ಶೌರ್ಯವನ್ನು ಬೆಳೆಸಿಕೊಳ್ಳಬೇಕು. ಸಮಾಜವು ಆಂತರಿಕ ಮತ್ತು ಬಾಹ್ಯ ಶತ್ರುಗಳ ಷಡ್ಯಂತರಗಳ ವಿರುದ್ಧ ಕೇವಲ ರಕ್ಷಣಾತ್ಮಕವಾಗಿರದೆ, ಸಂಘಟಿತ ಸಂಘರ್ಷಕ್ಕೆ ಸಿದ್ಧರಾಗಬೇಕು," ಎಂದು ಪ್ರತಿಪಾದಿಸಿದರು.

<u>ಐಕ್ಯತೆ ಮತ್ತು ಧರ್ಮ ಶಿಕ್ಷಣದ ಅಗತ್ಯ:</u> ಹಿಂದೂ ಜನಜಾಗೃತಿ ಸಮಿತಿಯ ರಾಜ್ಯ ವಕ್ತಾರ ಮೋಹನ್ ಗೌಡ ಮಾತನಾಡಿ, "ವಿಭಜಿತವಾಗಿರುವ ಹಿಂದೂ ಸಮಾಜವನ್ನು ಒಂದುಗೂಡಿಸುವುದೇ ನಮ್ಮ ಗುರಿ. ಇಂದು ರಾಷ್ಟ್ರದಾದ್ಯಂತ ಹಿಂದೂ ರಾಷ್ಟ್ರದ ಧ್ವನಿ ಕೇಳಿಬರುತ್ತಿದೆ. ಕೇಂದ್ರ ಸರ್ಕಾರವು ಭಾರತವನ್ನು ಹಿಂದೂ ರಾಷ್ಟ್ರವೆಂದು ಘೋಷಿಸುವ ನಿರ್ಧಾರ ತೆಗೆದುಕೊಳ್ಳಬೇಕು," ಎಂದರು.

ಸನಾತನ ಸಂಸ್ಥೆಯ ಪೂಜ್ಯ ರಮಾನಂದ ಗೌಡ ಅವರು ಮಾತನಾಡಿ, "ಮೆಕಾಲೆಯ ಶಿಕ್ಷಣ ಪದ್ಧತಿಯಿಂದ ನೈತಿಕ ಮೌಲ್ಯಗಳಿಲ್ಲದ ಶಿಕ್ಷಣ ಸಿಗುತ್ತಿದೆ. ಇದನ್ನು ಬದಲಿಸಿ ಗುರುಕುಲ ಮಾದರಿಯ ಶಿಕ್ಷಣ ವ್ಯವಸ್ಥೆ ಜಾರಿಗೆ ತರುವುದು ಅನಿವಾರ್ಯ. ಕಾರ್ಯಕರ್ತರು ಬ್ರಾಹ್ಮತೇಜ ಮತ್ತು ಕ್ಷಾತ್ರತೇಜದ ಸಮನ್ವಯದೊಂದಿಗೆ ಕಾರ್ಯನಿರ್ವಹಿಸಬೇಕು," ಎಂದು ಕರೆ ನೀಡಿದರು. ಅಧಿವೇಶನದಲ್ಲಿ ವಿಶ್ವ ಹಿಂದೂ ಪರಿಷತ್‌ನ ದೀಪಕ್ ರಾಜಗೋಪಾಲ್, ರಾಷ್ಟ್ರ ರಕ್ಷಣಾ ಪಡೆಯ ಪುನೀತ್ ಕೆರೆಹಳ್ಳಿ, ಬಿ.ಎ.ಪಿ.ಎಸ್. ಸ್ವಾಮಿನಾರಾಯಣ ಮಂದಿರದ ಗುಣವಂತ್ ಭಾಯ್, ಉದ್ಯಮಿಗಳಾದ ಎಚ್.ಜಿ. ಚಂದ್ರಶೇಖರ್, ರೋಹಿತ್ ಷಾ ಸೇರಿದಂತೆ 250ಕ್ಕೂ ಹೆಚ್ಚು ಹಿಂದೂ ಸಂಘಟನೆಗಳ ಪ್ರಮುಖರು, ವಕೀಲರು, ಗೋರಕ್ಷಕರು ಮತ್ತು ದೇವಸ್ಥಾನಗಳ ಟ್ರಸ್ಟಿಗಳು ಪಾಲ್ಗೊಂಡಿದ್ದರು.

# ಸುದ್ದಗುಂಟೆ ಆಂಜನೇಯಸ್ವಾಮಿ ದೇವಾಲಯದಲ್ಲಿ ಕರಗ ಸಂಭ್ರಮ



ಮಾಲೂರು

ನಗರದ ಮಾಲೂರು ಕೋಲಾರ ರಸ್ತೆಯ ಸುದ್ದಗುಂಟೆ ಆಂಜನೇಯ ಸ್ವಾಮಿ ದೇವಾಲಯದ ಬಳಿ ಹಸಿ ಕರಗ ಮಹೋತ್ಸವ ಅಪಾರ ಜನಸ್ತೋಮದೊಂದಿಗೆ ವಿಜೃಂಭಣೆಯಿಂದ ನಡೆಯಿತು.

ಪ್ರತಿವರ್ಷದಂತೆ ಈ ವರ್ಷವೂ ಸಹ ಧರ್ಮರಾಯಸ್ವಾಮಿ ದ್ರೌಪದಂಭಾ ಮಹೋತ್ಸವ ಹಾಗೂ ಪಟಾಲಮ್ಮ ಮುತ್ಯಾಲಮ್ಮ ಜಾತ್ರಾ ಮಹೋತ್ಸವ ಪ್ರಯುಕ್ತ ಬುಧವಾರ ಧರ್ಮರಾಯಸ್ವಾಮಿ ದೇವಾಲಯದಲ್ಲಿ ಹೋಮ ಹವನ ಧ್ವಜಾರೋಹಣದೊಂದಿಗೆ ಆರಂಭಗೊಂಡು ಗುರುವಾರ ಅಪಾರ ಜನಸ್ತೋಮದೊಂದಿಗೆ ಕರಗ ಹೊರುವ ಪೂಜಾರಿಗಳು ಸುದ್ದಗುಂಟೆ ಆಂಜನೇಯಸ್ವಾಮಿ ದೇವಾಲಯದ ಬಳಿ ಇರುವ ಕಲ್ಯಾಣಿಯಿಂದ ಕಳಸವನ್ನು ನೀರಿನಿಂದ ಮೇಲೆ ತಂದು ಕರಗದ ವಾದ್ಯಕ್ಕೆ ತಕ್ಕಂತೆಕುಣಿಯುತ್ತ ಆಂಜನೇಯ ಸ್ವಾಮಿ ದೇವಾಲಯ ತಲಪಿತು ಆಂಜನೇಯ ಸ್ವಾಮಿ ಆವರಣದಲ್ಲಿ ಹೋಮ ಹವನಗಳು ಪೂಜಾ ಕಾರ್ಯಕ್ರಮದ ನಂತರ ಮೂವರು ಕರಗದ ಪೂಜಾರಿಗಳು ವೆಂಕಟರೋಣ, ಅಭಿಲಾಷ್, ಮಂಜುನಾಥ್, ಕೈಯಲ್ಲಿ ಕರಗವನ್ನು ಹೊತ್ತು ಕರಗದ ವಾದ್ಯಕ್ಕೆ ತಕ್ಕಂತೆ ಕುಣಿಯುತ್ತ ಹೊರಬಂದರು.

ವೀರ ಕುಮಾರರು ಕರಗದಮ್ಮನಿಗೆ ಅಲಗು ಸೇವೆ ಅರ್ಪಿಸಿದರು. ಮೂವರು ಕರಗ ಹೊತ್ತಪೂಜಾರಿ ಗಳು ಸುದ್ದಗುಂಟೆ ಆಂಜನೇಯ ಸ್ವಾಮಿ ದೇವಾಲಯದಿಂದ ಹೊರಟು ಬಾಲಾಜಿ ಚಿತ್ರಮಂದಿರ ಮುಖಾಂತರ ಆರ್ ಪಿ ವೃತ್ತ ಶಂಕರನಾರಾಯಣಸ್ವಾಮಿ ಮಾರಿಕಾಂಬ ದೇವಾಲಯ, ರಾಘವೇಂದ್ರಸ್ವಾಮಿ, ಚಿಕ್ಕ ಮಾರಿಕಾಂಬ ದೇವಾಲಯ. ನಂತರ ಧರ್ಮರಾಯಸ್ವಾಮಿ ದೇವಾಲಯ ತಲುಪಿತು. ಹಸಿ ಕರಗ ವೀಕ್ಷಿಸಲು ಆಗಮಿಸಿದ್ದ ಭಕ್ತರು ಕರಗದಮ್ಮನಿಗೆ ಮಲ್ಲಿಗೆ ಹೂವು ಅರ್ಪಿಸಿದರು. ಹಸಿ ಕರಗ ವೀಕ್ಷಣೆ ಮಾಡಲು ಸಾವಿರಾರು ಸಂಖ್ಯೆಯಲ್ಲಿ ಭಕ್ತರು ನೆರೆದಿದ್ದರು.

ಮಾಜಿ ಶಾಸಕ ಕೆ.ಎಸ್.ಮಂಜುನಾಥಗೌಡ, ಜೆಡಿಎಸ್ ಪಕ್ಷದ ಮುಖಂಡ ಹೂಡಿ ವಿಜಯ್ ಕುಮಾರ್, ತಹಶಿಲ್ದಾರ್ ಎಂ.ವಿ.ರೂಪ, ಯುವ ಕಾಂಗ್ರೆಸ್ ರಾಜ್ಯ ಪ್ರಧಾನ ಕಾರ್ಯದರ್ಶಿ ಸುನೀಲ್ ನಂಜೇಗೌಡ, ದರಕಾಸ್ತು ಸಮಿತಿ ಅಧ್ಯಕ್ಷ ಹನುಮಂತಪ್ಪ, ಯೋಜನಾಪ್ರಾಧಿಕಾರ ಅಧ್ಯಕ್ಷ ಹೆಚ್,ಎಂ.ವಿಜಯನರಸಿಂಹ, ಕೋಮುಲ್ ನಿರ್ದೇಶಕ ಶ್ರೀನಿವಾಸ್, ಧರ್ಮರಾಯಸ್ವಾಮಿ ದೇವಾಲಯ ಸಮಿತಿ ಅಧ್ಯಕ್ಷ ಎಂಪಿ ವಿಜಯ್ ಕುಮಾರ್, ಖಜಾಂಚಿ ಪಿ.ವೆಂಕಟೇಶ್. ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸಿ. ಲಕ್ಷ್ಮಿನಾರಾಯಣ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಎಂ.ಕೃಷ್ಣಪ್ಪ, ರಾಮಮೂರ್ತಿ, ಬಿ..ಕೆನಾರಾಯಣಸ್ವಾಮಿ ಚಂದ್ರೇಗೌಡ, ನಗರಸಭಾ ಮಾಜಿ ಅಧ್ಯಕ್ಷರುಗಳಾದ ಸಿಪಿ ನಾಗರಾಜ್, ಮಾಜಿ ಸದಸ್ಯ ಎ ರಾಜಪ್ಪ, ಮುಖಂಡರಾದ ಚಿನ್ನಸ್ವಾಮಿಗೌಡ, ಬೆಳ್ಳಾವಿ ಸೋಮಣ್ಣ, ಪ್ರದೀಪ್ ರೆಡ್ಡಿ, ವಾಟರ್ ನಾರಾಯಣಸ್ವಾಮಿ, ನಂದೀಶ್, ಹನುಮಂತರೆಡ್ಡಿ, ಸೈಯದ್ ಅಜಗರ್, ಧರ್ಮರಾಯಸ್ವಾಮಿ ದೇವಾಲಯ ಸಮಿತಿಯ ಉಪಾಧ್ಯಕ್ಷ ಎಮ್ ಸಿ ಚಂದ್ರು, ಕಾರ್ಯದರ್ಶಿ ಕೃಷ್ಣಪ್ಪ ಗೌಡರು, ಸೀನಪ್ಪ, ನಾರಾಯಣಸ್ವಾಮಿ, ಎಂಪಿ ಪೆರುಮಾಳಪ್ಪ, ಯಜಮಾನರು ಜಗನ್ನಾಥ್, ಧರ್ಮದರ್ಶಿಗಳಾದ ಆಂಜನಪ್ಪ, ಹೇಮಮಾಲಿನಿ, ಚೇತನ್, ಅಶ್ವಥರೆಡ್ಡಿ, ಶಬೀರ್, ಎಎಲ್‌ಕೆ ಕುಟ್ಟಿ, ಎಂ.ಪಿವಿ ಮಂಜು, ಆಂಜಿ, ಇನ್ನಿತರರು ಹಾಜರಿದ್ದರು.

ಏಪ್ರೀಲ್ 10 ಶುಕ್ರವಾರ ದೀಪೋತ್ಸವ ದೇವಾಲಯ ಸಮಿತಿಗೆ ಒಳಪಟ್ಟ ಹಳ್ಳಿಗಳಿಂದ ಮಹಿಳೆಯರು ಹಾಗೂ ಗ್ರಾಮಸ್ಥರು ದೇವರಿಗೆ ಆರತಿ ತಂಬಿಟ್ಟು ದೀಪಗಳನ್ನು ತಲೆಯ ಮೇಲೆ ಹೊತ್ತು ಮಂಗಳವಾಧ್ಯಗಳ ಸಮೇತ ನಗರಕ್ಕೆ ಆಗಮಿಸಿ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಹೊರಟು ನಂತರ ದೇವಾಲಯ ಪ್ರವೇಶಿಸಿ ದೇವರಿಗೆ ಆರತಿ ತಂಬಿಟ್ಟು ದೀಪಗಳನ್ನು ಹೊತ್ತು ಪಟಾಲಮ್ಮ ದೇವಾಲಯ ಮುಂಭಾಗದಲ್ಲಿ ಹಾಕುವ ಅಗ್ನಿಕುಂಡದಲ್ಲಿ ರಾತ್ರಿ 3 ಗಂಟೆ ಸಮಯದಲ್ಲಿ ತಮ್ಮ ಹರಿಕೆಯನ್ನು ಸಲ್ಲಿಸುತ್ತಾರೆ.

ಏಪ್ರೀಲ್ 11 ಶನಿವಾರದಂದು ನಗರದ ಗಾಂಧಿ ವೃತ್ತದಲ್ಲಿರುವ ಪಟಾಲಮ್ಮ ದೇವಾಲಯದಲ್ಲಿ ಸಿಡಿ ಉತ್ಸವ ನಡೆಯಲಿದೆ. ಸಿಡೀರಣ್ಣ ಎಂಬ ದೇವರನ್ನು ಭುಜಗಳ ಮೇಲೆ ಹೊತ್ತ ಪೂಜಾರಿ ಹಲಗು ತಾಳಕ್ಕೆ ನರ್ತಿಸುತ್ತಾ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸುತ್ತಾರೆ. ಸಂಜೆ ಪಟಾಲಮ್ಮ ದೇವಾಲಯದ ಆವರಣದಲ್ಲಿ ಸಿಡೀರಣ್ಣ ಮೂರ್ತಿಯನ್ನು ವಿಶೇಷವಾಗಿ ಸಿದ್ಧ ಪಡಿಸಿರುವ ಸಿಡಿ ಕಂಭಕ್ಕೆ ಕಟ್ಟಿ ಪೂಜೆ ಸಲ್ಲಿಸಲಾಗುತ್ತಿದೆ. ಈ ಸಂದರ್ಭದಲ್ಲಿ ಭಕ್ತರು ದೇವರ ಮೇಲೆ ಬಾಳೆಹಣ್ಣು, ದವನ ಹಾಗೂ ಹೂವಗಳನ್ನು ಎಸದು ತಮ್ಮ ಭಕ್ತಿಯನ್ನು ಸಮರ್ಪಿಸುತ್ತಾರೆ. ಏಪ್ರೀಲ್ 12 ಭಾನುವಾರ ಧರ್ಮರಾಯಸ್ವಾಮಿ ದ್ರೌಪದಾಂಭ ಕರಗ ರಾತ್ರಿ 11 ಗಂಟೆಗೆ ಹೂವಿನ ಕರಗ ಹೊತ್ತ ಪೂಜಾರಿ ವೆಂಕಟರೋಣ ದೇವಾಲಯದಿಂದ ಹೊರ ಬರುತ್ತಿದ್ದಂತೆ ನೂರಾರು ಮಂದಿ ವೀರ ಕುಮಾರರು ಗೋವಿಂದ ನಾಮ ಸ್ಮರಣೆ ಮಾಡುತ್ತಾ ಕತ್ತಿಯಿಂದ ಹೊಡೆದುಕೊಂಡು ಭಕ್ತಿಯನ್ನು ಪ್ರದರ್ಶಿಸುತ್ತಾರೆ. ದೇವಾಲಯ ಮುಂಭಾಗದಲ್ಲಿ ವಿಶೇಷ ಮಲ್ಲಿಗೆ ಹೂಗಳಿಂದ ವಿದ್ಯುತ್ ಅಲಂಕಾರದಿಂದ ಸಿಂಗರಿಸಿದ ಧರ್ಮರಾಯಸ್ವಾಮಿ ಚಿತ್ರ ಗೋಪುರಕ್ಕೆ ಪ್ರದಕ್ಷಿಣೆ ಹಾಕಿ ಅಲಂಕೃತವಾಗಿ ಜೋಡಿಸಿರುವ ಕರಗದ ಮೇಲೆ ನೆರದಿರುವ ಭಕ್ತಾಧಿಗಳು ಮಲ್ಲಿಗೆಯ ಹೂವುಗಳನ್ನು ಹಾಕಿ ತಮ್ಮ ಹರಿಕೆಯನ್ನು ನೇರವೇರಿಸುವಂತೆ ಪ್ರಾರ್ಥಿಸುತ್ತಾರೆ. ಪಟ್ಟಣದಲ್ಲಿನ ಎಲ್ಲಾ ದೇವಾಲಯಗಳ ಉತ್ಸವ ಮೂರ್ತಿಗಳ ಮೇರವಣಿಗೆ ನಡೆಯುತ್ತದೆ.

# ಶಿಕ್ಷಣದ ಗುಣಮಟ್ಟಕ್ಕೆ ಸಿಕ್ಕ ಜಯ

ತಿಪಟೂರು

ಇತ್ತೀಚೆಗೆ ಪ್ರಕಟವಾದ ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ನಗರದ ಪ್ರತಿಷ್ಠಿತ ಟೈಮ್ಸ್ ಪಿಯು ಕಾಲೇಜು ಅಪ್ರತಿಮ ಸಾಧನೆ ಮಾಡಿದೆ. ಕಾಲೇಜಿನ ವಿದ್ಯಾರ್ಥಿನಿ ರಶ್ಮಿ ಕೆ.ಎಸ್. ವಿಜ್ಞಾನ ವಿಭಾಗದಲ್ಲಿ 595 ಅಂಕಗಳನ್ನು ಪಡೆಯುವ ಮೂಲಕ ರಾಜ್ಯ ಮಟ್ಟದಲ್ಲಿ 4ನೇ ರ್‍ಯಾಂಕ್ ಹಾಗೂ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದು ಕಾಲೇಜಿನ ಕೀರ್ತಿ ಪತಾಕೆಯನ್ನು ಹಾರಿಸಿದ್ದಾರೆ.

ಕಾಲೇಜಿನ ಫಲಿತಾಂಶದ ಕುರಿತು ಮಾತನಾಡಿದ ಟೈಮ್ಸ್ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಬಿ.ಕೆ. ಗಂಗಾಧರ್, "ನಮ್ಮ ಕಾಲೇಜಿನಿಂದ ಪರೀಕ್ಷೆ ಬರೆದಿದ್ದ ಎಲ್ಲಾ 100 ವಿದ್ಯಾರ್ಥಿಗಳೂ ತೇರ್ಗಡೆಯಾಗುವ ಮೂಲಕ ಶೇ. 100 ರಷ್ಟು ಫಲಿತಾಂಶ ಬಂದಿದೆ. ಇದರಲ್ಲಿ 66 ವಿದ್ಯಾರ್ಥಿಗಳು ಅತ್ಯುತ್ತಮ ಶ್ರೇಣಿ (ಡಿಸ್ಟಿಂಕ್ಷನ್) ಹಾಗೂ 34 ವಿದ್ಯಾರ್ಥಿಗಳು ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ," ಎಂದು ಹರ್ಷ ವ್ಯಕ್ತಪಡಿಸಿದರು.

ಕಾಲೇಜಿನ ರಶ್ಮಿ ಕೆ.ಎಸ್ (595) ಅವರಲ್ಲದೆ ಸಿಂಚನ ಎಂ.ಎ (589), ಮುಹೀನ್ ಖಾನ್ (588), ಧನ್ಯ ವೈ (587), ಮೇಘನ ಕೆ.ಎಂ (587), ಸಹನ ಆರ್ (582), ಇಂಚರ ಟಿ.ಪಿ (582), ಯಶವಂತ್ ಟಿ.ಎಸ್ (581), ನವ್ಯಶ್ರೀ (580), ರಮ್ಯ (579), ದೀಪ್ತಿ ಟಿ.ಜಿ (576) ಹಾಗೂ ವಿಸ್ಮಯ (575) ಅವರುಗಳು ಹೆಚ್ಚಿನ ಅಂಕಗಳನ್ನು ಗಳಿಸಿ ರಾಜ್ಯ ಮಟ್ಟದ ಟಾಪರ್‌ಗಳಾಗಿ ಹೊರಹೊಮ್ಮಿದ್ದಾರೆ.

ವಿವಿಧ ವಿಷಯಗಳಲ್ಲಿ ವಿದ್ಯಾರ್ಥಿಗಳು ನೂರಕ್ಕೆ ನೂರು ಅಂಕಗಳನ್ನು ಗಳಿಸಿ ಸಾಧನೆ ಮಾಡಿದ್ದಾರೆ. ಭೌತಶಾಸ್ತ್ರದಲ್ಲಿ 8, ರಸಾಯನಶಾಸ್ತ್ರದಲ್ಲಿ 1, ಕನ್ನಡ ಹಾಗೂ ಗಣಿತದಲ್ಲಿ ತಲಾ 7 ಮತ್ತು ಜೀವಶಾಸ್ತ್ರದಲ್ಲಿ 3 ವಿದ್ಯಾರ್ಥಿಗಳು ಪೂರ್ಣ ಅಂಕಗಳನ್ನು ಗಳಿಸಿದ್ದಾರೆ.

ಕಾಲೇಜಿನ ಆಡಳಿತಾಧಿಕಾರಿ ಕೆ.ಎಲ್. ಅನೂಪ್ ಹಾಗೂ ಪ್ರಾಂಶುಪಾಲ ಬಿ. ಪ್ರದೀಪ್ ಮಾತನಾಡಿ, "ನಮ್ಮಲ್ಲಿ ಗ್ರಾಮೀಣ ಭಾಗದ ವಿದ್ಯಾರ್ಥಿಗಳೇ ಹೆಚ್ಚಿದ್ದು, ಅವರು ಇಂತಹ ಶ್ರೇಷ್ಠ ಸಾಧನೆ ಮಾಡಿರುವುದು ಹೆಮ್ಮೆಯ ವಿಷಯ. ನುರಿತ ಉಪನ್ಯಾಸಕರು, ಸುಸಜ್ಜಿತ ಪ್ರಯೋಗಾಲಯ ಹಾಗೂ ಸಿಇಟಿ, ನೀಟ್ ಕೋಚಿಂಗ್‌ಗಳ ಮೂಲಕ ನಿರಂತರ ಮಾರ್ಗದರ್ಶನ ನೀಡುತ್ತಿರುವುದು ಈ ಯಶಸ್ಸಿಗೆ ಕಾರಣ," ಎಂದರು.

ಈ ಸಂದರ್ಭದಲ್ಲಿ ಗಣಿತ ಉಪನ್ಯಾಸಕ ಯೋಗೀಶ್ ಹಾಗೂ ಬೋಧಕ ವರ್ಗದವರು ವಿಜೇತ ವಿದ್ಯಾರ್ಥಿಗಳಿಗೆ ಮತ್ತು ಅವರ ಪೋಷಕರಿಗೆ ಅಭಿನಂದನೆ ಸಲ್ಲಿಸಿದರು.

# ಕುಡಿಯುವ ನೀರಿಗಾಗಿ ಅನುದಾನದ ಕೊರತೆ ಇಲ್ಲ: ಸಿಇಓ

ಮಾಲೂರು



ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ನೀರಿನ ಸಮಸ್ಯೆ ಬಾರದಂತೆ ಗ್ರಾಮ ಪಂಚಾಯಿತಿ ಆಡಳಿತ ಅಧಿಕಾರಿಗಳು ಅಭಿವೃದ್ಧಿ ಅಧಿಕಾರಿಗಳು ಕ್ರಿಯಾಯೋಜನೆ ಸಿದ್ಧಪಡಿಸಿಕೊಂಡು ಅನುಮೋದನೆ ಪಡೆದು ನೀರನ್ನು ಪೂರೈಕೆ ಮಾಡುವಂತೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರವೀಣ್ ಬಾಗೇವಾಡಿ ಹೇಳಿದರು.

ನಗರದ ತಾಲೂಕು ಪಂಚಾಯಿತಿ ಸಾಮರ್ಥ್ಯ ಸೌದ ಸಭಾಂಗಣದಲ್ಲಿ ಗ್ರಾಮ ಪಂಚಾಯಿತಿಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಹಾಗೂ ತೆರಿಗೆ ಹಣವನ್ನು ಸಂಗ್ರಹಿಸುವುದರ ಬಗ್ಗೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯಿತಿ ಆಡಳಿತ ಅಧಿಕಾರಿಗಳಿಗೆ ಹಮ್ಮಿಕೊಳ್ಳಲಾಗಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಬೇಸಿಗೆ ಸಮೀಪಿಸಿದ್ದು ದಿನದಿಂದ ದಿನಕ್ಕೆ ಬಿಸಿಲಿನ ಜಳ ಏರುತ್ತಿದೆ ಈಗಾಗಲೇ ಕೆಲವು ಗ್ರಾಮಗಳಲ್ಲಿ ನೀರಿನ ಸಮಸ್ಯೆ ತಲೆದೋರಿದೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ನೀರಿನ ಸಮಸ್ಯೆ ಇರುವ ಗ್ರಾಮಗಳನ್ನು ಪಟ್ಟಿಮಾಡಿ ಆ ಗ್ರಾಮಗಳಲ್ಲಿ ಮೊದಲ ಆದ್ಯತೆ ನೀಡಿ ಖಾಸಗಿ ಕೊಳವೆ ಬಾವಿಗಳಿಂದ ನೀರನ್ನು ಪಡೆದು ಗ್ರಾಮಗಳಿಗೆ ಪೂರೈಕೆ ಮಾಡಿ ನೀರಿನ ಸಮಸ್ಯೆಯನ್ನು ನೀಗಿಸಬೇಕು, ಗ್ರಾಮ ಪಂಚಾಯಿತಿಗಳಲ್ಲಿ ನೀರಿನ ಸಮಸ್ಯೆ ನೀಗಿಸಲು ಅನುದಾನದ ಕೊರತೆ ಇಲ್ಲ, ಕ್ರಿಯಾಯೋಜನೆ ಸಿದ್ಧಪಡಿಸಿಕೊಂಡು ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿಗಳಿಂದ ಅನುಮೋದನೆ ಪಡೆದು ಕೊಳವೆಬಾವಿಗಳನ್ನು ಕೊರೆಸುವುದರ ಮೂಲಕ ನೀರನ್ನು ಸರಬರಾಜು ಮಾಡಬೇಕು.

ಗ್ರಾಮಗಳಲ್ಲಿ ನೀರಿನ ಸಮಸ್ಯೆ ಉಂಟಾದಲ್ಲಿ ಸಾರ್ವಜನಿಕರು ಮಾಹಿತಿಯನ್ನು ನೀಡುವ ಸಲುವಾಗಿ ಗ್ರಾಮ ಪಂಚಾಯಿತಿಗಳಲ್ಲಿ ದೂರವಾಣಿ ಮೂಲಕ ಮಾಹಿತಿ ಪಡೆಯಲಿದ್ದಾರೆ, ಇಲ್ಲಿನ ತಾಲೂಕಿನ 77 ಗ್ರಾಮಗಳಲ್ಲಿ ಮುಂಬರುವ ದಿನಗಳಲ್ಲಿ ನೀರಿನ ಸಮಸ್ಯೆ ತಲೆದೋರಬಹುದು ಎಂದು ಅಂತಹ ಗ್ರಾಮಗಳನ್ನು ಸಮಸ್ಯಾತ್ಮಕ ಗ್ರಾಮಗಳು ಎಂದು ಗುರುತಿಸಿ ಆ ಗ್ರಾಮಗಳಿಗೆ ಖಾಸಗಿ ಕೊಳವೆ ಬಾವಿಗಳಿಂದ ನೀರನ್ನು ಪಡೆದು ಪೂರೈಕೆ ಮಾಡುವುದು ಅಥವಾ ಕೊಳವೆ ಬಾವಿಗಳನ್ನು ಕೊರೆಸಿ ನೀರನ್ನು ಪೂರೈಕೆ ಮಾಡಲು ನಿರ್ಮಾನಿಸಲಾಗಿದೆ.

ತಾಲೂಕು ಪಂಚಾಯಿತಿ ಕೇಂದ್ರದಲ್ಲಿ ಸಹಾಯವಾಣಿಯನ್ನು ಸಹ ತೆರೆಯಲಾಗಿದೆ, ಸಾರ್ವಜನಿಕರು ತಮ್ಮ ಗ್ರಾಮಗಳಲ್ಲಿ ನೀರಿನ ಸಮಸ್ಯೆ ಇದ್ದಲ್ಲಿ ಸಹಾಯವಾಣಿ ಅಥವಾ ಗ್ರಾಮ ಪಂಚಾಯಿತಿಗಳಿಗೆ ಮಾಹಿತಿ ನೀಡಿದಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ನೀರಿನ ಸಮಸ್ಯೆಯನ್ನು ನೀಗಿಸಲು ಮುಂದಾಗಬೇಕು, ಪಂಚಾಯಿತಿಗಳಲ್ಲಿ ನೀರಿನ ಸಮಸ್ಯೆ ನೀಗಿಸುವುದರ ಜೊತೆಗೆ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಮೂಲಭೂತ ಸವಲತ್ತುಗಳನ್ನು ಒದಗಿಸಲು ಹಾಗೂ ನೀರಿನ ಸಮಸ್ಯೆಯನ್ನು ಬಗೆಹರಿಸಲು ಪ್ರತಿಯೊಬ್ಬ ನಾಗರಿಕರು ಮನೆ ತೆರಿಗೆ ನೀರಿನ ತೆರಿಗೆ ಇನ್ನಿತರೆ ತೆರಿಗೆಗಳನ್ನು ಪಾವತಿಸಲು ನಾಗರೀಕರಲ್ಲಿ ಜಾಗೃತಿ ಮೂಡಿಸುವ ಕೆಲಸ ಮಾಡಬೇಕು.

ಮಾಲೂರು ತಾಲೂಕು ಗ್ರಾಮ ಪಂಚಾಯಿತಿಗಳು ತೆರಿಗೆ ಹಣ ಸಂಗ್ರಹಿಸುವುದರಲ್ಲಿ ಜಿಲ್ಲೆಯಲ್ಲಿ ಮೊದಲ ಸ್ಥಾನ ಪಡೆದುಕೊಂಡಿದೆ ಬಾಕಿ ಇರುವ ಹಣವನ್ನು ಇದೇ ತಿಂಗಳಲ್ಲಿ ಪಾವತಿಸಿದ್ದಲ್ಲಿ ಶೇಕಡ 5ರಷ್ಟು ರಿಯಾಯಿತಿ ರಾಜ್ಯ ಸರ್ಕಾರ ಘೋಷಿಸಿದೆ ಸರ್ಕಾರ ಘೋಷಿಸಿರುವ ರಿಯಾಯಿತಿಯನ್ನು ಸಾರ್ವಜನಿಕರಲ್ಲಿ ಪ್ರಚಾರಪಡಿಸಿ ತೆರಿಗೆ ಹಣವನ್ನು ಸಂಗ್ರಹಿಸಬೇಕು. ಈ ಸಂದರ್ಭದಲ್ಲಿ ಜಿ.ಪಂ. ಉಪಕಾರ್ಯದರ್ಶಿ ರಮೇಶ್, ತಾಲೂಕು ಪಂಚಾಯಿತಿ ಕಾರ್ಯ ನಿರ್ವಹಣಾಧಿಕಾರಿ ವಿ ಕೃಷ್ಣಪ್ಪ, ಗ್ರಾಮ ಪಂಚಾಯಿತಿ ಆಡಳಿತ ಅಧಿಕಾರಿಗಳು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಸಭೆಯಲ್ಲಿ ಹಾಜರಿದ್ದರು.

# ಕನಕ ಬ್ಯಾಸ್ಕೆಟ್ ಬಾಲ್ ಕ್ಲಬ್‌ನಿಂದ ಉಚಿತ ಬೇಸಿಗೆ ಶಿಬಿರಕ್ಕೆ ಚಾಲನೆ

ಕೋಲಾರ

ಮಕ್ಕಳನ್ನು ಪಠ್ಯಕ್ಕೆ ಸೀಮಿತಮಾಡದೇ ಅವರಲ್ಲಿ ಕ್ರೀಡೆ,ಸಾಂಸ್ಕೃತಿಕ ಪ್ರತಿಭೆಗಳನ್ನು ಗುರುತಿಸಿ ಪ್ರೋತ್ಸಾಹಿಸುವ ಅಗತ್ಯವಿದ್ದು, ಈ ನಿಟ್ಟಿನಲ್ಲಿ ಕನಕ ಬ್ಯಾಸ್ಕೆಟ್ ಬಾಲ್ ಕ್ರೀಡಾಂಗಣದಲ್ಲಿ ಆಯೋಜಿಸಿರುವ ಬ್ಯಾಸ್ಕೆಟ್ ಬಾಲ್ ಕಲಿಕಾ ಬೇಸಿಗೆ ಶಿಬಿರ ಮಕ್ಕಳಲ್ಲಿ ದೈಹಿಕ ಮತ್ತು ಜ್ಞಾಪಕ ಶಕ್ತಿಯ ವೃದ್ದಿಗೆ ಸಹಕಾರಿಯಾಗಿದೆ ಎಂದು ಪರ್ವತ್ ಸ್ಪೋರ್ಟ್ಸ್‌ನ ಆನಂದರೆಡ್ಡಿ ತಿಳಿಸಿದರು.

ನಗರದ ಕಠಾರಿಪಾಳ್ಯದ ಕನಕ ಬ್ಯಾಸ್ಕೆಟ್ ಬಾಲ್ ಕ್ರೀಡಾಂಗಣದಲ್ಲಿ ಕನಕ ಬ್ಯಾಸ್ಕಟ್ ಬಾಲ್ ಕ್ಲಬ್‌ನಿಂದ ಆಯೋಜಿಸಿರುವ ಉಚಿತ ಬ್ಯಾಸ್ಕೆಟ್ ಬಾಲ್ ಕಲಿಕಾ ಬೇಸಿಗೆ ಶಿಬಿರಕ್ಕೆ ಚಾಲನೆ ನೀಡಿ ಅವರು ಮಾತನಾಡುತ್ತಿದ್ದರು.

ಇಡೀ ವರ್ಷಕ್ಕಾಗುವಷ್ಟು ಖುಷಿಯನ್ನು ರಜೆಯಲ್ಲಿ ಪಡೆದುಕೊಳ್ಳಿ ಎಂದು ಮಕ್ಕಳಿಗೆ ಕಿವಿಮಾತು ಹೇಳಿದ ಅವರು, ಸತತ 37 ವರ್ಷಗಳಿಂದ ನಡೆಸುತ್ತಿರುವ ಈ ಬೇಸಿಗೆ ಶಿಬಿರ ಮಕ್ಕಳ ಮಾನಸಿಕ,ದೈಹಿಕ ಬಲವರ್ಧನೆಗೆ ಸಹಕಾರಿಯಾಗಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ಇಲ್ಲಿನ ಬ್ಯಾಸ್ಕೆಟ್ ಬಾಲ್ ಪುಣ್ಯಭೂಮಿಯಾಗಿದೆ, ಇಂತಹ ಕಡೆ ನೀವು ಬ್ಯಾಸ್ಕೆಟ್ ಬಾಲ್ ಕಲಿಯಲು ಬಂದಿದ್ದೀರಿ, ನೀವು ಮುಂದಿನ ದಿನಗಳಲ್ಲಿ ರಾಷ್ಟ್ರ, ರಾಜ್ಯಮಟ್ಟದಲ್ಲಿ ಪ್ರತಿನಿಧಿಸುವ ಮಟ್ಟಕ್ಕೆ ಬೆಳೆಯಿರಿ ಎಂದು ಶುಭ ಹಾರೈಸಿದರು. ಶಿಬಿರ ಆಯೋಜಿಸಿರುವ ಅಂಚೆ ಅಶ್ವತ್ಥ್ ಹಾಗೂ ತರಬೇತಿದಾರರು ನಿಮಗಾಗಿ ಇಲ್ಲಿ ತಮ್ಮ ಅಮೂಲ್ಯ ಸಮಯ ಕಳೆಯಲು ಬಂದಿದ್ದಾರೆ, ಅವರ ಆಶಯಗಳಿಗೆ ತಕ್ಕಂತೆ ಸಮಯಕ್ಕೆ ಸರಿಯಾಗಿ ಬಂದು ಶಿಸ್ತಿನಿಂದ ವರ್ತಿಸಿ, ಇಡೀ ವರ್ಷ ಓದಿನ ಜಂಜಾಟದ ನಡುವೆ ರಜೆಯಲ್ಲಿ ಸಿಗುವ ಈ ಬೇಸಿಗೆ ಶಿಬಿರದ ಪ್ರಯೋಜನ ಪಡೆಯಿರಿ ಎಂದರು. ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಹಕಾರ ಸಂಘದ ಅಧ್ಯಕ್ಷ ಕೆ.ಎಸ್.ಗಣೇಶ್ ಮಾತನಾಡಿ, ಬ್ಯಾಸ್ಕೆಟ್ ಬಾಲ್‌ನಲ್ಲಿ ಕೋಲಾರಕ್ಕೆ ಅಪೂರ್ವ ಇತಿಹಾಸವಿದೆ, 70 ವರ್ಷಗಳಿಂದ ಇಲ್ಲಿ ಅನೇಕರು ರಾಜ್ಯ,ರಾಷ್ಟ್ರಮಟ್ಟದಲ್ಲಿ ಪ್ರತಿನಿಧಿಸಿದ್ದಾರೆ ಎಂದು ತಿಳಿಸಿದರು. ಬ್ಯಾಸ್ಕೆಟ್ ಬಾಲ್ ಭೀಷ್ಮ ಎಂದೇ ಖ್ಯಾತರಾಗಿರುವ ಅಂಚೆ ಅಶ್ವತ್ಥ್ ಈ ಶಿಬಿರದ ನೇತೃತ್ವ ವಹಿಸಿದ್ದಾರೆ, ಇಲ್ಲಿ ನೀವು ಕೌಶಲ್ಯ ಬೆಳೆಸಿಕೊಳ್ಳಿ, ಶಿಸ್ತಿನಿಂದ ವರ್ತಿಸಿ, ಶಿಬಿರದ ಮೂಲಕ ನೀವು ರಾಷ್ಟ್ರಮಟ್ಟದ ಕ್ರೀಡಾಪಟುಗಳಾಗಿ ಹೊರಹೊಮ್ಮಿ ಎಂದು ಕಿವಿಮಾತು ಹೇಳಿದರು. ಮಕ್ಕಳು ಸಿಕ್ಕಿರುವ ಈ ಅವಕಾಶವನ್ನು ಸಮರ್ಥವಾಗಿ ಬಳಸಿಕೊಳ್ಳಬೇಕು, ಆಗ ಮಾತ್ರ ನೀವು ಸಾಧನೆಯ ಶಿಖರವೇರಲು ಸಾಧ್ಯ ಎಂಬುದನ್ನು ಅರಿತು ಕಲಿಕೆಯಲ್ಲಿ ತೊಡಗಿ ಎಂದು ಕಿವಿಮಾತು ಹೇಳಿದರು. ಯಾವುದೇ ಶುಲ್ಕ ಪಡೆಯದೇ ಶಿಬಿರ ನಡೆಸಲಾಗುತ್ತಿದೆ, ದೊಡ್ಡ ನಗರಗಳಲ್ಲಿ ಇಂತಹ ಶಿಬಿರ ನಡೆಸಲು ಸಾವಿರಾರು ರೂ ಪಡೆಯುತ್ತಾರೆ ಆದರೆ ಅಂಚೆ ಅಶ್ವಥ್ ಮತ್ತಿತರ ಹಿರಿಯ ಕ್ರೀಡಾಪಟುಗಳು ನಿಮಗೆ ಉತ್ತಮ ತರಬೇತಿ ನೀಡುತ್ತಿದ್ದಾರೆ, ಇಂತಹ ಅಮೂಲ್ಯ ಸೌಲಭ್ಯ ಬೇರಾರಿಗೂ ಸಿಗದು ಎಂದರು.

ಶಿಬಿರದ ನೇತೃತ್ವ ವಹಿಸಿರುವ ಹಿರಿಯ ಕ್ರೀಡಾಪಟು ಅಂಚೇ ಅಶ್ವಥ್ ಮಾತನಾಡಿ, ಈ ಕನಕ ಬ್ಯಾಸ್ಕೆಟ್ ಬಾಲ್ ಕ್ರೀಡಾಂಗಣದಲ್ಲಿ ರಾಷ್ಟ್ರ, ರಾಜ್ಯಮಟ್ಟದ 30ಕ್ಕೂ ಹೆಚ್ಚು ಪಂದ್ಯಗಳು ನಡೆದಿವೆ, ಕೋಲಾರಕ್ಕೆ ಬ್ಯಾಸ್ಕೆಟ್ ಬಾಲ್‌ನಲ್ಲಿ ಅತ್ಯಂತ ಗೌರವಯುತ ಇತಿಹಾಸವಿದೆ, ನೀವು ಇಂತಹ ಸಾಧನೆಯ ಮೂಲಕ ಮತ್ತೊಮ್ಮೆ ಕೋಲಾರ ಅಂತರರಾಷ್ಟೀಯ ಮಟ್ಟದಲ್ಲಿ ಗುರುತಿಸಿಕೊಳ್ಳುವಂತೆ ಮಾಡಿ ಎಂದರು. ಈ ಸಂದರ್ಭದಲ್ಲಿ ನಿವೃತ್ತ ಪಿಎಸ್‌ಐ ಸುಬ್ರಮಣಿ, ಕನಕ ಬ್ಯಾಸ್ಕಟ್ ಬಾಲ್ ಕ್ಲಬ್ ಹಿತೈಷಿ ವೇಣುಗೋಪಾಲ್, ತರಬೇತುದಾರರಾದ ರಘುವೀರ್, ಮಹೇಂದ್ರ, ಸಂತೋಷ್, ವಿನಯ್, ಅನಿಲ್ ಸೇರಿದಂತೆ 100ಕ್ಕೂ ಹೆಚ್ಚು ಮಕ್ಕಳು ಹಾಜರಿದ್ದರು.

# ಸಚ್ಚಿದಾನಂದ ಪರಬ್ರಹ್ಮ ಡಾ. ಆಠವಲೆ ಅವರಿಗೆ 'ಧರ್ಮ ಅಲಂಕಾರ' ಪ್ರಶಸ್ತಿ ಗೌರವ




ಪಟ್ನಾ (ಬಿಹಾರ)

ಸನಾತನ ಧರ್ಮದ ರಕ್ಷಣೆ ಹಾಗೂ ಆಧ್ಯಾತ್ಮಿಕ ಕ್ಷೇತ್ರದಲ್ಲಿನ ಅಪಾರ ಕೊಡುಗೆಗಾಗಿ ಮಹರ್ಷಿ ಅಧ್ಯಾತ್ಮ ವಿಶ್ವವಿದ್ಯಾಲಯದ ಸಂಸ್ಥಾಪಕ ಸಚ್ಚಿದಾನಂದ ಪರಬ್ರಹ್ಮ (ಡಾ.) ಜಯಂತ ಆಠವಲೆ ಅವರಿಗೆ ಪ್ರತಿಷ್ಠಿತ "ಧರ್ಮ ಅಲಂಕಾರ ಪ್ರಶಸ್ತಿ" ಮತ್ತು "ಮಾ ಪಟನ್ ದೇವಿ ಸಮ್ಮಾನ" ನೀಡಿ ಗೌರವಿಸಲಾಯಿತು.

ಪಟ್ನಾದಲ್ಲಿ ಆಯೋಜಿಸಲಾಗಿದ್ದ 'ಅಂತರಾಷ್ಟ್ರೀಯ ಜ್ಯೋತಿಷ್ಯ, ವಾಸ್ತು ಮತ್ತು ತಂತ್ರ ಸಮ್ಮೇಳನ'ದಲ್ಲಿ ಅವರ ಪರವಾಗಿ ಸದ್ಗುರು ನೀಲೇಶ್ ಸಿಂಗ್ಬಾಳ್ ಅವರು ಈ ಗೌರವವನ್ನು ಸ್ವೀಕರಿಸಿದರು.

<u>ವೈಜ್ಞಾನಿಕ ಓರೆಗಲ್ಲಿನಲ್ಲಿ ಸನಾತನ ಧರ್ಮ:</u> ಸಮ್ಮೇಳನದಲ್ಲಿ "ಭಾರತದ ಭೂಮಿಯ ಆಧ್ಯಾತ್ಮಿಕ ಪವಿತ್ರತೆ" ಎಂಬ ವಿಷಯದ ಕುರಿತು ಪ್ರಬಂಧ ಮಂಡಿಸಿದ ಸದ್ಗುರು ನೀಲೇಶ್ ಸಿಂಗ್ಬಾಳ್ ಅವರು, ಆಧ್ಯಾತ್ಮಿಕ ಸಾಧನೆಯು ಪರಿಸರದ ಮೇಲೆ ಬೀರುವ ಪ್ರಭಾವವನ್ನು ಆಧುನಿಕ ಸ್ಕ್ಯಾನರ್‌ಗಳ ಮೂಲಕ ವಿವರಿಸಿದರು. ಮಹರ್ಷಿ ಅಧ್ಯಾತ್ಮ ವಿಶ್ವವಿದ್ಯಾಲಯದ ಸಂಶೋಧನೆಯ ಕೆಲವು ಪ್ರಮುಖ ಅಂಶಗಳು ಹೀಗಿವೆ:


<u>ರಾಮಮಂದಿರದ ಪ್ರಭಾವ:</u> ಅಯೋಧ್ಯೆಯ ರಾಮಮಂದಿರ ನಿರ್ಮಾಣದಿಂದ ಅಲ್ಲಿನ ಭೂಮಿಯ ಧನಾತ್ಮಕ ಶಕ್ತಿಯಲ್ಲಿ (Aura) 16 ಪಟ್ಟು ಹೆಚ್ಚಳವಾಗಿದೆ.

<u>ತ್ರಿವೇಣಿ ಸಂಗಮ:</u> ಸಂಗಮದ ಪವಿತ್ರ ಸ್ನಾನದಿಂದ ಭಕ್ತರ ಪ್ರಭಾವಲಯವು (Aura) 133% ರಷ್ಟು ವೃದ್ಧಿಯಾಗುತ್ತದೆ ಎಂಬುದು ವೈಜ್ಞಾನಿಕವಾಗಿ ದೃಢಪಟ್ಟಿದೆ.

ಸಾಧನೆ ಮಾಡುವವರು ವಾಸಿಸುವ ಮನೆಯ ನೀರಿನಲ್ಲಿ ಹೆಚ್ಚಿನ ಧನಾತ್ಮಕ ಕಂಪನಗಳಿರುತ್ತವೆ. ಆದರೆ ಸಾಧನೆ ಮಾಡದವರ ಮನೆಯ ನೀರಿನಲ್ಲಿ ನಕಾರಾತ್ಮಕತೆ ಕಂಡುಬಂದಿದೆ.

<u>ವಿಶ್ವಗುರು ಭಾರತದ ಮುನ್ಸೂಚನೆ:</u> "ಭಾರತವು ವಿಶ್ವಗುರುವಾಗಲಿದೆ ಎಂದು ಸಚ್ಚಿದಾನಂದ ಪರಬ್ರಹ್ಮ (ಡಾ.) ಆಠವಲೆ ಅವರು 1998ರಲ್ಲೇ ನುಡಿದಿದ್ದ ಭವಿಷ್ಯವಾಣಿ ಈಗ ಸತ್ಯವಾಗುತ್ತಿದೆ," ಎಂದು ಸಿಂಗ್ಬಾಳ್ ಸ್ಮರಿಸಿದರು. ಈ ಸಂಶೋಧನಾ ವರದಿಗಳನ್ನು ಈಗಾಗಲೇ ದಾವೋಸ್ (WEF 2026) ನಂತಹ ಅಂತರಾಷ್ಟ್ರೀಯ ವೇದಿಕೆಗಳಲ್ಲಿ ಮಂಡಿಸಿರುವುದು ಗಮನಾರ್ಹ. ಸಮ್ಮೇಳನದಲ್ಲಿ ಬಿಹಾರದ ಗ್ರಾಮೀಣಾಭಿವೃದ್ಧಿ ಸಚಿವ ಅಶೋಕ್ ಚೌಧರಿ, ನೇಪಾಳದ ರಾಜಗುರು ಮಾಧವ ಭಟ್ಟರಾಯ್ ಹಾಗೂ ವಿಶ್ವ ಜ್ಯೋತಿಷ್ಯ ಮಹಾಸಂಘದ ಅಧ್ಯಕ್ಷ ಡಾ. ಅಶೋಕ್ ಮಿಶ್ರಾ ಸೇರಿದಂತೆ ಹಲವು ದೇಶಗಳ ಪ್ರತಿನಿಧಿಗಳು ಪಾಲ್ಗೊಂಡಿದ್ದರು.

# 'ವಿದ್ಯಾರ್ಥಿಗಳಲ್ಲಿ ಸೇವಾ ಮನೋಭಾವ ಬೆಳೆಸುವ ವೇದಿಕೆಯೇ ಎನ್‌ಎಸ್‌ಎಸ್'



ಕೊರಟಗೆರೆ

"ರಾಷ್ಟ್ರೀಯ ಸೇವಾ ಯೋಜನೆ ಶಿಬಿರಗಳು ವಿದ್ಯಾರ್ಥಿಗಳಲ್ಲಿ ಸಮಾಜದ ಬಗ್ಗೆ ಜವಾಬ್ದಾರಿಯುತ ಮನೋಭಾವ ಮೂಡಿಸುವುದರ ಜೊತೆಗೆ ಶಿಸ್ತು, ಸೇವಾ ಮನೋಭಾವ ಮತ್ತು ನಾಯಕತ್ವದ ಗುಣಗಳನ್ನು ಬೆಳೆಸುತ್ತವೆ," ಎಂದು ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಪ್ರೊಫೆಸರ್ ಈರಪ್ಪನಾಯಕ ತಿಳಿಸಿದರು.

ತಾಲ್ಲೂಕಿನ ಜಟ್ಟಿ ಅಗ್ರಹಾರದ ಸರ್ಕಾರಿ ಪ್ರಾಥಮಿಕ ಶಾಲೆಯ ಆವರಣದಲ್ಲಿ ಹಮ್ಮಿಕೊಂಡಿದ್ದ 2025–26ನೇ ಸಾಲಿನ ಎನ್.ಎಸ್.ಎಸ್ ವಾರ್ಷಿಕ ವಿಶೇಷ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿ ದೆಸೆಯಲ್ಲಿಯೇ ಇಂತಹ ಶಿಬಿರಗಳಲ್ಲಿ ಭಾಗವಹಿಸುವುದರಿಂದ ವ್ಯಕ್ತಿತ್ವ ವಿಕಾಸ ಸಾಧ್ಯವಾಗುತ್ತದೆ. ಶಿಬಿರದ ಸದುಪಯೋಗ ಪಡೆದು ವಿದ್ಯಾರ್ಥಿಗಳು ಸಮಾಜದಲ್ಲಿ ತಮ್ಮದೇ ಆದ ಉತ್ತಮ ವ್ಯಕ್ತಿತ್ವ ರೂಪಿಸಿಕೊಂಡು ನಾಡಿನ ಸೇವೆ ಮಾಡಬೇಕು ಎಂದು ಅವರು ಕರೆ ನೀಡಿದರು.

ಗ್ರಾಮ ಪಂಚಾಯಿತಿ ಪಿಡಿಓ ಎಚ್. ರಂಗನರಸಯ್ಯ ಮಾತನಾಡಿ, "ಗ್ರಾಮಾಭಿವೃದ್ಧಿಯಲ್ಲಿ ವಿದ್ಯಾರ್ಥಿಗಳ ಪಾತ್ರ ದೊಡ್ಡದಿದೆ. ಹಳ್ಳಿಗಳಲ್ಲಿ ನಡೆಯುವ ಇಂತಹ ಶಿಬಿರಗಳು ಗ್ರಾಮೀಣ ಜನರಲ್ಲಿ ಜಾಗೃತಿ ಮೂಡಿಸುತ್ತವೆ. ಆರು ದಿನಗಳ ಕಾಲ ನಡೆಯುವ ಈ ಶಿಬಿರಕ್ಕೆ ಪಂಚಾಯಿತಿಯಿಂದ ಎಲ್ಲಾ ರೀತಿಯ ಸಹಕಾರ ನೀಡಲಾಗುವುದು," ಎಂದು ಭರವಸೆ ನೀಡಿದರು. ಐಕ್ಯೂಎಸಿ ಸಂಚಾಲಕಿ ಪ್ರೊ. ಡಿ.ಎಸ್. ದೀಪಾ ಅವರು ಆರೋಗ್ಯಕರ ಯುವಕರಿಂದ ಮಾತ್ರ ಸಮೃದ್ಧ ಭಾರತ ನಿರ್ಮಾಣ ಸಾಧ್ಯ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಡಾ. ರಮೇಶ್ ಶಿಬಿರದ ಉದ್ದೇಶ ಮತ್ತು ಮಹತ್ವದ ಬಗ್ಗೆ ಪ್ರಾಸ್ತಾವಿಕವಾಗಿ ಮಾತನಾಡಿದರು. ವೇದಿಕೆಯಲ್ಲಿ ಮಹಿಳಾ ಮುಖಂಡರಾದ ಮಂಜುಳಾ ಆರಾಧ್ಯ, ಡಾ. ಲೋಕೇಶ್ ನಾಯಕ್, ಡಾ. ಅಶ್ವಕ್ ಅಹಮದ್, ಡಾ. ಅಮಿತ್, ಡಾ. ಜ್ಯೋತಿ, ನಾಗೇಂದ್ರ ಹಾಗೂ ಗ್ರಾಮ ಪಂಚಾಯಿತಿಯ ಮಾಜಿ ಜನಪ್ರತಿನಿಧಿಗಳು, ಶಾಲೆಯ ಮುಖ್ಯ ಶಿಕ್ಷಕಿ ಹಿಂದೂಮತಿ ಸೇರಿದಂತೆ ಗ್ರಾಮದ ಸಾರ್ವಜನಿಕರು ಉಪಸ್ಥಿತರಿದ್ದರು.

# ಸಮಕಾಲೀನ ಆಶೋತ್ತರಗಳಿಗೆ ತಕ್ಕಂತೆ ರಂಗಭೂಮಿ ಬದಲಾಗಲಿ: ಪ್ರೊ. ಕೆ.ಆರ್. ರವಿಕಿರಣ್



ದೊಡ್ಡಬಳ್ಳಾಪುರ

"ಪೌರಾಣಿಕ ನಾಟಕಗಳ ಜೊತೆಗೆ ಸಾಮಾಜಿಕ ಹಾಗೂ ಐತಿಹಾಸಿಕ ನಾಟಕಗಳ ಪ್ರದರ್ಶನಕ್ಕೂ ಹೆಚ್ಚಿನ ಉತ್ತೇಜನ ಅಗತ್ಯವಿದೆ. ಬದಲಾಗುತ್ತಿರುವ ಕಾಲಘಟ್ಟದ ಸಮಕಾಲೀನ ಆಶೋತ್ತರಗಳಿಗೆ ತಕ್ಕಂತೆ ನಾಟಕಗಳ ವಸ್ತು ಮತ್ತು ಅಭಿವ್ಯಕ್ತಿಗಳಲ್ಲಿ ಬದಲಾವಣೆ ಮಾಡಿಕೊಳ್ಳಬೇಕು," ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿ ಪ್ರೊ. ಕೆ.ಆರ್. ರವಿಕಿರಣ್ ಕರೆ ನೀಡಿದರು.

ಜಿಲ್ಲಾ ರಂಗಭೂಮಿ ಕಲಾವಿದರ ಸಂಘ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಮುದ್ದನಾಯಕನಪಾಳ್ಯದ ಜಿಲ್ಲಾ ಕಲಾ ಭವನದಲ್ಲಿ ಶನಿವಾರ ನಡೆದ '50ನೇ ಮಾಸಿಕ ರಂಗ ಕಲಾಜ್ಯೋತಿ', ರಂಗಗೀತೆ ಗಾಯನ ಹಾಗೂ ಪ್ರಶಸ್ತಿ ಪ್ರದಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

**ಕಲೆಗೆ ರೋಗನಿರೋಧಕ ಸಾಮರ್ಥ್ಯವಿದೆ:** "ಸಂಗೀತ ಮತ್ತು ಕಲೆಗಳಿಗೆ ಮನಸ್ಸು ಹಾಗೂ ದೇಹವನ್ನು ಪ್ರಫುಲ್ಲಗೊಳಿಸುವ ಸಂವೇದನೆ ಇದೆ. ಇರಾನ್-ಅಮೆರಿಕಾ ಯುದ್ಧದ ಸಂದರ್ಭದಲ್ಲಿ ಸಂಗೀತದ ಮೂಲಕ ಶಾಂತಿ ಸಂದೇಶ ಸಾರಿದ ಘಟನೆಯೇ ಕಲೆಯ ಶಕ್ತಿಗೆ ಸಾಕ್ಷಿ. ಯುವ ಕಲಾವಿದರನ್ನು ಪ್ರೋತ್ಸಾಹಿಸಲು ಮಾರ್ಗದರ್ಶಿ ಶಿಬಿರಗಳ ಅಗತ್ಯವಿದೆ," ಎಂದು ರವಿಕಿರಣ್ ತಿಳಿಸಿದರು.

**50 ತಿಂಗಳುಗಳ ನಿರಂತರ ಕಲಾ ಸೇವೆ:** ಪ್ರಾಸ್ತಾವಿಕವಾಗಿ ಮಾತನಾಡಿದ ಸಂಘದ ಗೌರವಾಧ್ಯಕ್ಷ ಕೆ.ಎಂ. ಕೃಷ್ಣಮೂರ್ತಿ, "ಕಳೆದ 50 ತಿಂಗಳುಗಳಿಂದ ಪ್ರತಿ ತಿಂಗಳು ಒಬ್ಬೊಬ್ಬ ಕಲಾವಿದರನ್ನು ಗುರುತಿಸಿ ಗೌರವಿಸುವ ಮೂಲಕ ಕಲಾ ಚೇತನಗಳ ಉತ್ತೇಜನಕ್ಕೆ ಶ್ರಮಿಸಲಾಗುತ್ತಿದೆ," ಎಂದರು.

ಸಂಘದ ಅಧ್ಯಕ್ಷ ಡಿ. ಕೆಂಪಣ್ಣ ಮಾತನಾಡಿ, ಜಿಲ್ಲೆಯ ಅಸಂಖ್ಯಾತ ಕಲಾವಿದರನ್ನು ಒಗ್ಗೂಡಿಸುವುದು ಈ ಕಾರ್ಯಕ್ರಮದ ಆಶಯ ಎಂದು ವಿವರಿಸಿದರು.

ಇದೇ ಸಂದರ್ಭದಲ್ಲಿ ಹಿರಿಯ ಕಲಾವಿದ ನಾರಾಯಣಸ್ವಾಮಿ ಅವರಿಗೆ 'ರಂಗ ಕಲಾ ಜ್ಯೋತಿ' ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಈ ಕಾರ್ಯಕ್ರಮದ ವೇದಿಕೆಯಲ್ಲಿ ಸಂಘದ ಉಪಾಧ್ಯಕ್ಷ ಎಸ್.ಎ. ಶ್ರೀಧರಗೌಡ, ಖಜಾಂಚಿ ಆರ್.ವಿ. ಮಂಜುನಾಥ್, ನಿರ್ದೇಶಕರಾದ ಮುನಿರಾಜು, ಕೆ. ನಾಗರತ್ನಮ್ಮ ಸೇರಿದಂತೆ ಸಂಘದ ಪದಾಧಿಕಾರಿಗಳು ಹಾಗೂ ಸಲಹಾ ಸಮಿತಿಯ ಸದಸ್ಯರು ಉಪಸ್ಥಿತರಿದ್ದರು.

## ಕೊತ್ತನೂರು ಡೇರಿ ಚುನಾವಣೆ: ಜೆಡಿಎಸ್ ಪಾರುಪತ್ಯ



ಶಿಡ್ಲಘಟ್ಟ

ತೀವ್ರ ಕುತೂಹಲ ಮೂಡಿಸಿದ್ದ ತಾಲೂಕಿನ ಕೊತ್ತನೂರು ಹಾಲು ಉತ್ಪಾದಕರ ಸಹಕಾರ ಸಂಘದ ಆಡಳಿತ ಮಂಡಳಿಯ 13 ನಿರ್ದೇಶಕರ ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ ಜೆಡಿಎಸ್ ಬೆಂಬಲಿತ ಅಭ್ಯರ್ಥಿಗಳು ಮೇಲುಗೈ ಸಾಧಿಸಿದ್ದಾರೆ. ಒಟ್ಟು ಸ್ಥಾನಗಳ ಪೈಕಿ 8 ಸ್ಥಾನಗಳಲ್ಲಿ ಜೆಡಿಎಸ್ ಹಾಗೂ 5 ಸ್ಥಾನಗಳಲ್ಲಿ ಕಾಂಗ್ರೆಸ್ ಬೆಂಬಲಿತರು ವಿಜೇತರಾಗಿದ್ದಾರೆ.

ಸಾಮಾನ್ಯ ಮೀಸಲು ಕ್ಷೇತ್ರದಿಂದ ಕೆ.ವಿ. ಜಗದೀಶ್ ರೆಡ್ಡಿ, ಗಿರಿಧರ್, ಡಿ.ಎಂ. ರಘುನಾಥರೆಡ್ಡಿ, ಸಿ.ಕೆ. ನಾರಾಯಣಸ್ವಾಮಿ, ಕೆ.ಸಿ. ನಾರಾಯಣಸ್ವಾಮಿ, ಎಸ್.ಕೆ. ರಾಮಯ್ಯ ಹಾಗೂ ಕೆ.ಆರ್. ವೇಣುಗೋಪಾಲರೆಡ್ಡಿ ಆಯ್ಕೆಯಾಗಿದ್ದಾರೆ. ಪರಿಶಿಷ್ಟ ಜಾತಿ ಮೀಸಲು ಸ್ಥಾನದಿಂದ ಉತ್ತನಳ್ಳಪ್ಪ ಮತ್ತು ಕೆ.ಸಿ. ಚಂದ್ರಶೇಖರ್ ಜಯಗಳಿಸಿದ್ದಾರೆ. ಬಿಸಿಎಂ 'ಎ' ವರ್ಗದಿಂದ ಮಂಜುಳಮ್ಮ, ಬಿಸಿಎಂ 'ಬಿ' ವರ್ಗದಿಂದ ರಾಜಣ್ಣ ಹಾಗೂ ಮಹಿಳಾ ಮೀಸಲು ಕ್ಷೇತ್ರದಿಂದ ಎ. ಮಂಜುಳ ಮತ್ತು ಮಂಜುಳಮ್ಮ ವಿಜೇತರಾಗಿ ಹೊರಹೊಮ್ಮಿದ್ದಾರೆ.

ತೀವ್ರ ಹಣಾಹಣಿಗೆ ಸಾಕ್ಷಿಯಾಗಿದ್ದ ಈ ಚುನಾವಣೆಯ ಫಲಿತಾಂಶ ಪ್ರಕಟವಾಗುತ್ತಿದ್ದಂತೆಯೇ ಜೆಡಿಎಸ್ ಮತ್ತು ಬಿಜೆಪಿ ಮೈತ್ರಿಕೂಟದ ಮುಖಂಡರು ಹಾಗೂ ಕಾರ್ಯಕರ್ತರು ಪಟಾಕಿ ಸಿಡಿಸಿ, ಪರಸ್ಪರ ಸಿಹಿ ಹಂಚಿ ಸಂಭ್ರಮಿಸಿದರು.

ಆದರೆ, ಈ ವಿಜಯೋತ್ಸವದ ವೇಳೆ ಜೆಡಿಎಸ್ ಕಾರ್ಯಕರ್ತನೊಬ್ಬ ಆಕ್ಷೇಪಾರ್ಹವಾಗಿ ಮಾತನಾಡಿದ್ದರಿಂದ ಕಾಂಗ್ರೆಸ್ ಕಾರ್ಯಕರ್ತರು ಕೆರಳಿದರು. ಇದು ಎರಡೂ ಗುಂಪುಗಳ ನಡುವೆ ಮಾತಿನ ಚಕಮಕಿಗೆ ಕಾರಣವಾಗಿ, ಪರಿಸ್ಥಿತಿ ಬಿಗುವಿನಿಂದ ಕೂಡಿತ್ತು. ತಕ್ಷಣವೇ ಕಾರ್ಯಪ್ರವೃತ್ತರಾದ ಪೊಲೀಸರು ಲಘು ಲಾಠಿ ಪ್ರಹಾರದ ಎಚ್ಚರಿಕೆ ನೀಡಿ ಗುಂಪನ್ನು ಚದುರಿಸುವ ಮೂಲಕ ಹೆಚ್ಚಿನ ಅನಾಹುತವನ್ನು ತಪ್ಪಿಸಿದರು.

## ಬೇಸಿಗೆ ತರಬೇತಿ ಆರಂಭ

ಮುಳಬಾಗಿಲು

2026-27ನೇ ಸಾಲಿನ ಬೇಸಿಗೆ ರಜೆಯ ಅವಧಿಯಲ್ಲಿ ತಾಲ್ಲೂಕಿನ 1 ರಿಂದ 10ನೇ ತರಗತಿಯ ವಿಶೇಷ ಚೇತನ ಮಕ್ಕಳಿಗೆ ವಿಶೇಷ ತರಬೇತಿ ಹಾಗೂ ದೈಹಿಕ ವ್ಯಾಯಾಮ ಚಟುವಟಿಕೆಗಳನ್ನು ಆಯೋಜಿಸಲಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಕೆ.ಎನ್. ರಾಮಚಂದ್ರ ತಿಳಿಸಿದ್ದಾರೆ.

ತಾಲ್ಲೂಕಿನ ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜಿನ ಆವರಣದಲ್ಲಿರುವ ಸಮನ್ವಯ ಶಿಕ್ಷಣದ ಸಂಪನ್ಮೂಲ ಕೇಂದ್ರ ಹಾಗೂ ಶಾಲಾ ಸಿದ್ಧತಾ ಕೇಂದ್ರದಲ್ಲಿ ಈ ಕಾರ್ಯಕ್ರಮವು ನಡೆಯಲಿದೆ.

ಶಿಬಿರದ ವಿವರಗಳು:

**ಅವಧಿ:** ಏಪ್ರಿಲ್ 11, 2026 ರಿಂದ ಮೇ 28, 2026ರವರೆಗೆ.

ಬ್ಲಾಕ್ ಸಮನ್ವಯ ಶಿಕ್ಷಣದ ಸಂಪನ್ಮೂಲ ಶಿಕ್ಷಕರು ಈ ಶಿಬಿರವನ್ನು ನಡೆಸಿಕೊಡಲಿದ್ದಾರೆ. ವಿಶೇಷ ಚೇತನ ಮಕ್ಕಳು ಶಿಕ್ಷಣದಿಂದ ವಂಚಿತರಾಗಬಾರದು ಮತ್ತು ರಜೆಯ ಅವಧಿಯಲ್ಲಿ ಅವರಲ್ಲಿ ಕ್ರಿಯಾಶೀಲತೆ ಹೆಚ್ಚಿಸಬೇಕು ಎಂಬ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿದೆ. ಈ ವಿಶೇಷ ಸೌಲಭ್ಯದ ಪ್ರಯೋಜನವನ್ನು ತಾಲ್ಲೂಕಿನ ಪಾಲಕರು ಮತ್ತು ವಿಶೇಷ ಚೇತನ ಮಕ್ಕಳು ಪಡೆದುಕೊಳ್ಳಬೇಕೆಂದು ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿಗಳಾದ ಪಿ. ಸೋಮೇಶ್ ಅವರು ಪತ್ರಿಕಾ ಪ್ರಕಟಣೆಯ ಮೂಲಕ ಕೋರಿದ್ದಾರೆ.

**ಸಂಪರ್ಕಕ್ಕಾಗಿ:** ಹೆಚ್ಚಿನ ಮಾಹಿತಿಗೆ ಶಿಕ್ಷಕ ಶಿವಕುಮಾರ್ (8147281939) ಅಥವಾ ಎನ್. ಸುಜಾತಮ್ಮ (8073539417)ರನ್ನು ಕೋರಲಾಗಿದೆ.

## ಪರಿಸರ ರಕ್ಷಣೆಗೆ ಕೈಜೋಡಿಸಿ; ಸ್ಟೀಲ್ ಬಾಟಲ್ ವಿತರಿಸಿದ ಜೆಸಿಐ



ತುಮಕೂರು

ಪ್ಲಾಸ್ಟಿಕ್ ಮುಕ್ತ ದೇಶ ಅಭಿಯಾನದ ಅಡಿಯಲ್ಲಿ ಇಂದು ಜೆಸಿಐ ತುಮಕೂರು ಮೆಟ್ರೋ ವತಿಯಿಂದ ಆಟೋ ಚಾಲಕರು ಮತ್ತು ಸಾರ್ವಜನಿಕರಿಗೆ ಕುಡಿಯುವ ನೀರಿನ ಸ್ಟೀಲ್ ಬಾಟಲ್‌ಗಳನ್ನು ವಿತರಿಸಲಾಯಿತು.

ನಗರದ ಬಿಜಿಎಸ್ ವೃತ್ತದಲ್ಲಿ ಜೆಸಿಐ ತುಮಕೂರು ಮೆಟ್ರೋ ಅಧ್ಯಕ್ಷರಾದ ಮಮತ ರಾಜ್ ಮತ್ತು ಕಾರ್ಯದರ್ಶಿ ಸನಿತ್ ರಾಜ್ ಅವರುಗಳ ನೇತೃತ್ವದಲ್ಲಿ ಜೆಸಿಐ ರಾಷ್ಟ್ರೀಯ ಉಪಾಧ್ಯಕ್ಷ ಜಿತೇಶ್ ಅದ್ವಾನಿ ಆಟೋ ಚಾಲಕರಿಗೆ ಮತ್ತು ಸಾರ್ವಜನಿಕರಿಗೆ ಸ್ಟೀಲ್‌ನ ಕುಡಿಯುವ ನೀರಿನ ಬಾಟಲಿಗಳನ್ನು ನೀಡಿ,ದಿನ ನಿತ್ಯ ಬಳಸುವ ಮೂಲಕ ಪ್ಲಾಸ್ಟಿಕ್ ಮುಕ್ತ ಭಾರತಕ್ಕೆ ಸಹಕಾರ ನೀಡುವಂತೆ ಕೋರಿದರು.

ಈ ವೇಳೆ ಮಾತನಾಡಿದ ಜೆಸಿಐ ವಲಯ 14ರ ಅಧ್ಯಕ್ಷ ಪ್ರಜ್ವಲ್ ಎಸ್. ಜೈನ್,ಮನುಷ್ಯ ತನಗೆ ಅರಿವಿಲ್ಲದೆಯೇ ಪ್ರತಿನಿತ್ಯ ಹಾನಿಕಾರಕವಾದ ಮೈಕ್ರೋ ಪ್ಲಾಸ್ಟಿಕ್ ವಸ್ತುಗಳನ್ನು ಬಳಕೆ ಮಾಡುತ್ತಿದ್ದು, ಇದರಿಂದ ಹನಿ ಹನಿ ವಿಷ ಮನುಷ್ಯನ ದೇಹ ಸೇರುತ್ತಿದೆ. ಇದರಿಂದ ಕ್ಯಾನ್ಸರ್ ನಂತಹ ಮಾರಕ ರೋಗಗಳಿಗೆ ಜನರು ತುತ್ತಾಗುತ್ತಿದ್ದಾರೆ. ಇದನ್ನು ತಪ್ಪಿಸುವ ಉದ್ದೇಶದಿಂದ ಜೂನಿಯರ್ ಛೇಂಬರ್ ಅಫ್ ಇಂಟರ್ ನ್ಯಾಷನಲ್ (ಜೆಸಿಐ) ಭವಿಷ್ಯದ ವಾರಸುದಾರರಾಗಿರುವ ಯುವಜನರಲ್ಲಿ ಪ್ಲಾಸ್ಟಿಕ್ ವಿರುದ್ಧ ಜನ ಜಾಗೃತಿ ಮೂಡಿಸಲು ಪ್ಲಾಸ್ಟಿಕ್ ಮುಕ್ತ ಭಾರತ ಅಭಿಯಾನವನ್ನು ಕೈಗೊಂಡಿದೆ. ಇದರ ಭಾಗವಾಗಿ ಇಂದು ಜೆಸಿಐ ತುಮಕೂರು ಮೆಟ್ರೋ ವತಿಯಿಂದ ಜನರಿಗೆ ಕುಡಿಯುವ ನೀರಿನ ಸ್ಟೀಲ್ ಬಾಟಲಿ ವಿತರಿಸಲಾಗುತ್ತಿದೆ. ಇದರ ಜನರ ಯುವಜನರನ್ನು ಅರ್ಥಿಕವಾಗಿ, ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಮೇಲೆ ತರಲು ಅಗತ್ಯವಾದ ತರಬೇತಿ ಮತ್ತು ಮಾರ್ಗದರ್ಶನ ನೀಡಿ, ಅವರಲ್ಲಿ ನಾಯಕತ್ವದ ಗುಣಗಳನ್ನು ಬೆಳೆಸಲಾಗುತ್ತಿದೆ ಎಂದರು.

ಜೆಸಿಐ ತುಮಕೂರು ಮೆಟ್ರೋದ ಅಧ್ಯಕ್ಷರಾದ ಮಮತರಾಜ್ ಮಾತನಾಡಿ, ಆರೋಗ್ಯವೆಂಬುದು ಇಂದು ಎಲ್ಲರಿಗೂ ದುಬಾರಿಯಾಗಿದೆ. ಇದಕ್ಕೆ ನಮ್ಮ ಜೀವನ ಶೈಲಿಯ ಜೊತೆಗೆ, ತಿಳುವಳಿಕೆಯ ಕೊರತೆಯಿಂದ ನಾವು ಉಪಯೋಗಿಸುವ ಪರಿಸರ ಮಾಲಿನ್ಯ ಯುಕ್ತ ವಸ್ತುಗಳೇ ಕಾರಣವಾಗಿದೆ.ಭೂಮಿಗೆ ಹಾಕಿದರೂ ಕೊಳೆಯದ ಪ್ಲಾಸ್ಟಿಕ್ ಬಳಕೆಯಿಂದ ಭೂಮಿ, ನೀರು, ಗಾಳಿ ಎಲ್ಲವೂ ಮಲೀನಗೊಳ್ಳುತ್ತಿದೆ. ಇದನ್ನು ತಡೆಯುವ ನಿಟ್ಟಿನಲ್ಲಿ ಜೆಸಿಐ ಈ ಅಭಿಯಾನ ಹಮ್ಮಿಕೊಂಡಿದೆ.ಇದರ ಜೊತೆಗೆ ಬೆಳ್ಳಿ ಬ್ಲಡ್ ಬ್ಯಾಂಕ್ ಸಹಯೋಗದಲ್ಲಿ ಇಂದು ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆಗೆ ಪಡೆಯುತ್ತಿರುವ ಹೆಚ್.ಐ.ವಿ.ಪೀಡಿತರಿಗೆ ಪೌಷ್ಠಿಕ ಪೌಡರ್ ನೀಡಲಾಗುತ್ತಿದೆ.ಇದೇ ರೀತಿಯ ಸಮಾಜ ಸೇವಾ ಕಾರ್ಯಗಳು ಜೆಸಿಐನಿಂದ ನಡೆಯಲಿವೆ ಎಂದರು.

ಕಾರ್ಯಕ್ರಮದಲ್ಲಿ ಜೆಸಿಐ ತುಮಕೂರು ಮೆಟ್ರೋ ಮಾಜಿ ಅಧ್ಯಕ್ಷ ಬೆಳ್ಳಿ ಲೋಕೇಶ್, ಪ್ರಸಕ್ತ ಸಾಲಿನ ಕಾರ್ಯದರ್ಶಿ ಸುನಿತ್ ರಾಜ್,ಜ್ಹೋನಲ್‌ನ ತರಬೇತಿ ವಿಭಾಗದ ಚೇರ್ಮನ್ ಶ್ರೀನಿವಾಸಮೂರ್ತಿ, ಪದಾಧಿಕಾರಿಗಳಾದ ಉಮಾಮಹೇಶ್, ಸಂಜಯ್, ಅನು, ನಾಗೇಂದ್ರನಾಥ್, ನಾಗಭೂಷಣ್, ವೇಣುಗೋಪಾಲ್ ಹಾಗೂ ನಟರಾಜಶೆಟ್ಟಿ ಉಪಸ್ಥಿತರಿದ್ದರು.

## ಕೆಜಿಎಫ್‌ನಲ್ಲಿ ಡ್ರಗ್ಸ್ ಜಾಲದ ಮೇಲೆ ಪೊಲೀಸರ ಸರಣಿ ದಾಳಿ: ಮೂವರು ಬಂಧನ







ಕೆ.ಜಿ.ಎಫ್

ಜಿಲ್ಲೆಯಲ್ಲಿ ಮಾದಕ ವಸ್ತುಗಳ ಮುಕ್ತವಾಗಿಸುವ ನಿಟ್ಟಿನಲ್ಲಿ ಕೆ.ಜಿ.ಎಫ್ ಜಿಲ್ಲಾ ಪೊಲೀಸರು ಭರ್ಜರಿ ಕಾರ್ಯಾಚರಣೆ ನಡೆಸಿದ್ದಾರೆ. ಮಾದಕ ವಸ್ತುಗಳ ಮಾರಾಟ ಮತ್ತು ಸಾಗಾಣಿಕೆಯಲ್ಲಿ ತೊಡಗಿದ್ದ ಮೂವರು ಆರೋಪಿಗಳನ್ನು ಬಂಧಿಸಿ, ಅವರಿಂದ ಗಣನೀಯ ಪ್ರಮಾಣದ ಗಾಂಜಾವನ್ನು ವಶಪಡಿಸಿಕೊಳ್ಳುವಲ್ಲಿ ಪೊಲೀಸ್ ತಂಡ ಯಶಸ್ವಿಯಾಗಿದೆ.

**ವಿವಿಧೆಡೆ ನಡೆದ ದಾಳಿಯ ವಿವರ:**

**ರಾಬರ್ಟಸನ್‌ಪೇಟೆ:** ಡಾನ್‌ಬಾಸ್ಕೊ ಐಟಿಐ ಕಾಲೇಜಿನ ಬಳಿ ಮಾದಕ ವಸ್ತು ಮಾರಾಟ ಮಾಡುತ್ತಿದ್ದ ರಾಹುಲ್ ದ್ರಾವಿಡ್ ಅಲಿಯಾಸ್ ರಾಹುಲ್ (26) ಎಂಬಾತನನ್ನು ಬಂಧಿಸಿ, 215 ಗ್ರಾಂ ಗಾಂಜಾ ವಶಪಡಿಸಿಕೊಳ್ಳಲಾಗಿದೆ.

ಕೆಜಿಎಫ್-ಕುಪ್ಪಂ ಮುಖ್ಯ ರಸ್ತೆಯ ರೋಜರ್ಸ್ ಕ್ಯಾಂಪ್ ಸ್ಮಶಾನದ ಬಳಿ ನಿಂತಿದ್ದ ಶೇಖರ್ ಅಲಿಯಾಸ್ ನಾಯಿಶೇಖರ್ (44) ಎಂಬಾತನನ್ನು ಬಂಧಿಸಿ, ಆತನಿಂದ 250 ಗ್ರಾಂ ಗಾಂಜಾ ಜಪ್ತಿ ಮಾಡಲಾಗಿದೆ.

**ಉರಿಗಾಂ:** ಎಲೆಕ್ಟ್ರಿಕ್ ಲೈನ್ ಸುಬ್ರಮಣಿಸ್ವಾಮಿ ದೇವಸ್ಥಾನದ ಸಮೀಪದ ರೈಲ್ವೆ ಟ್ರ್ಯಾಕ್ ಬಳಿ ಮಾದಕ ವಸ್ತು ಮಾರಾಟ ಮಾಡುತ್ತಿದ್ದ ಬ್ರಿನ್ ಕ್ಲಿಂಟನ್ (26) ಎಂಬಾತನ ಮೇಲೆ ದಾಳಿ ನಡೆಸಿ 169 ಗ್ರಾಂ ಗಾಂಜಾ ವಶಕ್ಕೆ ಪಡೆಯಲಾಗಿದೆ.

ಬಂಧಿತ ಮೂವರು ಆರೋಪಿಗಳ ವಿರುದ್ಧ ಆಯಾ ಪೊಲೀಸ್ ಠಾಣೆಗಳಲ್ಲಿ ಎನ್‌ಡಿಪಿಎಸ್ ಕಾಯ್ದೆಯಡಿ ಪ್ರಕರಣ ದಾಖಲಿಸಿ ಕಾನೂನು ಕ್ರಮ ಜರುಗಿಸಲಾಗಿದೆ.

**ಎಸ್ಪಿ ಶಿವಾಂಶು ರಜಪೂತ್ ಎಚ್ಚರಿಕೆ:** ಈ ಕುರಿತು ಮಾಹಿತಿ ನೀಡಿರುವ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಿವಾಂಶು ರಜಪೂತ್, "ಜಿಲ್ಲೆಯಲ್ಲಿ ಮಾದಕ ವಸ್ತುಗಳ ಚಟುವಟಿಕೆಯಲ್ಲಿ ಪದೇ ಪದೇ ತೊಡಗುವವರ ವಿರುದ್ಧ ಗಡಿಪಾರು ಕ್ರಮ ಕೈಗೊಳ್ಳಲಾಗುವುದು. ಕಾನೂನು ಉಲ್ಲಂಘನೆ ಮುಂದುವರಿಸಿದರೆ ಅಂತಹವರ ಮೇಲೆ ಗೂಂಡಾ ಕಾಯ್ದೆಯಡಿ ಪ್ರಕರಣ ದಾಖಲಿಸಿ ಕಠಿಣ ಕ್ರಮ ಜರುಗಿಸಲಾಗುವುದು," ಎಂದು ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದ್ದಾರೆ. ಈ ಯಶಸ್ವಿ ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದ ಡಿವೈಎಸ್ಪಿ ವಿ. ಲಕ್ಷ್ಮಯ್ಯ, ವೃತ್ತ ನಿರೀಕ್ಷಕರಾದ ಮಾರ್ಕೊಂಡಯ್ಯ, ಅನಿಲ್ ಕುಮಾರ್ ಹಾಗೂ ಪಿಎಸ್‌ಐಗಳಾದ ಮಹೇಶ್ ಮಾಲಿ, ಮಂಜುನಾಥ್, ಚಂದ್ರಶೇಖರ್, ಕೃಷ್ಣಮೂರ್ತಿ ಮತ್ತು ಸಿಬ್ಬಂದಿಯ ಕಾರ್ಯವನ್ನು ಎಸ್ಪಿ ಶ್ಲಾಘಿಸಿದ್ದಾರೆ.

## ಪ್ರೀಮಿಯರ್ ಲೀಗ್ ಪಂದ್ಯಾವಳಿ ಯಶಸ್ವಿ



ಬೇತಮಂಗಲ

"ಕ್ರಿಕೆಟ್ ಪಂದ್ಯಾವಳಿಗಳು ಗ್ರಾಮೀಣ ಮತ್ತು ಪಟ್ಟಣ ಪ್ರದೇಶದ ಉದಯೋನ್ಮುಖ ಕ್ರೀಡಾಪಟುಗಳಿಗೆ ತಮ್ಮ ಕೌಶಲ್ಯ ಪ್ರದರ್ಶಿಸಲು ಅತ್ಯುತ್ತಮ ವೇದಿಕೆಯಾಗಿವೆ," ಎಂದು ಯುವ ಮುಖಂಡ ಸಾಮ್ರಾಟ್ ಕೃಷ್ಣಮೂರ್ತಿ ಅಭಿಪ್ರಾಯಪಟ್ಟರು.

ಪಟ್ಟಣದ ಸಮೀಪದ ಬೂಚೆಪಲ್ಲಿ ಗ್ರಾಮದಲ್ಲಿ ಆಯೋಜಿಸಲಾಗಿದ್ದ ಬೂಚೆಪಲ್ಲಿ ಪ್ರೀಮಿಯರ್ ಲೀಗ್ ಸೀಸನ್-1 ಕ್ರಿಕೆಟ್ ಪಂದ್ಯಾವಳಿಯ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

"ಯುವ ಜನತೆಯನ್ನು ಕ್ರೀಡೆಯತ್ತ ಸೆಳೆಯುವುದು ಮತ್ತು ಅವರಿಗೆ ಸರಿಯಾದ ಅವಕಾಶ ಕಲ್ಪಿಸುವುದು ನಮ್ಮ ಈ ಟೂರ್ನಿಯ ಪ್ರಮುಖ ಉದ್ದೇಶವಾಗಿತ್ತು. ಸೀಸನ್-1 ರ ಭರ್ಜರಿ ಯಶಸ್ಸು ಮುಂದಿನ ದಿನಗಳಲ್ಲಿ ಇನ್ನು ದೊಡ್ಡ ಮಟ್ಟದ ಪಂದ್ಯಾವಳಿಗಳನ್ನು ಆಯೋಜಿಸಲು ನಮಗೆ ಸ್ಫೂರ್ತಿ ನೀಡಿದೆ. ಗ್ರಾಮೀಣ ಭಾಗದ ಪ್ರತಿಭೆಗಳನ್ನು ಗುರುತಿಸಿ ಪ್ರೋತ್ಸಾಹಿಸಲು ಇಂತಹ ಟೂರ್ನಿಗಳು ಅನಿವಾರ್ಯ," ಎಂದು ಅವರು ತಿಳಿಸಿದರು.

ತೀವ್ರ ಹಣಾಹಣಿಯಿಂದ ಕೂಡಿದ್ದ ಈ ಪಂದ್ಯಾವಳಿಯಲ್ಲಿ ಎಲ್ಲೋ ಸೂಪರ್ ಕಿಂಗ್ಸ್ ತಂಡವು ಪ್ರಥಮ ಬಹುಮಾನವಾಗಿ ಆಕರ್ಷಕ ಟ್ರೋಫಿ ಹಾಗೂ ನಗದು ಬಹುಮಾನವನ್ನು ಮುಡಿಗೇರಿಸಿಕೊಂಡಿತು. ಗ್ರೀನ್ ಫೈಟರ್ಸ್ ತಂಡವು ದ್ವಿತೀಯ ಬಹುಮಾನ ಪಡೆದು ರನ್ನರ್ ಅಪ್ ಸ್ಥಾನಕ್ಕೆ ತೃಪ್ತಿಪಟ್ಟುಕೊಂಡಿತು. ವಿಜೇತ ತಂಡಗಳಿಗೆ ಗಣ್ಯರು ಬಹುಮಾನ ವಿತರಿಸಿ ಶುಭ ಹಾರೈಸಿದರು.

ಕಾರ್ಯಕ್ರಮದಲ್ಲಿ ವೆಂಕಟ್ರಾಮ್, ಕುಮಾರ್, ಚಲಪತಿ, ಶ್ರೀನಿವಾಸ್ ರೆಡ್ಡಿ, ನಾಗರಾಜ್ ರೆಡ್ಡಿ, ರಾಜೇಂದ್ರ, ವಿನೋದ್ ಸೇರಿದಂತೆ ನೂರಾರು ಯುವಕರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದು ಆಟಗಾರರನ್ನು ಹುರಿದುಂಬಿಸಿದರು.

## ದ ಪ್ರೊಫೆಷನಲ್ ಕೊರಿಯರ್ಸ್‌ನಿಂದ ಹೊಸ ಡಿಜಿಟಲ್ ಸೇವೆ 'ಪ್ರೊ ಎಕ್ಸ್' ಬಿಡುಗಡೆ




ಬೆಂಗಳೂರು

ಭಾರತದ ಪ್ರಖ್ಯಾತ ಲಾಜಿಸ್ಟಿಕ್ಸ್ ಸಂಸ್ಥೆಯಾದ 'ದಿ ಪ್ರೊಫೆಷನಲ್ ಕೊರಿಯರ್ಸ್, ತನ್ನ 38 ವರ್ಷಗಳ ಯಶಸ್ವಿ ಪ್ರಯಾಣದ ಅಂಗವಾಗಿ ಅತ್ಯಾಧುನಿಕ ಡಿಜಿಟಲ್ ಎಕ್ಸ್‌ಪ್ರೆಸ್ ಸೇವೆ 'ಪ್ರೊ ಎಕ್ಸ್' ಅನ್ನು ನಗರದ ಜೆಪಿ ಫಾರ್ಚೂನ್ ಸೆಲೆಸ್ಟಿಯನ್ ಸಭಾಂಗಣದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಬಿಡುಗಡೆಗೊಳಿಸಿತು.

ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರುಗಳಾದ ಥಾಮಸ್ ಜಾನ್ ಹಾಗೂ ಅಹಮದ್ ಮೀರನ್, ನಿರ್ದೇಶಕರುಗಳಾದ ಡೆಮೇಸ್ಸಿ ಸಿ. ಚಾಕೋ, ಸುರೇಶ್ ಭಾರದಾನ್, ವಿ. ಶ್ರೀನಾಥ್ ಮತ್ತು ಪಿ.ಎಂ. ಅಬ್ರಹಾಂ ಅವರು ಜಂಟಿಯಾಗಿ ಈ ನೂತನ ಸೇವೆಯನ್ನು ಅನಾವರಣಗೊಳಿಸಿದರು.

**ವೇಗ ಮತ್ತು ವಿಶ್ವಾಸಾರ್ಹತೆಯ 'ಪ್ರೊ ಎಕ್ಸ್':** ಈ ಸಂದರ್ಭದಲ್ಲಿ ಮಾತನಾಡಿದ ಗಣ್ಯರು, "ಬದಲಾಗುತ್ತಿರುವ ಮಾರುಕಟ್ಟೆಯ ತಾಂತ್ರಿಕ ಅಗತ್ಯಗಳಿಗೆ ತಕ್ಕಂತೆ 'ಪ್ರೊ ಎಕ್ಸ್' ಅನ್ನು ವಿನ್ಯಾಸಗೊಳಿಸಲಾಗಿದೆ. ಇದು ಕೇವಲ ಸಾಗಣೆಯಷ್ಟೇ ಅಲ್ಲದೆ, ಗ್ರಾಹಕರಿಗೆ ಅಂತ್ಯದಿಂದ ಕೊನೆಯವರೆಗೆ ಡಿಜಿಟಲ್ ಪ್ರವೇಶವನ್ನು ಒದಗಿಸುತ್ತದೆ. ನೈಜ-ಸಮಯದ ಟ್ರ್ಯಾಕಿಂಗ್ ಮತ್ತು ತ್ವರಿತ ನವೀಕರಣಗಳ ಮೂಲಕ ಗ್ರಾಹಕರು ತಮ್ಮ ಪಾರ್ಸೆಲ್‌ಗಳ ಮೇಲೆ ಸಂಪೂರ್ಣ ನಿಯಂತ್ರಣ ಹೊಂದಿರಬಹುದು," ಎಂದು ತಿಳಿಸಿದರು.

**ತರಬೇತಿ ಮತ್ತು ಅಧಿಕೃತ ಚಾಲನೆ:** ಈ ಹೊಸ ಸೇವೆಯನ್ನು ದೇಶಾದ್ಯಂತ ಯಶಸ್ವಿಯಾಗಿ ಜಾರಿಗೆ ತರಲು, ಸಂಸ್ಥೆಯು ಏಪ್ರಿಲ್ 11, 2026 ರಂದು ಅಖಿಲ ಭಾರತ ಮಟ್ಟದ ತರಬೇತಿ ಕಾರ್ಯಾಗಾರವನ್ನು ಆಯೋಜಿಸಿದೆ. ಈ ಕಾರ್ಯಾಗಾರದಲ್ಲಿ ಸಿಬ್ಬಂದಿಗೆ ಸುಧಾರಿತ ತಂತ್ರಜ್ಞಾನ ಮತ್ತು ಸೇವಾ ಮಾನದಂಡಗಳ ಬಗ್ಗೆ ತರಬೇತಿ ನೀಡಲಾಗುತ್ತಿದೆ. ಮೇ 4, 2026 ರಿಂದ 'ಪ್ರೊ ಎಕ್ಸ್' ಸೇವೆಗಳು ಅಧಿಕೃತವಾಗಿ ಗ್ರಾಹಕರಿಗೆ ಲಭ್ಯವಾಗಲಿವೆ ಎಂದು ಸಂಸ್ಥೆ ಪ್ರಕಟಿಸಿದೆ.

ಕಳೆದ ನಾಲ್ಕು ದಶಕಗಳಿಂದ ದೇಶದ ಮೂಲೆ ಮೂಲೆಗಳಲ್ಲಿ ತನ್ನ ಜಾಲವನ್ನು ವಿಸ್ತರಿಸಿರುವ ಟಿಪಿಸಿ, ಈಗ ಈ ಅಲ್ಟ್ರಾ-ಪ್ರೀಮಿಯಂ ಸೇವೆಯ ಮೂಲಕ ಅಂತರಾಷ್ಟ್ರೀಯ ಗುಣಮಟ್ಟದ ಲಾಜಿಸ್ಟಿಕ್ಸ್ ಪರಿಹಾರಗಳನ್ನು ನೀಡಲು ಸಜ್ಜಾಗಿದೆ.

## ಕಾಳೇನಹಳ್ಳಿ ಅಂಗನವಾಡಿ ಕೇಂದ್ರ ಉದ್ಘಾಟನೆ



ತುಮಕೂರು

ತುಮಕೂರು ಗ್ರಾಮಾಂತರ ವಿಧಾನಸಭಾ ಕ್ಷೇತ್ರದ ಊರ್ಡಿಗೆರೆ ಹೋಬಳಿಯ ಕಾಳೇನಹಳ್ಳಿ ಗ್ರಾಮದಲ್ಲಿ ಜಲಸಂಪನ್ಮೂಲ ಇಲಾಖೆ ನಿವೃತ್ತ ಕಾರ್ಯದರ್ಶಿ ಹಾಗೂ ಉಪಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಅವರ ತಾಂತ್ರಿಕ ಸಲಹೆಗಾರರಾದ ಕೆ.ಜೆ. ಜಯಪ್ರಕಾಶ್ ಅವರ ತಂದೆ ತಾಯಿಯ ಸ್ಮರಣಾರ್ಥ ಅವರ ಹುಟ್ಟೂರಿನಲ್ಲಿ ನೂತನವಾಗಿ ನಿರ್ಮಾಣ ಮಾಡಿರುವ ಅಂಗನವಾಡಿ ಕೇಂದ್ರವನ್ನು ಶಾಸಕ ಬಿ. ಸುರೇಶ್‌ಗೌಡರು ಉದ್ಘಾಟಿಸಿದರು

ಈ ಸಮಾರಂಭದಲ್ಲಿ ಉಪ ಮುಖ್ಯಮಂತ್ರಿಗಳ ವಿಶೇಷ ಕರ್ತವ್ಯಾಧಿಕಾರಿ ವಿಶ್ವನಾಥ್ ರೆಡ್ಡಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ. ಅಶೋಕ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಸಿದ್ಧರಾಮಯ್ಯ, ತಾಲ್ಲೂಕು ಅಧಿಕಾರಿ ಶಶಿಧರ್, ಸೀತಕಲ್ಲು ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷೆ ಸೌಮ್ಯ ಹನುಮಂತರಾಜು, ಮುಖಂಡರಾದ ಊರ್ಡಿಗೆರೆ ರವಿ, ವಾಸು, ಮಾರುತಿ, ಹನುಮಂತರಾಜು ಇತರರು ಭಾಗವಹಿಸಿದ್ದರು.

## ಮಾದಕ ವಸ್ತುಗಳ ತಡೆಗೆ ಯುವಜನರ ಸಹಕಾರ ಅಗತ್ಯ: ಎಸ್‌ಪಿ ರಜಪೂತ್



ಬಂಗಾರಪೇಟೆ

"ಸಮಾಜದಲ್ಲಿ ಮಾದಕ ವಸ್ತುಗಳ ಬಳಕೆ ಹಾಗೂ ಅಕ್ರಮ ಸಾಗಾಟವನ್ನು ಬೇರು ಸಮೇತ ಕಿತ್ತೆಸೆಯಲು ಪೊಲೀಸ್ ಇಲಾಖೆಯೊಂದಿಗೆ ಸಾರ್ವಜನಿಕರು ಮತ್ತು ಯುವಜನತೆಯ ಸಹಕಾರ ಅತ್ಯಗತ್ಯ," ಎಂದು ಕೆಜಿಎಫ್ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಿವಾಂಶು ರಜಪೂತ್ ತಿಳಿಸಿದರು.

ಸ್ಥಳೀಯ ಎಸ್‌ಡಿಸಿ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ಮಾದಕ ದ್ರವ್ಯಗಳ ವಿರೋಧಿ ಜಾಗೃತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಅವರು ಮಾತನಾಡಿದರು.

"ವಿದ್ಯಾರ್ಥಿಗಳು ದೇಶದ ಭವಿಷ್ಯದ ಪ್ರಜೆಗಳು. ಯಾವುದೇ ಕಾರಣಕ್ಕೂ ಕ್ಷಣಿಕ ಸುಖ ನೀಡುವ ಮಾದಕ ವಸ್ತುಗಳ ವ್ಯಸನಕ್ಕೆ ಬಲಿಯಾಗಬಾರದು. ಇದು ಕೇವಲ ವ್ಯಕ್ತಿಯ ಬದುಕನ್ನು ಮಾತ್ರವಲ್ಲದೆ, ಇಡೀ ಕುಟುಂಬವನ್ನು ಬೀದಿಗೆ ತರುತ್ತದೆ. ಇತ್ತೀಚಿನ ದಿನಗಳಲ್ಲಿ ಯುವಪೀಳಿಗೆ ಇಂತಹ ಜಾಲಕ್ಕೆ ಸಿಲುಕುತ್ತಿರುವುದು ಆತಂಕಕಾರಿ ವಿಷಯ," ಎಂದು ಆತಂಕ ವ್ಯಕ್ತಪಡಿಸಿದರು.

ಮಾದಕ ವಸ್ತುಗಳ ಮಾರಾಟ ಅಥವಾ ಅಕ್ರಮ ಚಟುವಟಿಕೆಗಳು ಕಂಡುಬಂದಲ್ಲಿ ಸಾರ್ವಜನಿಕರು ತಕ್ಷಣ '112' ಸಹಾಯವಾಣಿಗೆ ಕರೆ ಮಾಡಬೇಕು. ಮಾಹಿತಿ ನೀಡುವವರ ಹೆಸರನ್ನು ಗೌಪ್ಯವಾಗಿಡಲಾಗುವುದು ಮತ್ತು ಪೊಲೀಸ್ ಸಿಬ್ಬಂದಿ ಕೂಡಲೇ ಸ್ಥಳಕ್ಕೆ ಆಗಮಿಸಿ ಕ್ರಮ ಕೈಗೊಳ್ಳುತ್ತಾರೆ ಎಂದು ಭರವಸೆ ನೀಡಿದರು. ಕಾನೂನು ಕ್ರಮಗಳ ಜೊತೆಗೆ ಸಾರ್ವಜನಿಕ ಜಾಗೃತಿಯಿಂದ ಮಾತ್ರ ಈ ಮಾಫಿಯಾವನ್ನು ತಡೆಯಲು ಸಾಧ್ಯ ಎಂದರು.

ಕಾರ್ಯಕ್ರಮದಲ್ಲಿ ಪೊಲೀಸ್ ಇನ್ಸ್‌ಪೆಕ್ಟರ್ ರವಿಕುಮಾರ್, ಸಬ್ ಇನ್ಸ್‌ಪೆಕ್ಟರ್ ರಾಜಣ್ಣ, ಎಎಸ್‌ಐಗಳಾದ ಶ್ರೀನಿವಾಸ್, ಸುಬ್ರಮಣಿ ಹಾಗೂ ಎಸ್.ಬಿ. ಚಲಪತಿ ಭಾಗವಹಿಸಿದ್ದರು. ಎಸ್‌ಡಿಸಿ ಕಾಲೇಜಿನ ಮುಖ್ಯಸ್ಥೆ ಉಷಾ ಗಂಗಾಧರ್, ಪ್ರಾಂಶುಪಾಲ ಜಗದೀಶ್ ಸೇರಿದಂತೆ ಬೋಧಕ ವರ್ಗ ಹಾಗೂ ನೂರಾರು ವಿದ್ಯಾರ್ಥಿಗಳು ಈ ಜಾಗೃತಿ ಅಭಿಯಾನದಲ್ಲಿ ಪಾಲ್ಗೊಂಡಿದ್ದರು.

## ವಿಜಯಪುರ ಡೇರಿಗೆ ಬಮೂಲ್‌ನಿಂದ 15 ಲಕ್ಷ 73 ಸಾವಿರ ಪ್ರೋತ್ಸಾಹಧನ ವಿತರಣೆ



ವಿಜಯಪುರ

ಇಲ್ಲಿನ ಹಾಲು ಉತ್ಪಾದಕರ ಸಹಕಾರ ಸಂಘವು, ಹಾಲು ಉತ್ಪಾದನೆಯಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲೆ ಪ್ರಥಮ ಸ್ಥಾನ ಪಡೆದಿದ್ದು, ಬೆಂಗಳೂರು ಹಾಲು ಒಕ್ಕೂಟದಿಂದ ಪ್ರೋತ್ಸಾಹಧನವಾಗಿ 15 ಲಕ್ಷ 73 ಸಾವಿರದ 643 ರೂಪಾಯಿ ಚೆಕ್ ಹಾಗೂ ಪಾರಿತೋಷಕ ನೀಡಿ ಪ್ರೋತ್ಸಾಹಿಸಿದ್ದಾರೆ.

ಬೆಂಗಳೂರಿನ ಡಾ. ಬಾಬು ಜಗಜೀವನರಾಮ್ ಭವನದಲ್ಲಿ, ಬೆಂಗಳೂರು ಹಾಲು ಒಕ್ಕೂಟದ ವ್ಯಾಪ್ತಿಯ ಎಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಸಿಬ್ಬಂದಿಗಳಿಗೆ ವಿಶೇಷ ಪ್ರೋತ್ಸಾಹಧನದ ಚೆಕ್ ವಿತರಣಾ ಸಮಾರಂಭದಲ್ಲಿ ಚೆಕ್ ವಿತರಣೆ ಮಾಡಿದ್ದಾರೆ.

ಬೆಂಗಳೂರು ಹಾಲು ಒಕ್ಕೂಟದ ಅಧ್ಯಕ್ಷ ಡಿ.ಕೆ.ಸುರೇಶ್ ಅವರು, ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಸಮೀಪದಲ್ಲಿದ್ದರೂ, ವಿಜಯಪುರ ಹಾಗೂ ಸುತ್ತಮುತ್ತಲಿನ ಹಳ್ಳಿಗಳ ರೈತರು, ಕೃಷಿ, ತೋಟಗಾರಿಕೆಯ ಜೊತೆಯಲ್ಲಿ, ಹೈನುಗಾರಿಕೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ತೊಡಗಿಸಿಕೊಂಡಿರುವುದರಿಂದ ನಿರುದ್ಯೋಗದ ಸಮಸ್ಯೆಯನ್ನು ಬಹಳಷ್ಟು ಸುಧಾರಣೆ ಮಾಡಲು ಸಹಕಾರಿಯಾಗಿದೆ. ಡೇರಿಗಳು, ಉತ್ಪಾದಕರನ್ನು ಮತ್ತಷ್ಟು ಪ್ರೋತ್ಸಾಹಗೊಳಿಸಬೇಕು, ಒಕ್ಕೂಟದಿಂದ ಸಿಗುವಂತಹ ಎಲ್ಲಾ ಸೌಲಭ್ಯಗಳನ್ನು ಉತ್ಪಾದಕರು ಸದುಪಯೋಗ ಪಡಿಸಿಕೊಳ್ಳುವಂತೆ ಅವರಿಗೆ ಮಾರ್ಗದರ್ಶನ ಮಾಡಿ ಎಂದರು.

ಬಮೂಲ್ ನಿರ್ದೇಶಕ ಎಸ್.ಪಿ.ಮುನಿರಾಜು ಗೌಡ ಮಾತನಾಡಿ, ನಮ್ಮ ಕ್ಷೇತ್ರದಲ್ಲಿ ಹಾಲಿನ ಉತ್ಪಾದನೆ ಹೆಚ್ಚಳ ಮಾಡಬೇಕು, ಬಂಡವಾಳ ಕಡಿಮೆ ಮಾಡಿ, ಉತ್ಪಾದಕರಿಗೆ ಹೆಚ್ಚಿನ ಆದಾಯವನ್ನು ತಂದುಕೊಡುವಂತಹ ಎಲ್ಲಾ ಮಾರ್ಗೋಪಾಯಗಳನ್ನು ಕಂಡು ಕೊಳ್ಳುವ ಪ್ರಯತ್ನಗಳು ಮಾಡುತ್ತಿದ್ದೇವೆ. ಸಹಜವಾಗಿ ಬೇಸಿಗೆಯಲ್ಲಿ, ಹಾಲಿ ಉತ್ಪಾದನೆ ಕುಂಠಿತವಾಗಿದೆ ಎಂದರು.

ವಿಜಯಪುರ ಡೇರಿಯ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಮಂಜುನಾಥ್, ಹಾಗೂ ಕಾರ್ಯಕಾರಿ ಮಂಡಳಿ ನಿರ್ದೇಶಕರು, ಇದ್ದರು.

14/04/2026

ಭಾರತ ಸಾರಥಿ

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಸಿದ್ದು ದೇಶದ ನಂಬರ್ ಒನ್ ಪ್ರಾಮಾಣಿಕ ಮುತ್ಸದ್ದಿ

ಹರಿಹರ

ದೇಶದ ಅತ್ಯಂತ ಪ್ರಾಮಾಣಿಕ ರಾಜಕಾರಣಿಗಳ ಸಾಲಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮೊದಲ ಸ್ಥಾನದಲ್ಲಿದ್ದಾರೆ ಎಂದು ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವ ಬೈರತಿ ಸುರೇಶ್ ಬಣ್ಣಿಸಿದ್ದಾರೆ.



ಹರಿಹರದ ಬೆಳ್ಳೂಡಿ ಗ್ರಾಮದ ಶ್ರೀ ಕಾಗಿನೆಲೆ ಕನಕ ಗುರುಪೀಠದ ಶಾಖಾಮಠದಲ್ಲಿ ಶುಕ್ರವಾರ ನಡೆದ ಶಾಖಾಮಠದ ದಶಮಾನೋತ್ಸವ, ಜಗದ್ಗುರು ಶ್ರೀ ರೇವಣಸಿದ್ದೇಶ್ವರ ಜಯಂತಿ ಹಾಗೂ ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮವನ್ನು ನೂತನ ವಧು-ವರರಿಗೆ ಶುಭ ಕೋರಿದ ನಂತರ ಅವರು ಮಾತನಾಡಿದರು.

ರಾಜ್ಯದಲ್ಲಿ ಕುರುಬ ಸಮಾಜ ಹಿಂದಿನಂತಿಲ್ಲ. ಕನಕ ಗುರುಪೀಠದ ಸ್ವಾಮೀಜಿಗಳು ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯನವರಂತಹ ಧೀಮಂತ ನಾಯಕರ ಮಾರ್ಗದರ್ಶನದಿಂದಾಗಿ ಇಂದು ಸುಶಿಕ್ಷಿತ ಸಮಾಜವಾಗಿ ಹೊರಹೊಮ್ಮಿದ್ದು, ಎಲ್ಲಾ ಕ್ಷೇತ್ರಗಳಲ್ಲೂ ತನ್ನದೇ ಆದ ಛಾಪು ಮೂಡಿಸುತ್ತಿದೆ ಎಂದರು.

ಬೆಂಗಳೂರಿನ ಶ್ರೀನಿವಾಸನಗರದಲ್ಲಿ ನಾವೆಲ್ಲಾ ನಾಯಕರು ಸೇರಿ ಸಮುದಾಯದ ಹೆಣ್ಣು ಮಕ್ಕಳಿಗಾಗಿ ಸುಸಜ್ಜಿತ ಹಾಸ್ಟೆಲ್ ಅನ್ನು ನಿರ್ಮಾಣ ಮಾಡಿದ್ದೇವೆ. ಇದಲ್ಲದೇ, ಶತಮಾನದ ಇತಿಹಾಸವಿರುವ ಗಾಂಧಿನಗರದ ಕರ್ನಾಟಕ ಕುರುಬರ ಸಂಘದ ಕಟ್ಟಡದ ಪುನರ್ ನಿರ್ಮಾಣ ಮಾಡಲಾಗುತ್ತಿದೆ. ಈ ಹೊಸ ಕಟ್ಟಡವನ್ನು ಸಿದ್ದರಾಮಯ್ಯನವರು ಮುಖ್ಯಮಂತ್ರಿಯಾಗಿರುವಾಗಲೇ ಅವರಿಂದಲೇ ಉದ್ಘಾಟನೆ ಮಾಡಿಸಲಾಗುತ್ತದೆ ಎಂದು ಸಚಿವರು ತಿಳಿಸಿದರು.

7 ಕೋಟಿ ಜನರ ಧ್ವನಿ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಡೀ ಸಮಸ್ತ ಕನ್ನಡನಾಡಿನ 7 ಕೋಟಿ ಜನರ ಧ್ವನಿಯಾಗಿ ಕೆಲಸ ಮಾಡುತ್ತಿದ್ದಾರೆ. ಕಾಯಕಯೋಗಿ ಶ್ರೀ ಬಸವಣ್ಣನವರ ಸಮಸಮಾಜ ನಿರ್ಮಾಣದ ಪರಿಕಲ್ಪನೆಯ ತಳಹದಿ, ಡಾ.ಬಿ.ಆರ್.ಅಂಬೇಡ್ಕರ್ ಅವರು ಕೊಟ್ಟಿರುವ ಸಂವಿಧಾನದ ಮಾರ್ಗದರ್ಶನದಲ್ಲಿಯೇ ಅವರು ನಮ್ಮ ರಾಜ್ಯವನ್ನು ಅಭಿವೃದ್ಧಿಪಥದತ್ತ ಕೊಂಡೊಯ್ಯುತ್ತಿದ್ದಾರೆ ಎಂದು ಅವರು ಹೇಳಿದರು.

ನಮ್ಮ ಕಾಂಗ್ರೆಸ್ ಸರ್ಕಾರ ಯಾವುದೇ ಜಾತಿ ಜನಾಂಗ ಎನ್ನದೇ ಪ್ರತಿಯೊಂದು ಮಠಮಾನ್ಯಗಳಿಗೆ ನೂರಾರು ಕೋಟಿ ರೂಪಾಯಿಗಳ ಅನುದಾನವನ್ನು ನೀಡಿದೆ. ಬೆಂಗಳೂರಿನ ಯಲಹಂಕದಲ್ಲಿ ಸಾವಿರಾರು ಕೋಟಿ ರೂಪಾಯಿ ಬೆಲೆ ಬಾಳುವ 50 ಎಕರೆ ಜಮೀನನ್ನು ಅಹಿಂದ ವರ್ಗಗಳ ಮಠಗಳಿಗೆ ನೀಡಲು ಮಹತ್ವದ ನಿರ್ಧಾರ ಮಾಡಿದೆ ಎಂದು ತಿಳಿಸಿದರು.

# ರೈಲುಗಳ ತಾತ್ಕಾಲಿಕ ನಿಲುಗಡೆ

ಬೆಂಗಳೂರು

ಬನಶಂಕರಿ ಜಾತ್ರಾ ಮಹೋತ್ಸವದ ಹಿನ್ನೆಲೆಯಲ್ಲಿ ಭಕ್ತಾದಿಗಳ ಸುಗಮ ಸಂಚಾರಕ್ಕಾಗಿ ನೈರುತ್ಯ ರೈಲ್ವೆಯು ಏಪ್ರಿಲ್ 23 ರಿಂದ 28ರವರೆಗೆ ಬನಶಂಕರಿ ಹಾಲ್ಟ್ ನಿಲ್ದಾಣದಲ್ಲಿ ಈ ಕೆಳಗಿನ ರೈಲುಗಳಿಗೆ ತಾತ್ಕಾಲಿಕ ನಿಲುಗಡೆಯನ್ನು ಕಲ್ಪಿಸಿದೆ. ಹಬ್ಬದ ಸಂದರ್ಭದಲ್ಲಿ ಉಂಟಾಗುವ ಪ್ರಯಾಣಿಕರ ದಟ್ಟಣೆಯನ್ನು ನಿರ್ವಹಿಸಲು ಈ ಕ್ರಮ ಕೈಗೊಳ್ಳಲಾಗಿದೆ.

ಈ ಅವಧಿಯಲ್ಲಿ, ರೈಲು ಸಂಖ್ಯೆ 56519 ಕೆಎಸ್‌ಆರ್ ಬೆಂಗಳೂರು–ಹೊಸಪೇಟೆ ದೈನಂದಿನ ಪ್ಯಾಸೆಂಜರ್ ಬೆಳಗ್ಗೆ 07:22ಕ್ಕೆ ನಿಲ್ದಾಣಕ್ಕೆ ಆಗಮಿಸಿ, 07:23ಕ್ಕೆ ಹೊರಡಲಿದ್ದರೆ, ರೈಲು ಸಂಖ್ಯೆ 56520 ಹೊಸಪೇಟೆ–ಕೆಎಸ್‌ಆರ್ ಬೆಂಗಳೂರು ಪ್ಯಾಸೆಂಜರ್ ಸಂಜೆ 07:27ಕ್ಕೆ ಆಗಮಿಸಿ, 07:28ಕ್ಕೆ ಪ್ರಯಾಣ ಮುಂದುವರಿಸಲಿದೆ. ಹಾಗೆಯೇ, ರೈಲು ಸಂಖ್ಯೆ 16239 ಚಿಕ್ಕಮಗಳೂರು–ಯಶವಂತಪುರ ಎಕ್ಸ್ ಪ್ರೆಸ್ ಬೆಳಗ್ಗೆ 10:57ಕ್ಕೆ ನಿಲ್ದಾಣಕ್ಕೆ ಬಂದು, 10:58ಕ್ಕೆ ನಿರ್ಗಮಿಸಲಿದೆ ಮತ್ತು ರೈಲು ಸಂಖ್ಯೆ 16240 ಯಶವಂತಪುರ–ಚಿಕ್ಕಮಗಳೂರು ಎಕ್ಸ್ ಪ್ರೆಸ್ ಸಂಜೆ 05:52ಕ್ಕೆ ಆಗಮಿಸಿ, 05:53ಕ್ಕೆ ಹೊರಡಲಿದೆ.

ಭಕ್ತಾದಿಗಳ ಪ್ರಯಾಣವನ್ನು ಸುಗಮಗೊಳಿಸಲು ಮತ್ತು ದಟ್ಟಣೆಯನ್ನು ನಿಯಂತ್ರಿಸಲು ಈ ತಾತ್ಕಾಲಿಕ ವ್ಯವಸ್ಥೆಯನ್ನು ಮಾಡಲಾಗಿದೆ.

# ಸ್ವಂತ ಪಕ್ಷ ಕಟ್ಟಿ 5 ಕ್ಷೇತ್ರ ಗೆಲ್ಲಿ: ಚಾಲೆಂಜ್

ಮೈಸೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕೆಲ ನಿರ್ದಿಷ್ಟ ಪ್ರಶ್ನೆ, ಸವಾಲುಗಳನ್ನು ಹಾಕಿರುವ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು, ನಮ್ಮನ್ನು ಟೀಕಿಸುವ ಮುನ್ನ ನನ್ನ ಪ್ರಶ್ನೆಗಳಿಗೆ ಉತ್ತರಿಸಿ ಎಂದು ಕೇಳಿದ್ದಾರೆ.


ಮೈಸೂರಿನಲ್ಲಿ ಶುಕ್ರವಾರ ದಿಶಾ ಸಮಿತಿ ಆರಂಭಕ್ಕೂ ಮುನ್ನ ಕೇಂದ್ರ ಸಚಿವರು ಮಾಧ್ಯಮಗಳ ಜೊತೆ ಮಾತನಾಡಿದರು.

ನಿಮ್ಮ ಮಗನನ್ನು ರಾಜಕಾರಣದಲ್ಲಿ ಇಟ್ಟುಕೊಂಡಿರುವ ನಿಮಗೆ ಕುಟುಂಬದ ರಾಜಕಾರಣದ ಬಗ್ಗೆ ಮಾತನಾಡುವ ನೈತಿಕತೆ ಇದೆಯೇ? ಅಹಿಂದ ನಾಯಕ ಎಂದು ಬೀಗುವ ನೀವು ಕಾಂಗ್ರೆಸ್ ಬಿಟ್ಟು ಸ್ವಂತ ಪಕ್ಷ ಐದು ಸೀಟು ಗೆಲ್ಲುವಿರಾ? ಮೊದಲು ಸಿದ್ದರಾಮಯ್ಯ ಅವರು ಈ ಸವಾಲುಗಳನ್ನು ಸ್ವೀಕರಿಸಲಿ ಎಂದು ಕುಮಾರಸ್ವಾಮಿ ಅವರು ಹೇಳಿದರು.

ಕುಟುಂಬ ರಾಜಕಾರಣದ ಬಗ್ಗೆ ಸಿದ್ದರಾಮಯ್ಯ ಅವರು ಮಾತನಾಡುವುದು ನಿಲ್ಲಿಸಬೇಕು. ಅವರಿಗೆ ಆ ಬಗ್ಗೆ ಮಾತನಾಡುವ ನೈತಿಕತೆ, ಯೋಗ್ಯತೆ ಇಲ್ಲ ಎಂದು ಕುಮಾರಸ್ವಾಮಿ ಅವರು ಟೀಕಾಪ್ರಹಾರ ನಡೆಸಿದರು.

ಜೆಡಿಎಸ್ ಕುಟುಂಬ ರಾಜಕಾರಣದ ಬಗ್ಗೆ ಸಿದ್ದರಾಮಯ್ಯ ಟೀಕೆ ಮಾಡಿದ್ದಾರೆ. ಇದು ಭೂತದ ಬಾಯಲ್ಲಿ ಭಗವದ್ಗೀತೆ ಬಂದ ಹಾಗಿದೆ. ಕುಟುಂಬ ರಾಜಕಾರಣ ಬಗ್ಗೆ ಮಾತನಾಡಲು ಅವರಿಗೆ ನೈತಿಕತೆ ಎಲ್ಲಿದೆ? ಮಗನಿಗೆ ಆಶ್ರಯ ಕಮಿಟಿ ಸದಸ್ಯತ್ವ ನೀಡಿ ಮಗನನ್ನು ಜಿಲ್ಲೆ ನೋಡಿಕೊಳ್ಳಲು ನಾನು ಬಿಟ್ಟಿಲ್ಲ. ನಾನು ಸಿಎಂ ಆಗಿದ್ದಾಗ ನನ್ನ ಮಗನಿಗೆ ಆಶ್ರಯ ಸಮಿತಿ ಸದಸ್ಯನನ್ನಾಗಿ ಮಾಡಿ ಯಾವುದಾದರೂ ಜಿಲ್ಲೆ ನೋಡಿಕೊ ಅಥವಾ ವಸೂಲಿ ಮಾಡು ಎಂದು ಹೇಳಲಿಲ್ಲ ಎಂದು ಅವರು ಕಿಡಿಕಾರಿದರು.

ಅವರ ಮೊದಲ ಮಗ ನಿಧನದ ಬಳಿಕ ಎರಡನೇ ಮಗನಿಗೆ ಆಶ್ರಯ ಕಮಿಟಿಯಲ್ಲಿ ಸದಸ್ಯ ಎಂದು ಮಾಡಿದ್ದಾರೆ. ಅವರ ಎರಡನೇ ಮಗನನ್ನು ರಾಜಕೀಯಕ್ಕೆ ಯಾಕೆ ಕರೆದುಕೊಂಡು ಬಂದರು? ವಸೂಲಿ ಮಾಡೋಕೆ ಅಲ್ಲವೇ? ವಸೂಲಿ ಮಾಡುವುದಕ್ಕೆ ನಾನು ನನ್ನ ಮಗನನ್ನು ಬಿಟ್ಟಿಲ್ಲ. ಅವರ ಮಗ ಈಗ ಎಲ್ಲಾ ಕಡೆ ವಸೂಲಿ ಮಾಡಿಕೊಂಡು ಕೂತಿದ್ದಾರೆ ಎಂದು ಕೇಂದ್ರ ಸಚಿವರು ಹರಿಹಾಯ್ದರು.



ನಾನು ಜನತಾದಳದಲ್ಲಿದ್ದಾಗ ಆ ಪಕ್ಷ 58 ಸೀಟು ಗೆದ್ದಿದ್ದು ಎಂದು ಸಿದ್ದರಾಮಯ್ಯ ಪದೇ ಪದೇ ಹೇಳುತ್ತಾರೆ. ಆ ಎಲೆಕ್ಷನ್ ನಲ್ಲಿ ಪಕ್ಷ ಅಷ್ಟು ಸೀಟು ಗೆಲ್ಲಲು ದೇವೇಗೌಡರು ಮತ್ತು ನನ್ನ ಪಾತ್ರವೂ ಸಾಕಷ್ಟಿದೆ.

ಇವರ ಪಾತ್ರ ಕೇವಲ ಹತ್ತರಷ್ಟು ಮಾತ್ರ.1999ರಲ್ಲಿ ಉಡ ಇವರೇ ಪಕ್ಷದ ಅಧ್ಯಕ್ಷರಾಗಿದ್ದರು. ಆಗ ಎಷ್ಟು ಸೀಟು ಗೆದ್ದಿದ್ದರು? ಮಹಾದೇವಪ್ಪ, ಸಿದ್ದರಾಮಯ್ಯ ಇಬ್ಬರು ಮನೆಗೆ ಬಂದು ದೇವೇಗೌಡರ ಮುಂದೆ ಕಣ್ಣೀರು ಹಾಕಿದ್ದರು. ಬಹುಶಃ ಆಗ ದೇವೇಗೌಡರ ಮುಂದೆ ಬಕೆಟ್ ಇದ್ದಿದ್ದರೆ ತುಂಬುತಿತ್ತು. ಸ್ವಲ್ಪ ಹಳೆ ವಿಚಾರಗಳನ್ನ ಸಿದ್ದರಾಮಯ್ಯ ನೆನಪು ಮಾಡಿಕೊಂಡರೆ ಉತ್ತಮ ಎಂದು ಕುಮಾರಸ್ವಾಮಿ ಅವರು ವಾಗ್ದಾಳಿ ನಡೆಸಿದರು.

ಚುನಾವಣೆಯಲ್ಲಿ ಸೋಲು ಗೆಲುವು ಸಹಜ. 1999ರ ಚುನಾವಣೆಯಲ್ಲಿ ಸ್ವತಃ ನಾನು, ದೇವೇಗೌಡರು, ರೇವಣ್ಣ, ಮಹಾದೇವಪ್ಪ, ಸಿದ್ದರಾಮಯ್ಯ ಎಲ್ಲರೂ ಸೋತಿದ್ದೆವು. ಆದರೆ ರಾಜಕೀಯ ಬೇಡ ಎಂದು ನಾನಾಗಲಿ ದೇವೇಗೌಡರಾಗಲಿ ಎಂದು ಕಣ್ಣೀರು ಹಾಕಿದವರಲ್ಲ. ಆದರೆ ಸಿದ್ದರಾಮಯ್ಯ ಕಣ್ಣೀರು ಹಾಕಿದ್ದರು. ಅಂದು ದೇವೇಗೌಡರು ಒಂದೇ ಮಾತು ಹೇಳಿದರು, ಹೆದರುವ ಅವಶ್ಯಕತೆ ಇಲ್ಲ ಪಕ್ಷ ಕಟ್ಟೋಣ ನಡೆಯಿರಿ. ನಾನಿದ್ದೇನೆ ಎಂದು ಧೈರ್ಯ ಹೇಳಿದ್ದರು ಎಂದು ಆಂಜನೇಯ ಪರಿಸ್ಥಿತಿಯನ್ನು ನೆನಪು ಮಾಡಿಕೊಂಡರು ಕುಮಾರಸ್ವಾಮಿ ಅವರು.

2004ರಲ್ಲಿ ಮಂಡ್ಯ, ರಾಮನಗರ ಎಲ್ಲೂ ಕೂಡ ಸಿದ್ದರಾಮಯ್ಯ ಪ್ರಚಾರಕ್ಕೆ ಬಂದಿಲ್ಲ. ನಾವು ಕೂಡ ಅವರನ್ನು ಕರೆಯಲಿಲ್ಲ. ಅಹಿಂದ ರಚಿಸಿ ದೇವೇಗೌಡರಿಗೆ ಅನ್ಯಾಯ ಮಾಡಿದರು. ಪಕ್ಷದ ಬೆನ್ನಿಗೆ ಚೂರಿ ಹಾಕಿದರು.

2006ರಲ್ಲಿ 200 ಮತಗಳಲ್ಲಿ ಗೆದ್ದಾಗ ಅವರ ಪರಿಸ್ಥಿತಿ ಹೇಗಿತ್ತು ಎಂದು ನೆನಪಿಸಿಕೊಳ್ಳಿ? ಈಗ ಅಧಿಕಾರ ಇದೆ ಎಂದು ಹಳೆಯದನ್ನು ಮರೆತರೆ ಜನ ಕ್ಷಮಿಸುವುದಿಲ್ಲ ಎಂದು ಕುಮಾರಸ್ವಾಮಿ ಅವರು ಹೇಳಿದರು.

# ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಯಾವುದೇ ರೀತಿಯ ಸಮಸ್ಯೆ ಆಗದಂತೆ ಕ್ರಮವಹಿಸಿ: ತುಷಾರ್ ಗಿರಿನಾಥ್

ಬೆಂಗಳೂರು



ಜಿಬಿಎ ವ್ಯಾಪ್ತಿಯಲ್ಲಿ ಮಳೆಗಾಲದಲ್ಲಿ ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಯಾವುದೇ ರೀತಿಯ ಸಮಸ್ಯೆಗಳು ಉಂಟಾಗದಂತೆ ಸೂಕ್ತ ಕ್ರಮಗಳನ್ನು ಕೈಗೊಳ್ಳುವ ಜೊತೆಗೆ ಮಳೆಗಾಲಕ್ಕೂ ಮುನ್ನ ಕಾಮಗಾರಿಗಳನ್ನು ಪೂರ್ಣಗೊಳಿಸಲು ನಗರಾಭಿವೃದ್ಧಿ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಯಾದ ತುಷಾರ್ ಗಿರಿನಾಥ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಬಿಎ ವ್ಯಾಪ್ತಿಯಲ್ಲಿ ಪೂರ್ವ ಮುಂಗಾರು ಮಳೆ ಪ್ರಾರಂಭವಾಗುತ್ತಿರುವ ಹಿನ್ನೆಲೆಯಲ್ಲಿ ಇಂದು ನಗರದಲ್ಲಿರುವ ಹಲವು ಪ್ರವಾಹ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ವೇಳೆ ಅವರು ಮಾತನಾಡಿದರು.

ಕೇಂದ್ರೀಯ ವಿಹಾರ್ ಅಪಾರ್ಟ್‌ಮೆಂಟ್ ಪ್ರದೇಶ ಹಾಗೂ ಕೋಗಿಲು ಜಂಕ್ಷನ್‌ನಲ್ಲಿ ಪ್ರವಾಹ ತಡೆಗಟ್ಟುವ ನಿಟ್ಟಿನಲ್ಲಿ ಯಲಹಂಕ ಕೆರೆಯ ವೆಂಕಟಾಲ ಕೆರೆ ಕೋಡಿಯಿಂದ ಜಕ್ಕೂರು ಕೆರೆಯವರೆಗೆ 2.7 ಕಿ.ಮೀ ಉದ್ದದ 35 ಮೀ. ಅಗಲದ ರಾಜಕಾಲುವೆ ಹಾಗೂ ಎರಡೂ ಬದಿಯಲ್ಲಿ 30 ಅಡಿ ರಸ್ತೆ ನಿರ್ಮಾಣ ಕಾರ್ಯಕ್ಕೆ ಅಧಿಸೂಚನೆ ಹೊರಡಿಸಲಾಗಿದೆ.

ಮೊದಲ ಹಂತದಲ್ಲಿ 1.5 ಕಿ.ಮೀ ಉದ್ದದ ಆರ್‌ಸಿಸಿ ತಡೆಗೋಡೆ ಸಹಿತ ರಾಜಕಾಲುವೆ ಕಾಮಗಾರಿ ಪೂರ್ಣಗೊಂಡಿದ್ದು, ಉಳಿದ ಭಾಗದಲ್ಲಿ ಮಳೆ ನೀರು ಸರಾಗವಾಗಿ ಹರಿಯುವಂತೆ ಕಚ್ಚಾ ಡ್ರೈನ್ ನಿರ್ಮಿಸಲಾಗಿದೆ. ಈ ಮಳೆಗಾಲದಲ್ಲಿ ಪ್ರವಾಹ ಉಂಟಾಗದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಸೂಚನೆ ನೀಡಿದರು.

ಯಲಹಂಕ ಕೆರೆ ಬಳಿ ನಡೆಯುತ್ತಿರುವ ಕಾಮಗಾರಿಯನ್ನು ಡ್ರೋನ್ ಮೂಲಕ ದೃಶ್ಯಾವಳಿ ಸೆರೆಹಿಡಿದು ವಿವರಣೆ ನೀಡಲು ಸೂಚಿಸಿದರು. ಜೊತೆಗೆ ಕೋಗಿಲು ಜಂಕ್ಷನ್ ಮೇಲ್ಸೇತುವೆ ಕೆಳಭಾಗದಲ್ಲಿರುವ ಮಳೆ ನೀರುಗಾಲುವೆಯನ್ನು ಪರಿಶೀಲಿಸಿ, ಅದಕ್ಕೆ ಸರಿಯಾದ ಗ್ರಿಲ್ ಅಳವಡಿಸಿ, ಹೂಳೆತ್ತಿ ಸ್ವಚ್ಛವಾಗಿಡಲು ಸೂಚಿಸಿದರು. ಮಳೆಗಾಲದ ವೇಳೆ ಈ ಸ್ಥಳದಲ್ಲಿ ಸಕ್ರಿಯವಾಗಿ ಒಂದು ತಂಡವನ್ನು ನಿಯೋಜಿಸುವಂತೆ ನಿರ್ದೇಶನ ನೀಡಿದರು.

ಕೇಂದ್ರೀಯ ವಿಹಾರ್ ಅಪಾರ್ಟ್‌ಮೆಂಟ್ ಪ್ರದೇಶದಲ್ಲಿ ಈ ಬಾರಿ ಯಾವುದೇ ತೊಂದರೆ ಉಂಟಾಗದಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ. ಮಳೆ ನೀರನ್ನು ಯಲಹಂಕ ಕೆರೆಯಿಂದ ಜಕ್ಕೂರು ಕೆರೆಗೆ ಹರಿಸುವ ವ್ಯವಸ್ಥೆ ಮಾಡಲಾಗಿದೆ ಎಂದು ಕಾರ್ಯಪಾಲಕ ಅಭಿಯಂತರರು ಮಾಹಿತಿ ನೀಡಿದರು.

ಟಾಟಾನಗರದಲ್ಲಿ 2024ರಲ್ಲಿ ಹೆಚ್ಚಿನ ಮಳೆಯಿಂದ ಉಂಟಾದ ಸಮಸ್ಯೆಗಳ ಕುರಿತು ಪರಿಶೀಲನೆ ನಡೆಸಿದರು. ಈ ಭಾಗದಲ್ಲಿ ದೊಡ್ಡಬೊಮ್ಮಸಂದ್ರ ಕೆರೆಯಿಂದ ಟಾಟಾನಗರವರೆಗೆ 900 ಮೀ. ಉದ್ದದ 20 ಅಡಿ ಅಗಲದ ಮಳೆನೀರುಗಾಲುವೆ ನಿರ್ಮಾಣ ಮಾಡಲಾಗುತ್ತಿದ್ದು, ತಡೆಗೋಡೆಯನ್ನು ಎತ್ತರಿಸಲಾಗುತ್ತಿದೆ.

ಒಳಚರಂಡಿಯ ಕೊಳಚೆ ನೀರು ಮಳೆನೀರುಗಾಲುವೆಗಳಿಗೆ ಸೇರುವುದನ್ನು ತಡೆಯಲು ಕ್ರಮವಹಿಸಬೇಕು. ಟಾಟಾನಗರ ರಾಯಲ್ ಮಾರ್ಟ್ ಬಳಿಯ ಮಳೆನೀರುಗಾಲುವೆ ಕಿರಿದಾಗಿರುವುದರಿಂದ ಪಕ್ಕದ ಜಾಗವನ್ನು ವಶಪಡಿಸಿಕೊಂಡು ಅಗಲೀಕರಣ ಮಾಡುವಂತೆ ಸೂಚಿಸಿದರು.

192 ಎಕರೆ ವ್ಯಾಪ್ತಿಯ ಹೆಬ್ಬಾಳ ಕೆರೆಯಲ್ಲಿ 15.90 ಕೋಟಿ ರೂ. ವೆಚ್ಚದಲ್ಲಿ ಸಮಗ್ರ ಅಭಿವೃದ್ಧಿ ಕಾರ್ಯ ಪ್ರಗತಿಯಲ್ಲಿದೆ. ಭದ್ರಪ್ಪ ಬಡಾವಣೆಯಲ್ಲಿ ಮೀನುಗಾರಿಕೆ ಸಂಶೋಧನಾ ಮತ್ತು ಮಾಹಿತಿ ಕೇಂದ್ರವು ಸುಮಾರು 16 ಎಕರೆ ಪ್ರದೇಶವನ್ನು ಒತ್ತುವರಿ ಮಾಡಿಕೊಂಡು ಕೊಳಗಳನ್ನು ನಿರ್ಮಿಸಿತ್ತು. ಈ ಕೊಳಗಳನ್ನು ತೆರವುಗೊಳಿಸಿದ ಬಳಿಕ ವೆಟ್‌ಲ್ಯಾಂಡ್ ಹಾಗೂ ಇನ್ ಲೆಟ್ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದ್ದು, ಅದನ್ನು ತ್ವರಿತವಾಗಿ ಪೂರ್ಣಗೊಳಿಸಲು ಸೂಚಿಸಿದರು.

ಹೆಬ್ಬಾಳ ಜಂಕ್ಷನ್ ಕೆಳಭಾಗದಲ್ಲಿ ಮಳೆನೀರನ್ನು ಕೆರೆಗೆ ಹರಿಸುವ ವ್ಯವಸ್ಥೆ ಮಾಡಲಾಗುತ್ತಿದ್ದು, ವೆಟ್‌ಲ್ಯಾಂಡ್ ಅಭಿವೃದ್ಧಿ ಕಾರ್ಯವನ್ನು ಶೀಘ್ರ ಪೂರ್ಣಗೊಳಿಸಲು ಸೂಚಿಸಿದರು.

ಮಾನ್ಯತಾ ಟೆಕ್ ಪಾರ್ಕ್ ಹಾಗೂ ವೀರಣ್ಣಪಾಳ್ಯ ಹೊರ ವರ್ತುಲ ರಸ್ತೆಯಲ್ಲಿ ಜಲಾವೃತ ಸಮಸ್ಯೆ ದೀರ್ಘಕಾಲದಿಂದ ಇದೆ. ಕೆಲವು ಜಾಗಗಳು ಖಾಸಗಿ ಮಾಲೀಕತ್ವದಲ್ಲಿರುವುದು ಕಂಡುಬಂದರೂ, ಅವುಗಳನ್ನು ಪಡೆದು ಖಾಸಗಿ ವೆಚ್ಚದಲ್ಲೇ ಮಳೆನೀರುಗಾಲುವೆ ನಿರ್ಮಾಣ ಮಾಡಲಾಗುತ್ತಿದೆ.

ವೀರಣ್ಣಪಾಳ್ಯದಿಂದ ಹೆಬ್ಬಾಳ ವ್ಯಾಲಿವರೆಗೆ 1.2 ಕಿ.ಮೀ ಉದ್ದದ ಎರಡು ಮಾನವ ನಿರ್ಮಿತ ಕಾಲುವೆಗಳ ಕಾಮಗಾರಿ ಪ್ರಗತಿಯಲ್ಲಿದ್ದು, 800 ಮೀ. ಆರ್‌ಸಿಸಿ ತಡೆಗೋಡೆ ನಿರ್ಮಿಸಲಾಗಿದೆ. ಉಳಿದ ಭಾಗದಲ್ಲೂ ಆರ್‌ಸಿಸಿ ಕಾಮಗಾರಿ ಕೈಗೊಳ್ಳಲು ಸೂಚಿಸಿದರು.

# 25 ಜನರಿಗೆ ನೋಟೀಸ್

ಬೆಂಗಳೂರು

ಈಗಾಗಲೇ ಜೋಂಬಿ ಡ್ರಗ್ಸ್ ವಿಚಾರವಾಗಿ ಸ್ಪಷ್ಟನೆ ಕೊಟ್ಟಿದ್ದೇವೆ. ವ್ಯಕ್ತಿ ಜೋಂಬಿ ಡ್ರಗ್ಸ್ ಸೇವಿಸಿರೋದು ಪತ್ತೆಯಾಗಿಲ್ಲ. ಆತನಿಗೆ ಮೆಡಿಕಲ್ ಟೆಸ್ಟ್ ಸಹ ಮಾಡಿಸಲಾಗಿದೆ. ವಿಡಿಯೋ ಅಪ್ಲೋಡ್ ಮಾಡಿದ್ದ ಆರೋಪಿ ಹೇಮಂತ್‌ನನ್ನು ಬಾಗಲೂರು ಠಾಣೆ ಪೊಲೀಸರು ಬಂಧಿಸಿದ್ದು, ವಿಚಾರಣೆ ಮಾಡಲಾಗುತ್ತಿದೆ. ಈಗ ಆತ ಕ್ಷಮೆ ಕೇಳಿ ವಿಡಿಯೋ ಮಾಡಿದ್ದಾನೆ ಎಂದರು. ಇನ್ನು ಈ ವಿಡಿಯೋ ಯಾರೆಲ್ಲಾ ಶೇರ್ ಮಾಡಿದ್ದಾರೋ ಅವರಿಗೆ ನೋಟಿಸ್ ಕೊಡುತ್ತೇವೆ. ಮೆಡಿಕಲ್ ರಿಪೋರ್ಟ್ ಆಧಾರದ ಮೇಲೆ ಕಾಮೆಂಟ್ ಮಾಡಬೇಕು. ಒಬ್ಬರ ಬಗ್ಗೆ ಅಪಪ್ರಚಾರ ಮಾಡುವ ಕೆಲಸ ಆಗಬಾರದು. ಊಹೆ ಮಾಡಿಕೊಂಡು ಪೋಸ್ಟ್ ಮಾಡುವುದು, ಆಧಾರ ರಹಿತ ಆರೋಪ ಮಾಡಿದರೆ ಕ್ರಮ ಕೈಗೊಳ್ಳುತ್ತೇವೆ ಎಂದು ಬೆಂಗಳೂರು ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಹೇಳಿದ್ದಾರೆ.

ಜೋಂಬಿ ಡ್ರಗ್ಸ್ ಬಗ್ಗೆ ಸೋಷಿಯಲ್ ಮೀಡಿಯಾದಲ್ಲಿ ಹಬ್ಬಿದ್ದ ಆತಂಕ ನಿವಾರಣೆಯಾಗಿದೆ. ಜೊತೆಗೆ ಸ್ಪಷ್ಟತೆ ಇಲ್ಲದೇ ಸುಮ್ ಸುಮ್ನೆ, ಸುಳ್ಳು ಸುದ್ದಿ, ವಿಡಿಯೋ ವೈರಲ್ ಮಾಡುವವರಿಗೆ ಬೆಂಗಳೂರು ಪೊಲೀಸರು ಪಾಠ ಕಲಿಸಿದ್ದಾರೆ. ಇದು ಎಲ್ಲರಿಗೂ ಒಂದು ಎಚ್ಚರಿಕೆಯ ಘಂಟೆ ಎಂದು ಹೇಳಬಹುದು.

# ಮೈಸೂರು ಮತ್ತು ಜಲ್ಪೈಗುಡಿ ಜಂಕ್ಷನ್ ನಡುವೆ ವಿಶೇಷ ರೈಲುಗಳು

ಬೆಂಗಳೂರು

ಬೇಸಿಗೆ ಸಮಯದಲ್ಲಿ ಹೆಚ್ಚುತ್ತಿರುವ ಪ್ರಯಾಣಿಕರ ಬೇಡಿಕೆಯನ್ನು ಪೂರೈಸಲು, ನೈರುತ್ಯ ರೈಲ್ವೆಯು ಮೈಸೂರು ಮತ್ತು ಜಲ್ಪೈಗುಡಿ ಜಂಕ್ಷನ್ ನಡುವೆ ವಿಶೇಷ ಎಕ್ಸ್ ಪ್ರೆಸ್ ರೈಲುಗಳನ್ನು ಕೆಳಗಿನಂತೆ ಸಂಚರಿಸಲಿದೆ:

ರೈಲು ಸಂಖ್ಯೆ 06251 ಮೈಸೂರು ಜಲ್ಪೈಗುಡಿ ಜಂಕ್ಷನ್ ವಿಶೇಷ ಎಕ್ಸ್ ಪ್ರೆಸ್ ಮೈಸೂರಿನಿಂದ ಶುಕ್ರವಾರಗಳಂದು ಏಪ್ರಿಲ್ 17 ಮತ್ತು 24 2026 ರಂದು ಸಂಜೆ 16:40 ಗಂಟೆಗೆ ಹೊರಟು, ಭಾನುವಾರ 17:30 ಗಂಟೆಗೆ ಜಲ್ಪೈಗುಡಿ ಜಂಕ್ಷನ್ ತಲುಪಲಿದೆ.

ಮರು ಪಯಣದಲ್ಲಿ, ರೈಲು ಸಂಖ್ಯೆ 06252 ಜಲ್ಪೈಗುಡಿ ಜಂಕ್ಷನ್ ಮೈಸೂರು ವಿಶೇಷ ಎಕ್ಸ್ ಪ್ರೆಸ್ ಜಲ್ಪೈಗುಡಿ ಜಂಕ್ಷನ್ನಿಂದ ಸೋಮವಾರಗಳಂದು ಏಪ್ರಿಲ್ 20 ಮತ್ತು 27 2026 ರಂದು ಸಂಜೆ 16:45 ಗಂಟೆಗೆ ಹೊರಟು, ಬುಧವಾರ 16:00 ಗಂಟೆಗೆ ಮೈಸೂರು ಆಗಮಿಸಲಿದೆ.

ಈ ರೈಲು ತನ್ನ ಮಾರ್ಗದಲ್ಲಿ ಮಂಡ್ಯ, ಮದ್ದೂರು, ಕೆಂಗೇರಿ, ಕೆಎಸ್‌ಆರ್ ಬೆಂಗಳೂರು, ಬಂಗಾರಪೇಟೆ, ಜೋಲಾರಪೇಟೆ, ಕಟ್ಪಾಡಿ, ರೇಣಿಗುಂಟಾ, ಗುಡೂರು, ನೆಲ್ಲೂರು, ಒಂಗೋಲ್, ವಿಜಯವಾಡ, ರಾಜಮಂಡ್ರಿ, ಕೊತ್ತವಲಸ, ವಿಜಯನಗರಂ, ಶ್ರೀಕಾಕುಳಂ ರೋಡ್, ಪಾಲಾಸಾ, ಬ್ರಹ್ಮಪುರ, ಬಾಲುಗಾಂ, ಖುರ್ದಾ ರೋಡ್, ಭುವನೇಶ್ವರ, ಕಟಕ್, ಜಾಜ್ಪುರ ಕೆ ರೋಡ್, ಭದ್ರಕ್, ಬಾಲಸೋರ್, ಖರಗ್ಪುರ್, ಅಂಡುಲ್, ದಾಂಕುಣಿ, ಬರ್ಧಮಾನ, ಬಾಲ್ಪೂರ್ ಎಸ್ ನಿಕ್ಟಿನ್, ರಾಮ್ಪುರ ಹಾಟ್, ನ್ಯೂ ಫರಕ್ಕಾ, ಮಾಲ್ಡಾ ಟೌನ್, ಕಿಶನ್ ಗಂಜ್ ನಿಲ್ದಾಣಗಳಲ್ಲಿ ಎರಡೂ ದಿಕ್ಕುಗಳಲ್ಲಿ ನಿಲುಗಡೆಗಳನ್ನು ಹೊಂದಿರುತ್ತದೆ.

ಈ ರೈಲು ಒಟ್ಟು 20 ಬೋಗಿಗಳನ್ನು ಹೊಂದಿದ್ದು, ಅವುಗಳಲ್ಲಿ 01 ಫಸ್ಟ್ ಎಸಿ ಟು ಟಯರ್, 02 ಎಸಿ ತ್ರಿ ಟಯರ್, 10 ಸ್ಲೀಪರ್ ಕ್ಲಾಸ್, 05 ಸಾಮಾನ್ಯ ದ್ವಿತೀಯ ಕ್ಲಾಸ್, ಮತ್ತು 02ಬೋಗಿಗಳನ್ನು ಒಳಗೊಂಡಿರಲಿವೆ.

# ರೈಲುಗಳ ತಾತ್ಕಾಲಿಕ ನಿಲುಗಡೆ

ಬೆಂಗಳೂರು

ಬನಶಂಕರಿ ಜಾತ್ರಾ ಮಹೋತ್ಸವದ ಹಿನ್ನೆಲೆಯಲ್ಲಿ ಭಕ್ತಾದಿಗಳ ಸುಗಮ ಸಂಚಾರಕ್ಕಾಗಿ ನೈರುತ್ಯ ರೈಲ್ವೆಯು ಏಪ್ರಿಲ್ 23 ರಿಂದ 28ರವರೆಗೆ ಬನಶಂಕರಿ ಹಾಲ್ಟ್ ನಿಲ್ದಾಣದಲ್ಲಿ ಈ ಕೆಳಗಿನ ರೈಲುಗಳಿಗೆ ತಾತ್ಕಾಲಿಕ ನಿಲುಗಡೆಯನ್ನು ಕಲ್ಪಿಸಿದೆ. ಹಬ್ಬದ ಸಂದರ್ಭದಲ್ಲಿ ಉಂಟಾಗುವ ಪ್ರಯಾಣಿಕರ ದಟ್ಟಣೆಯನ್ನು ನಿರ್ವಹಿಸಲು ಈ ಕ್ರಮ ಕೈಗೊಳ್ಳಲಾಗಿದೆ.

ಈ ಅವಧಿಯಲ್ಲಿ, ರೈಲು ಸಂಖ್ಯೆ 56519 ಕೆಎಸ್‌ಆರ್ ಬೆಂಗಳೂರು–ಹೊಸಪೇಟೆ ದೈನಂದಿನ ಪ್ಯಾಸೆಂಜರ್ ಬೆಳಗ್ಗೆ 07:22ಕ್ಕೆ ನಿಲ್ದಾಣಕ್ಕೆ ಆಗಮಿಸಿ, 07:23ಕ್ಕೆ ಹೊರಡಲಿದ್ದರೆ, ರೈಲು ಸಂಖ್ಯೆ 56520 ಹೊಸಪೇಟೆ ಕೆಎಸ್‌ಆರ್ ಬೆಂಗಳೂರು ಪ್ಯಾಸೆಂಜರ್ ಸಂಜೆ 07:27ಕ್ಕೆ ಆಗಮಿಸಿ, 07:28ಕ್ಕೆ ಪ್ರಯಾಣ ಮುಂದುವರಿಸಲಿದೆ. ಹಾಗೆಯೇ, ರೈಲು ಸಂಖ್ಯೆ 16239 ಚಿಕ್ಕಮಗಳೂರು–ಯಶವಂತಪುರ ಎಕ್ಸ್ ಪ್ರೆಸ್ ಬೆಳಗ್ಗೆ 10:57ಕ್ಕೆ ನಿಲ್ದಾಣಕ್ಕೆ ಬಂದು, 10:58ಕ್ಕೆ ನಿರ್ಗಮಿಸಲಿದೆ ಮತ್ತು ರೈಲು ಸಂಖ್ಯೆ 16240 ಯಶವಂತಪುರ–ಚಿಕ್ಕಮಗಳೂರು ಎಕ್ಸ್ ಪ್ರೆಸ್ ಸಂಜೆ 05:52ಕ್ಕೆ ಆಗಮಿಸಿ, 05:53ಕ್ಕೆ ಹೊರಡಲಿದೆ.

ಭಕ್ತಾದಿಗಳ ಪ್ರಯಾಣವನ್ನು ಸುಗಮಗೊಳಿಸಲು ಮತ್ತು ದಟ್ಟಣೆಯನ್ನು ನಿಯಂತ್ರಿಸಲು ಈ ತಾತ್ಕಾಲಿಕ ವ್ಯವಸ್ಥೆಯನ್ನು ಮಾಡಲಾಗಿದೆ. ಬನಶಂಕರಿ ಜಾತ್ರಾ ಮಹೋತ್ಸವದ ಹಿನ್ನೆಲೆಯಲ್ಲಿ ಭಕ್ತಾದಿಗಳ ಸುಗಮ ಸಂಚಾರಕ್ಕಾಗಿ ನೈರುತ್ಯ ರೈಲ್ವೆಯು ಏಪ್ರಿಲ್ 23 ರಿಂದ 28ರವರೆಗೆ ಬನಶಂಕರಿ ಹಾಲ್ಟ್ ನಿಲ್ದಾಣದಲ್ಲಿ ಈ ಕೆಳಗಿನ ರೈಲುಗಳಿಗೆ ತಾತ್ಕಾಲಿಕ ನಿಲುಗಡೆಯನ್ನು ಕಲ್ಪಿಸಿದೆ. ಹಬ್ಬದ ಸಂದರ್ಭದಲ್ಲಿ ಉಂಟಾಗುವ ಪ್ರಯಾಣಿಕರ ದಟ್ಟಣೆಯನ್ನು ನಿರ್ವಹಿಸಲು ಈ ಕ್ರಮ ಕೈಗೊಳ್ಳಲಾಗಿದೆ. ಭಕ್ತಾದಿಗಳ ಪ್ರಯಾಣವನ್ನು ಸುಗಮಗೊಳಿಸಲು ಮತ್ತು ದಟ್ಟಣೆಯನ್ನು ನಿಯಂತ್ರಿಸಲು ಈ ತಾತ್ಕಾಲಿಕ ವ್ಯವಸ್ಥೆಯನ್ನು ಮಾಡಲಾಗಿದೆ. ಬನಶಂಕರಿ ಜಾತ್ರಾ ಮಹೋತ್ಸವದ ಹಿನ್ನೆಲೆಯಲ್ಲಿ ಭಕ್ತಾದಿಗಳ ಸುಗಮ ಸಂಚಾರಕ್ಕಾಗಿ ನೈರುತ್ಯ ರೈಲ್ವೆಯು ಏಪ್ರಿಲ್ 23 ರಿಂದ 28ರವರೆಗೆ ಬನಶಂಕರಿ ಹಾಲ್ಟ್ ನಿಲ್ದಾಣದಲ್ಲಿ ಈ ಕೆಳಗಿನ ರೈಲುಗಳಿಗೆ ತಾತ್ಕಾಲಿಕ ನಿಲುಗಡೆಯನ್ನು ಕಲ್ಪಿಸಿದೆ. ಹಬ್ಬದ ಸಂದರ್ಭದಲ್ಲಿ ಉಂಟಾಗುವ ಪ್ರಯಾಣಿಕರ ದಟ್ಟಣೆಯನ್ನು ನಿರ್ವಹಿಸಲು ಈ ಕ್ರಮ ಕೈಗೊಳ್ಳಲಾಗಿದೆ.

07:23ಕ್ಕೆ ಹೊರಡಲಿದ್ದರೆ, ರೈಲು ಸಂಖ್ಯೆ 56520 ಹೊಸಪೇಟೆ ಕೆಎಸ್‌ಆರ್ ಬೆಂಗಳೂರು ಪ್ಯಾಸೆಂಜರ್ ಸಂಜೆ 07:27ಕ್ಕೆ ಆಗಮಿಸಿ, 07:28ಕ್ಕೆ ಪ್ರಯಾಣ ಮುಂದುವರಿಸಲಿದೆ. ಹಾಗೆಯೇ, ರೈಲು ಸಂಖ್ಯೆ 16239 ಚಿಕ್ಕಮಗಳೂರು–ಯಶವಂತಪುರ ಎಕ್ಸ್ ಪ್ರೆಸ್ ಬೆಳಗ್ಗೆ 10:57ಕ್ಕೆ ನಿಲ್ದಾಣಕ್ಕೆ ಬಂದು, 10:58ಕ್ಕೆ ನಿರ್ಗಮಿಸಲಿದೆ ಮತ್ತು ರೈಲು ಸಂಖ್ಯೆ 16240 ಯಶವಂತಪುರ–ಚಿಕ್ಕಮಗಳೂರು ಎಕ್ಸ್ ಪ್ರೆಸ್ ಸಂಜೆ 05:52ಕ್ಕೆ ಆಗಮಿಸಿ, 05:53ಕ್ಕೆ ಹೊರಡಲಿದೆ.

ಭಕ್ತಾದಿಗಳ ಪ್ರಯಾಣವನ್ನು ಸುಗಮಗೊಳಿಸಲು ಮತ್ತು ದಟ್ಟಣೆಯನ್ನು ನಿಯಂತ್ರಿಸಲು ಈ ತಾತ್ಕಾಲಿಕ ವ್ಯವಸ್ಥೆಯನ್ನು ಮಾಡಲಾಗಿದೆ.

ಉತ್ತಮ ಚಾರ್ಟೆಡ್ ಅಕೌಂಟೆಂಟ್ ಆಗಿಯೂ ಹೆಸರಾಂತರಾಗಿರುವ ಭಾನುಪ್ರಿಯ ಅವರ ನುರಿತ ಗರಡಿಯಲ್ಲಿ ರೂಹು ತಳೆದ ಕಲಾಶಿಲ್ಪ ಕು. ಸ್ಮಿತಾ ರಾಮಣ್ಣ ಬಹುಮುಖ ಪ್ರತಿಭೆ. ಕಳೆದ ಕೆಲವು ವರ್ಷಗಳಿಂದ ಕು. ಸ್ಮಿತಾ, ಇವರಿಂದ ಪರಿಣತ ನಾಟ್ಯ ಶಿಕ್ಷಣ ಪಡೆಯುತ್ತಾ ತಮ್ಮ ನೃತ್ಯ ನೈಪುಣ್ಯದ ವಿವಿಧ ಆಯಾಮಗಳನ್ನು ಗರಿಗೊಳಿಸಿಕೊಳ್ಳುತ್ತ ವಿಶೇಷವಾಗಿ ಅಭಿನಯದಲ್ಲಿ ಪ್ರಾವೀಣ್ಯ ಪಡೆಯುವತ್ತ ಶ್ರಮಿಸುತ್ತಿದ್ದಾರೆ. ಕರ್ನಾಟಕ ಶಾಸ್ತ್ರೀಯ ಸಂಗೀತ, ಸುಗಮ ಸಂಗೀತದಲ್ಲೂ ಪರಿಶ್ರಮಿಸಿರುವ ಸ್ಮಿತಾ ಉತಮ ಯೋಗ ಪಟು ಕೂಡ.

# ಬಹುಮುಖ ಪ್ರತಿಭೆ ಸ್ಮಿತಾ ರಾಮಣ್ಣ ರಂಗಪ್ರವೇಶ

ಭರತನಾಟ್ಯ ಕಲಾವಿದೆಯರಲ್ಲಿ ತಮ್ಮದೇ ಆದ ಅಸ್ಮಿತೆಯನ್ನು ಸಾಬೀತುಗೊಳಿಸಿರುವ ಅಪೂರ್ವ ನೃತ್ಯಕಲಾವಿದೆ- ಆಚಾರ್ಯರು ಮತ್ತು ಸುಮನೋಹರ ನೃತ್ಯ ಸಂಯೋಜನೆಗಳಿಗೆ ಹೆಸರಾದ ವಿದುಷಿ. ಭಾನು ಪ್ರಿಯಾ ರಾಕೇಶ್ ಇವರ ಸ್ಥಾನ ನೃತ್ಯ ಜಗತ್ತಿನಲ್ಲಿ ವಿಶಿಷ್ಟವಾದದ್ದು. ಬದ್ಧತೆಗೆ ಹೆಸರಾದ – ಪರಿಪೂರ್ಣ ಕಲಾವಿದೆಯಾಗಿ , ನೂರಾರು ನೃತ್ಯಾಕಾಂಕ್ಷಿಗಳಿಗೆ ಕಾಯಾ–ವಾಚಾ– ಮನಸಾ ವಿದ್ಯಾಧಾರೆ ಎರೆಯುತ್ತಿರುವ ಭಾನುಪ್ರಿಯ ಯಾವಾಗಲೂ ಹೊಸತನಕ್ಕೆ ತುಡಿಯುವವರು, ಪ್ರಯೋಗಾಕಾಂಕ್ಷಿ. ಬೆಂಗಳೂರಿನ ಜೆ.ಪಿ. ನಗರದಲ್ಲಿ ಕಲಾತ್ಮಕ ಚಟುವಟಿಕೆಗಳಿಗಾಗಿಯೇ ಅವರೇ ನಿರ್ಮಿಸಿದ ಅರ್ಕಾ ಥಿಯೇಟರ್ ಮತ್ತು ಆಡಿಟೋರಿಯಂ ಇವರ ಇತ್ತೀಚಿನ ಅನುಪಮ ಕೊಡುಗೆ. ಉತ್ತಮ





ಚಾರ್ಟೆಡ್ ಅಕೌಂಟೆಂಟ್ ಆಗಿಯೂ ಹೆಸರಾಂತರಾಗಿರುವ ಭಾನುಪ್ರಿಯ ಅವರ ನುರಿತ ಗರಡಿಯಲ್ಲಿ ರೂಹು ತಳೆದ ಕಲಾಶಿಲ್ಪ ಕು. ಸ್ಮಿತಾ ರಾಮಣ್ಣ ಬಹುಮುಖ ಪ್ರತಿಭೆ. ಕಳೆದ ಕೆಲವು ವರ್ಷಗಳಿಂದ ಕು. ಸ್ಮಿತಾ, ಇವರಿಂದ ಪರಿಣತ ನಾಟ್ಯ ಶಿಕ್ಷಣ ಪಡೆಯುತ್ತಾ ತಮ್ಮ ನೃತ್ಯ ನೈಪುಣ್ಯದ ವಿವಿಧ ಆಯಾಮಗಳನ್ನು ಗರಿಗೊಳಿಸಿ ಕೊಳ್ಳುತ್ತ ವಿಶೇಷವಾಗಿ ಅಭಿನಯದಲ್ಲಿ ಪ್ರಾವೀಣ್ಯ ಪಡೆಯುವತ್ತ ಶ್ರಮಿಸುತ್ತಿದ್ದಾರೆ. ಕರ್ನಾಟಕ ಶಾಸ್ತ್ರೀಯ ಸಂಗೀತ, ಸುಗಮ ಸಂಗೀತದಲ್ಲೂ ಪರಿಶ್ರಮಿಸಿರುವ ಸ್ಮಿತಾ ಉತಮ ಯೋಗ ಪಟು ಕೂಡ. ಸ್ಮಿತಾ, ಸ್ವತಃ ಕೆಲವು ಮಕ್ಕಳಿಗೆ ನೃತ್ಯ ಶಿಕ್ಷಣ ನೀಡುವ ಗುರುವಾಗಿದ್ದಾರಲ್ಲದೆ, ದೇಶದಾದ್ಯಂತವಲ್ಲದೆ, ವಿದೇಶದಲ್ಲೂ ಅನೇಕ ನೃತ್ಯ ಪ್ರದರ್ಶನಗಳನ್ನು ನೀಡಿದ್ದು, ಇದುವರೆಗೂ ಒಟ್ಟೂ 250 ಕ್ಕೂ ಹೆಚ್ಚು ಕಾರ್ಯ ಕ್ರಮಗಳನ್ನು ಪ್ರಸ್ತುತಪಡಿಸಿದ ಹೆಮ್ಮೆ ಇವರದು.



ಹೈದರಾಬಾದ್ ಮತ್ತು ಸುತ್ತಮುತ್ತಲ ಪ್ರದೇಶಗಳಲ್ಲಿ ತೆಲುಗು ಮತ್ತು ಇಂಗ್ಲೀಷ್ ಭಾಷೆಯ ಅನೇಕ ನಾಟಕಗಳಲ್ಲಿ ಪಾಲ್ಗೊಂಡಿರುವ ಇವರು ಕೆಲವು ಕಿರುಚಿತ್ರಗಳಲ್ಲೂ ಅಭಿನಯಿಸಿದ ಅಗ್ಗಳಿಕೆ. ಹೀಗೆ ನೃತ್ಯ ಕ್ಷೇತ್ರ – ರಂಗಭೂಮಿ ಕ್ಷೇತ್ರಗಳಲ್ಲಿ ಅನುಭವ ಹೊಂದಿರುವ ಸ್ಮಿತಾ, ಇದೀಗ ತನ್ನ ನೃತ್ಯ ಪ್ರತಿಭಾ ಪ್ರದರ್ಶನವನ್ನು ಪ್ರೇಕ್ಷಕರ ಮುಂದೆ 'ಮಾರ್ಗಂ' ಸಂಪ್ರದಾಯದಲ್ಲಿ ಪ್ರಸ್ತುತ ಪಡಿಸಲು ದಿ. 12 ಭಾನುವಾರ ಸಂಜೆ 5.30 ಕ್ಕೆ ಕೋಣನಕುಂಟೆಯ ಬಳಿ ಇರುವ 'ಮೀನಾಕ್ಷಿ ರಂಗಮಂಚ ಆಡಿಟೋರಿಯಂ'ನಲ್ಲಿ ವಿದ್ಯುಕ್ತವಾಗಿ ಭರತನಾಟ್ಯ ರಂಗಪ್ರವೇಶ ಮಾಡುತ್ತಿದ್ದಾಳೆ.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy